


# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 | Issue: 260 | ₹ ಬೆಲೆ: 4 | Saturday, 09, December,2023 | newsbelagavi@gmail.com | 9900332089 | Regn,No:G-2/PMG/KA/NK/BM/139/2021-23


## ಜಲ ಜೀವನ್ ಮಿಷನ್ ಅಡಿ 46.98 ಲಕ್ಷ ಮನೆಗಳಿಗೆ ನಳ ಸಂಪರ್ಕ: ಸಚಿವ ಪ್ರಿಯಾಂಕ ಖರ್ಗೆ



ಬೆಳಗಾವಿ ಸುವರ್ಣ ಸೌಧ: ರಾಜ್ಯದಲ್ಲಿ ಜಲ ಜೀವನ್ ಮಿಷನ್ ಯೋಜನೆಯಡಿ ಈವರೆಗೆ 46.98 ಲಕ್ಷ ಮನೆಗಳಿಗೆ ಕಾರ್ಯಾತ್ಮಕ ನಳ ಸಂಪರ್ಕ ಕಲ್ಪಿಸಲಾಗಿದೆ. 71.50 ಲಕ್ಷ ಗ್ರಾಮೀಣ ಮನೆಗಳಿಗೆ ಕುಡಿಯುವ ನೀರಿನ ವ್ಯವಸ್ಥೆಯನ್ನು ನೀಡಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದರು.

ಶುಕ್ರವಾರ ಬೆಳಗಾವಿ ಅಧಿವೇಶನದಲ್ಲಿ ವಿಧಾನಪರಿಷತ್‌ನ ಪ್ರಶ್ನೋತ್ತರ ಕಲಾಪದಲ್ಲಿ ಸದಸ್ಯ ಕೇಶವ ಪ್ರಸಾದ್ ಎಸ್ ಅವರ ಚುಕ್ಕೆ ಗುರುತಿನಢ ಪ್ರಶ್ನೆಗೆ ಉತ್ತರಿಸಿದರು.

ರಾಜ್ಯದಲ್ಲಿ ಒಟ್ಟು 101.17 ಲಕ್ಷ ಗ್ರಾಮೀಣ ಮನೆಗಳಿವೆ. ಜಲ ಜೀವನ್ ಮಿಷನ್ ಯೋಜನೆಯಡಿ ಈವರೆಗೆ 71.50 ಲಕ್ಷ ಗ್ರಾಮೀಣ ಮನೆಗಳಿಗೆ ಕುಡಿಯುವ ನೀರಿನ ವ್ಯವಸ್ಥೆಯನ್ನು ಒದಗಿಸಲಾಗಿದೆ. ಈ ಯೋಜನೆಗೆ ಈವರೆಗೆ ಕೇಂದ್ರ ಸರ್ಕಾರ ರೂ.6918.31 ಕೋಟಿ ಹಾಗೂ ರಾಜ್ಯ ಸರ್ಕಾರ ರೂ.9226.09 ಕೋಟಿ ಅನುದಾನ ಬಿಡುಗಡೆ ಮಾಡಿದೆ ಎಂದು ತಿಳಿಸಿದರು.

ಜಲ ಜೀವನ್ ಮಿಷನ್ ಕಾರ್ಯಕ್ರಮದಡಿಯಲ್ಲಿ ಸುಸ್ಥಿರ ಜಲಮೂಲವನ್ನು ಆಧರಿಸಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಸದರಿ ಯೋಜನೆಯ ಕಳಪೆ ಕಾಮಗಾರಿಗಳ ದೂರುಗಳನ್ನು ಪರಿಗಣಿಸಿ, ಈ ಕಾಮಗಾರಿಗಳನ್ನು 3ನೇ ವ್ಯಕ್ತಿ ತಪಾಸಣಾ ಸಂಸ್ಥೆಯಿಂದ ಪರಿಶೀಲಿಸಲು ತೀರ್ಮಾನಿಸಲಾಗಿದೆ. ಅದರಂತೆ ಮೆ॥ ಬ್ಯೂರೋ ವೆರಿಟಿಸ್ (ಇಂ) ಸಂಸ್ಥೆಯಿಂದ 3 ನೇ ವ್ಯಕ್ತಿ ತಪಾಸಣೆಯನ್ನು ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಕೇಂದ್ರ ಸರ್ಕಾರವು ಜಲ ಜೀವನ್ ಮಿಷನ್ ಯೋಜನೆಗಾಗಿ ಬಿಡುಗಡೆ ಮಾಡಿರುವ ಅನುದಾನದ ಪೈಕಿ ಅಕ್ಟೋಬರ್–23 ರ ಅಂತ್ಯಕ್ಕೆ ರೂ.764.69 ಕೋಟಿಗಳ ಅನುದಾನ ಬಾಕಿ ಇರುತ್ತದೆ. ಸದರಿ ಅನುದಾನವನ್ನು ವಿಭಾಗಗಳ ಕೋರಿಕೆಯಂತೆ ಬಿಡುಗಡೆ ಮಾಡಿ ವೆಚ್ಚ ಭರಿಸಲು ಕ್ರಮವಹಿಸಲಾಗಿದೆ. ಯೋಜನೆಯನ್ನು ಪೂರ್ಣಗೊಳಿಸಲು ಕಾಲ ಕಾಲಕ್ಕೆ ಪ್ರಗತಿ ಪರಿಶೀಲನಾ ಸಭೆಗಳನ್ನು ಆಯೋಜಿಸಿ ಕಾಮಗಾರಿಗಳ ಪ್ರಗತಿಯ ಹಂತವನ್ನು ಮೇಲ್ವಿಚಾರಣೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

# ಸುವರ್ಣಸೌಧದ ಅಂಗಳದಲ್ಲಿ ಡಿ.12 ರಂದು ಕರ್ನಾಟಕ ಸಂಭ್ರಮದ ವಿಶೇಷ ಕಾರ್ಯಕ್ರಮ

ಬೆಳಗಾವಿ ಸುವರ್ಣವಿಧಾನಸೌಧ: ಮೈಸೂರ ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣವಾಗಿ 2023ಕ್ಕೆ 50 ವರ್ಷಗಳು ತುಂಬುತ್ತಿರುವ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಈಗಾಗಲೇ ವಿವಿಧ ಕಾರ್ಯಕ್ರಮಗಳು ನಡೆಯುತಿದ್ದು, ಅದರಂತೆ ಬೆಳಗಾವಿಯ ಸುವರ್ಣಸೌಧದ ಆವರಣದಲ್ಲಿ ಸಹ ಡಿಸೆಂಬರ್ 12ರಂದು ಸಂಜೆ 6 ಗಂಟೆಗೆ ಕರ್ನಾಟಕ ಸಂಭ್ರಮ–50ರ ವಿಶೇಷ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ವಿಧಾನಸಭೆಯ ಅಧ್ಯಕ್ಷರಾದ ಯು.ಟಿ.ಖಾದರ್ ಅವರು ಹೇಳಿದರು.

ಸುವರ್ಣವಿಧಾನಸೌಧದಲ್ಲಿ ಡಿಸೆಂಬರ್ 8ರಂದು ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ಈ ಕಾರ್ಯಕ್ರಮದ ಬಗ್ಗೆ ಈಗಾಗಲೇ ಮುಖ್ಯಮಂತ್ರಿಗಳು ಮತ್ತು ಉಪ ಮುಖ್ಯಮಂತ್ರಿಗಳಿಗೆ ತಿಳಿಸಿದ್ದು ಕಾರ್ಯಕ್ರಮದ ಸಿದ್ಧತೆಯು ಭರ್ಜರಿಯಾಗಿ ನಡೆದಿದೆ. ಅಂದು 1 ಗಂಟೆ ವೇದಿಕೆ ಕಾರ್ಯಕ್ರಮ ಮತ್ತು 2 ಗಂಟೆಗಳ ಕಾಲ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ ಎಂದು ಅವರು ತಿಳಿಸಿದರು.

ಅಂದಿನ ಕಾರ್ಯಕ್ರಮದಲ್ಲಿ ರಾಜ್ಯಪಾಲರು, ಮುಖ್ಯಮಂತ್ರಿಗಳು, ಉಪ ಮುಖ್ಯಮಂತ್ರಿಗಳು ಸೇರಿದಂತೆ ಸಚಿವ ಸಂಪುಟದ ಎಲ್ಲ ಸದಸ್ಯರು, ಶಾಸಕರು, ವಿಧಾನ ಪರಿಷತ್ ಸದಸ್ಯರು ಹಾಗೂ ಎಲ್ಲ ಗಣ್ಯರು ಉಪಸ್ಥಿತರಿರುವರು. ಈ ಕಾರ್ಯಕ್ರಮದಲ್ಲಿ ವಿಧಾನ ಮಂಡಲದ ಹಿಂದಿನ ಎಲ್ಲ ವಿಧಾನಸಭೆಯ ಅಧ್ಯಕ್ಷರು ಹಾಗೂ ವಿಧಾನ ಪರಿಷತ್ತನ ಸಭಾಪತಿಗಳನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಿ ಸನ್ಮಾನಿಸಲು ಯೋಜಿಸಲಾಗಿದೆ ಎಂದು ತಿಳಿಸಿದರು.



ನಾಡಿನಾದ್ಯಂತ ಹೆಸರು ಮಾಡಿದ, ಮೂಡುಬಿದಿರೆಯಲ್ಲಿ ಪ್ರತಿ ಬಾರಿ ನಡೆಯುವ ಆಳ್ವಾಸ ವಿರಾಸತ್ ಮತ್ತು ಆಳ್ವಾಸ ನುಡಿಸಿರಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಡಿಸೆಂಬರ್ 12ರಂದು ಸುವರ್ಣ ವಿಧಾನಸೌಧದ ಅಂಗಳದಲ್ಲಿ ಆಯೋಜಿಸಿ ಉತ್ತರ ಕರ್ನಾಟಕ ಭಾಗದ ಜನತೆಗೆ ದಕ್ಷಿಣ ಕರ್ನಾಟಕ ಭಾಗದ ಸಾಂಸ್ಕೃತಿಕ ಕಾರ್ಯಕ್ರಮಗಳ ವೀಕ್ಷಣೆಗೆ ವಿಶೇಷ ಅವಕಾಶ ಕಲ್ಪಿಸಲಾಗಿದೆ.

ಈ ಕಾರ್ಯಕ್ರಮಕ್ಕೆ ಬೆಳಗಾವಿ ಜಿಲ್ಲೆ ಸೇರಿದಂತೆ ಈ ಭಾಗದ ಎಲ್ಲಾ ಜಿಲ್ಲೆಗಳ ಸಾರ್ವಜನಿಕರಿಗೆ ಮುಕ್ತ ಆಹ್ವಾನ ನೀಡಲಾಗಿದೆ. ವಿದ್ಯಾರ್ಥಿ ಯುವಜನರು, ಮಹಿಳೆಯರು, ಮಕ್ಕಳು, ನೌಕರರು ಸೇರಿದಂತೆ ಎಲ್ಲಾ ಸಾರ್ವಜನಿಕರಿಗೆ ಕಾರ್ಯಕ್ರಮಕ್ಕೆ ಸೂಕ್ತ ಸಾರಿಗೆ ವ್ಯವಸ್ಥೆ ಮತ್ತು ಊಟದ ವ್ಯವಸ್ಥೆ ಮಾಡಲಾಗುವುದು ಎಂದು ಅವರು ತಿಳಿಸಿದರು.

ಸುವರ್ಣ ವಿಧಾನಸೌಧವು ಉತ್ತರ ಕರ್ನಾಟಕ ಭಾಗದ ಜನರ ಸ್ವಾಭಿಮಾನದ ಸಂಕೇತವಾಗಿದೆ. ಈ ಸೌಧದ ನಿರ್ಮಾಣದಿಂದ ಈ ಭಾಗದ ಎಷ್ಟೋ ಸಮಸ್ಯೆಗಳಿಗೆ ಪರಿಹಾರ ದೊರೆಕಿದೆ. ಈ ಭಾಗದ ಅನೇಕ ಸಮಸ್ಯೆಗಳ ಮೇಲೆ ಬೆಳಕು ಚೆಲ್ಲಲು ಸಾಧ್ಯವಾಗಿದೆ. ಸಾರ್ವಜನಿಕರ ಒತ್ತಾಸೆಯಂತೆ ಸುವರ್ಣ ವಿಧಾನಸೌಧದ ಪೂರ್ಣ ಬಳಕೆಯ ಬಗ್ಗೆ ಮುಖ್ಯಮಂತ್ರಿಗಳು ಮತ್ತು ಉಪ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಕಾರ್ಯಯೋಜನೆ ರೂಪಿಸಲಾಗುವುದು ಎಂದು ಅವರು ಪತ್ರಕರ್ತರ ಪ್ರಶ್ನೆಗೆ ಪ್ರತಿಕ್ರಿಯಿಸಿದರು.

ಹೊಸ ಪರಂಪರೆ: ವಾಡಿಕೆಯಂತೆ ಬೆಳಗಾವಿಯಲ್ಲಿ ವಿಧಾನಮಂಡಲ ಅಧಿವೇಶನ ನಡೆಯುತ್ತಿರುವ ಈ ಸಂದರ್ಭದಲ್ಲಿ ಈ ಭಾರಿಯ ಅಧಿವೇಶನದ ವಿಶೇಷತೆಯಾಗಿ ಕರ್ನಾಟಕ ಸಂಭ್ರಮ–50ರ ಕಾರ್ಯಕ್ರಮ ರೂಪಿಸಲು ನಿರ್ಧರಿಸಿದ್ದೇವೆ. ಅಧಿವೇಶನ ಸಂದರ್ಭದಲ್ಲಿ ನಾಡುನುಡಿಗೆ ಸಂಬಂಧಿಸಿದ ಕಾರ್ಯಕ್ರಮ ರೂಪಿಸುತ್ತಿರುವುದು ಹೊಸ ಪರಂಪರೆಯಾಗಿದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಇದೆ ವೇಳೆ ತಿಳಿಸಿದರು.

ನಾಡುನುಡಿಯ ಅಭಿಮಾನದ ಈ ಕಾರ್ಯಕ್ರಮಕ್ಕೆ ಸರ್ವ ಶಾಸಕರಿಗೂ ಆಹ್ವಾನ ನೀಡಿದ್ದೇವೆ. ಎಲ್ಲ ಗಣ್ಯಮಾನ್ಯರಿಗೂ ಸರ್ವ ಜನರಿಗೂ ಈ ಮೂಲಕ ಆಹ್ವಾನ ನೀಡುತ್ತಿದ್ದೇವೆ ಎಂದು ಅವರು ತಿಳಿಸಿದರು. ಅಂದು ನಡೆಯುವ ಕಾರ್ಯಕ್ರಮದಲ್ಲಿ 350ಕ್ಕೂ ಹೆಚ್ಚು ಜನ ಕಲಾವಿದರು ಭಾಗಿಯಾಗಲಿದ್ದು ಉತ್ತರ ಕರ್ನಾಟಕ ಭಾಗದ ಜನರು ಈ ಕಾರ್ಯಕ್ರಮಕ್ಕೆ ಆಗಮಿಸಿ ಸಾಂಸ್ಕೃತಿಕ ಕಾರ್ಯಕ್ರಮಗಳ ಸವಿಯನ್ನು ಸವಿಯಲು ಅವಕಾಶ ಕಲ್ಪಿಸಲಾಗಿದೆ ಎಂದರು.

ಈ ಭಾರಿಯ ಅಧಿವೇಶನದಲ್ಲಿ ಹೋರಾಟಗಳ ಸಂಖ್ಯೆ ಕಡಿಮೆಯಾಗಿದೆ. ಡಿಸೆಂಬರ್ 4ರಿಂದ ನಡೆದ ಕಲಾಪಗಳಲ್ಲಿ ವಿವಿಧ ವಿಷಯಗಳ ಮೇಲೆ ಆರೋಗ್ಯಕರ ಚರ್ಚೆಯಾಗಿದೆ ಎಂದು ಹೊರಟ್ಟಿ ಅವರು ತಿಳಿಸಿದರು.

## ಪ್ಯಾರೀಸ್ ಒಲಂಪಿಕ್ಸ್: ಅಮೃತ ಕ್ರೀಡಾ ದತ್ತು ಯೋಜನೆಯಡಿ ರಾಜ್ಯದ 75 ಕ್ರೀಡಾಪಟುಗಳ ಆಯ್ಕೆ: ಸಚಿವ ಬಿ.ನಾಗೇಂದ್ರ



ಬೆಳಗಾವಿ ಸುವರ್ಣವಿಧಾನಸೌಧ: ಮುಂದಿನ ವರ್ಷ ಪ್ಯಾರೀಸ್ ನಲ್ಲಿ ನಡೆಯುವ ಒಲಂಪಿಕ್ಸ್ ನಲ್ಲಿ ಪದಕ ವಿಜೇತ ಸಾಮರ್ಥ್ಯವುಳ್ಳ ಪ್ಯಾರಾ ಕ್ರೀಡಾಪಟುಗಳನ್ನೊಳಗೊಂಡಂತೆ 75 ಕ್ರೀಡಾಪಟುಗಳನ್ನು ರಾಜ್ಯದಲ್ಲಿ ಅಮೃತ ಕ್ರೀಡಾ ದತ್ತು ಯೋಜನೆಯಡಿ ಆಯ್ಕೆ ಮಾಡಲಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವ ಬಿ.ನಾಗೇಂದ್ರ ತಿಳಿಸಿದರು.

ಅವರು ವಿಧಾನಪರಿಷತ್‌ನಲ್ಲಿ ಸದಸ್ಯ ಎಸ್.ರುದ್ರೇಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆ 566 (562)ಕ್ಕೆ ಉತ್ತರಿಸಿದರು.

ಪ್ಯಾರೀಸ್‌ನಲ್ಲಿ ನಡೆಯುವ ಒಲಂಪಿಕ್ಸ್ ನಲ್ಲಿ ಭಾಗವಹಿಸಲು ಸಹಾಯವಾಗುವಂತೆ ರಾಜ್ಯದ ಕ್ರೀಡಾಪಟುಗಳಿಗೆ 2021–22 ನೇ ಸಾಲಿನಿಂದ ಅಮೃತ ಕ್ರೀಡಾ ದತ್ತು ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ.

ಒಲಂಪಿಕ್ಸ್ ಸೇರಿದಂತೆ ಅಂತಾರಾಷ್ಟ್ರಿಯ ಮಟ್ಟದಲ್ಲಿ ಸಾಧನೆ ಮಾಡುವ ಸಾಮರ್ಥ್ಯ ಹೊಂದಿರುವ ಪ್ರತಿಭಾವಂತ ಕ್ರೀಡಾಪಟುಗಳನ್ನು ಗುರುತಿಸಿ, ಪೋಷಿಸಿ, ಸಾಧನೆಗೆ ಅಗತ್ಯವಾದ ಬೆಂಬಲ ವ್ಯವಸ್ಥೆ ನೀಡುವುದು ಈ ಯೋಜನೆಯ ಗುರಿಯಾಗಿದೆ.

ಈ ಯೋಜನೆಯ ಫಲಾನುಭವಿಗಳಿಗೆ ತರಬೇತಿಗಾಗಿ,ಕ್ರೀಡಾ ವಿಜ್ಞಾನದ ಬೆಂಬಲ, ಪೌಷ್ಟಿಕ ಆಹಾರಕ್ಕಾಗಿ, ತರಬೇತಿಗೆ ಅಗತ್ಯವಿರುವ ಕ್ರೀಡಾ ಕಿಟ್ ಖರೀದಿಸಲು, ರಾಷ್ಟ್ರೊಥಯ ಕ್ರೀಡಾಕೂಟಗಳಲ್ಲಿ ಭಾಗವಹಿಸಲು, ದೈನಂದಿನ ಅಗತ್ಯಗಾಗಿ ಮತ್ತು ಇತರೆ ವೆಚ್ಚಗಳಿಗಾಗಿ ತಲಾ ರೂ 10 ಲಕ್ಷ ವಾರ್ಷಿಕ ಗರಿಷ್ಠ ಪ್ರೋತ್ಸಾಹ ಧನ ನೀಡಲಾಗುತ್ತಿದೆ ಎಂದು ತಿಳಿಸಿದರು.



## ಪ್ರತಿಭಟನೆ: ಲಾಠಿ ಚಾರ್ಜ್

### ಇಬ್ಬರು ಮಕ್ಕಳಿಗೆ ಗಂಭೀರ ಗಾಯ

ಬೆಳಗಾವಿ: ಭೂಮಿ ಉಳಿವಿಗಾಗಿ ಆಗ್ರಹಿಸಿ ಕಿತ್ತೂರು ಕಲವಳ್ಳಿ ಗ್ರಾಮ ಪಂಚಾಯತ್ ವ್ಯಾಪ್ತಿಯ 9 ಗ್ರಾಮಗಳ ರೈತರು ಕಿತ್ತೂರು ಚನ್ನಮ್ಮ ವೃತ್ತದಲ್ಲಿ ಪ್ರತಿಭಟನೆ ತೀವ್ರಗೊಳಿಸಿದ್ದು, ರೈತರ ಮೇಲೆ ಪೊಲೀಸರು ಲಾಠಿ ಚಾರ್ಜ್ ನಡೆಸಿದ್ದಾರೆ. ಊಳುವವನೇ ಭೂಮಿಯ ಒಡೆಯ ಯೋಜನೆಯಡಿ ಭೂಮಿ ಪಡೆದಿದ್ದ ರೈತರು ಜಮೀನು ಹಕ್ಕು ಪತ್ರಕ್ಕಾಗಿ ಆಗ್ರಹಿಸಿ ಕಿತ್ತೂರು ಚನ್ನಮ್ಮ ವೃತ್ತದಲ್ಲಿ ಕುಟುಂಬ ಹಾಗೂ ದನಕರುಗಳ ಸಮೇತ ಪ್ರತಿಭಟನೆ ನಡೆಸಿದ್ದಾರೆ. ಪ್ರತಿಭಟನೆಯಲ್ಲಿ ವಿದ್ಯಾರ್ಥಿಗಳು, ಮಹಿಳೆಯರು, ಮಕ್ಕಳು ಪಾಲ್ಗೊಂಡಿದ್ದಾರೆ. ಪ್ರತಿಭಟನಾ ಸ್ಥಳಕ್ಕೆ ಕಂದಾಯ ಸಚಿವರು ಬರುವಂತೆ ಪ್ರತಿಭಟನಾಕಾರರು ಪಟ್ಟು ಹಿಡಿದಿದ್ದು, ರಸ್ತೆ ತಡೆ ನಡೆಸಿದ್ದಾರೆ. ಈ ವೇಳೆ ಪೊಲೀಸರು ರೈತರ ಹಾಗೂ ವಿದ್ಯಾರ್ಥಿಗಳ ಮನವೊಲಿಸಲು ಯತ್ನಿಸಿದ್ದಾರೆ. ಆದರೆ ರೈತರು ಹಾಗೂ ವಿದ್ಯಾರ್ಥಿಗಳು ಪೊಲೀಸರ ಮಾತು ಕೇಳದೇ ಧರಣಿ ಮುಂದುವರೆಸಿದ್ದಾರೆ.

ಪ್ರತಿಭಟನೆ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದ್ದಂತೆ ಪೊಲೀಸರು ಪ್ರತಿಭಟನಾಕರರ ಮೇಲೆ ಲಾಠಿ ಚಾರ್ಜ್ ನಡೆಸಿದ್ದಾರೆ. ಈ ವೇಳೆ ಇಬ್ಬರು ವಿದ್ಯಾರ್ಥಿಗಳು ಲಾಠಿ ಏಟಿಗೆ ಗಂಭೀರವಾಗಿ ಗಾಯಗೊಂಡಿದ್ದು, ಆಸ್ಪತ್ರೆಗೆ ದಾಖಲಿಸಲಾಗಿದೆ.

3ನೇ ಪುಟಕ್ಕೆ

## ಮೋಡ ಬಿತ್ತನೆ ವಿಚಾರವಾಗಿ ಆರ್ಥಿಕ ಇಲಾಖೆ ಜೊತೆ ಚರ್ಚೆ ಮಾಡಿ ತೀರ್ಮಾನ: ಡಿಸಿಎಂ ಡಿ.ಕೆ. ಶಿವಕುಮಾರ್

ಬೆಳಗಾವಿ: "ರಾಜ್ಯದಲ್ಲಿ ಬರಗಾಲ ಹಿನ್ನೆಲೆಯಲ್ಲಿ ಮೋಡಬಿತ್ತನೆ ಮಾಡುವ ಬಗ್ಗೆ ನಾನು ಸಕಾರಾತ್ಮಕ ಭಾವನೆ ಹೊಂದಿದ್ದು, ಈ ವಿಚಾರವಾಗಿ ಆರ್ಥಿಕ ಇಲಾಖೆ ಅಧಿಕಾರಿಗಳ ಜೊತೆ ಚರ್ಚೆ ಮಾಡಿ ತೀರ್ಮಾನ ಮಾಡುತ್ತೇವೆ" ಎಂದು ತಿಳಿಸಿದರು.

ಚಳಿಗಾಲ ಅಧಿವೇಶನದ ವಿಧಾನಸಭೆಯ ಕಲಾಪದ ಶೂನ್ಯ ವೇಳೆಯಲ್ಲಿ ಕಾಂಗ್ರೆಸ್ ಶಾಸಕ ಪ್ರಕಾಶ್ ಕೋಳಿವಾಡ್ ಅವರು 'ಬರಗಾಲದ ಪರಿಸ್ಥಿತಿಯಲ್ಲಿ ತುಂಗಭದ್ರಾ ಆಣೆಕಟ್ಟಿನ ಕೆಳಭಾಗದ ರೈತರ ಬೆಳೆ ನೀರು ಒದಗಿಸಬೇಕಿದೆ. ಈ ವಿಚಾರವಾಗಿ ಸಚಿವ ತಂಗಡಗಿ ಅವರಿಗೆ ಮನವಿ ಸಲ್ಲಿಸಿದಾಗ, ಆಣೆಕಟ್ಟಿನ ಒಳಹರಿವು ಹೆಚ್ಚಾದರೆ ನೀರು ಬಿಡುವುದಾಗಿ ಅವರು ಹೇಳಿದರು. ನಾನು ಹವಾಮಾನ ಇಲಾಖೆ ಹಾಗೂ ಇತರೆ ವಿಜ್ಞಾನಿಗಳ ಜತೆ ಚರ್ಚೆ ಮಾಡಿದ್ದು, ಮುಂದಿನ ನಾಲ್ಕು ದಿನಗಳಲ್ಲಿ ಉತ್ತಮ ಮೋಡಗಳಿದ್ದು, ಈ ಸಂದರ್ಭದಲ್ಲಿ ಮೋಡ ಬಿತ್ತನೆ ಮಾಡಿದರೆ ಉತ್ತಮ ಪ್ರಮಾಣದ ನೀರು



ಲಭ್ಯವಾಗಲಿದೆ ಎಂದು ತಿಳಿಸಿದ್ದಾರೆ. ಹೀಗಾಗಿ ಸರ್ಕಾರ ಕೂಡಲೇ ಮೋಡ ಬಿತ್ತನೆ ಮಾಡಬೇಕು ಎಂದು ಮನವಿ ಮಾಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ನೀರಾವರಿ ಸಚಿವರಾದ ಡಿ.ಕೆ. ಶಿವಕುಮಾರ್ ಅವರು ಹೇಳಿದ್ದಿಷ್ಟು:

ಮೋಡ ಬಿತ್ತನೆ ವಿಚಾರವಾಗಿ ಅನೇಕ ರಾಜ್ಯಗಳಲ್ಲಿ ಪ್ರಯೋಗ ಮಾಡಲಾಗುತ್ತಿದೆ. ನಮ್ಮ ರಾಜ್ಯದಲ್ಲಿ ಹೆಚ್.ಕೆ ಪಾಟೀಲ್ ಅವರು ಸಚಿವರಾಗಿದ್ದಾಗಲೂ ಈ ಪ್ರಯೋಗ ಮಾಡಲಾಗಿತ್ತು. ರಾಜ್ಯದಲ್ಲಿ ಬರ ಪರಿಸ್ಥಿತಿ ಇದೆ. ಶಾಸಕ ಪ್ರಕಾಶ್ ಅವರು ತಮ್ಮ ಜಿಲ್ಲೆಯಲ್ಲಿ ಉಚಿತವಾಗಿ ಈ ಪ್ರಯತ್ನ ಮಾಡಿದ್ದು, ಉತ್ತಮ ಫಲಿತಾಂಶ ಬಂದಿರುವ ಬಗ್ಗೆ ವರದಿ ಇದೆ. ಈಗ ಬೇರೆ ಕಡೆಗಳಲ್ಲೂ ಇದಕ್ಕೆ ತಗುಲುವ ವೆಚ್ಚದಲ್ಲಿ (ಕಾಸ್ಟ್ ಪ್ರೈಸ್) ಈ ಮೋಡ ಬಿತ್ತನೆ ಮಾಡಲು ತಾವು ಸಿದ್ಧ ಎಂದು ಹೇಳಿದ್ದಾರೆ.

ಈ ವಿಚಾರದಲ್ಲಿ ಟೆಂಡರ್ ಹಾಗೂ ಇತರೆ ಪ್ರಕ್ರಿಯೆಯ ತಾಂತ್ರಿಕ ವಿಚಾರಗಳನ್ನು ಪರಿಗಣಿಸಬೇಕಾಗುತ್ತದೆ. ಇಲ್ಲದಿದ್ದರೆ ವಿರೋಧ ಪಕ್ಷಗಳು ಇದನ್ನು ನಿಮ್ಮ ಶಾಸಕರಿಗೆ ನೀಡಿದ್ದೀರಿ ಎಂದು ಪ್ರಶ್ನೆ ಮಾಡುವ ಸಾಧ್ಯತೆ ಇದೆ. ಇದಕ್ಕೆ 50 ಲಕ್ಷದಿಂದ 1 ಕೋಟಿವರೆಗೂ ವೆಚ್ಚ ತಗುಲಬಹುದು. ಈ ಬಗ್ಗೆ ಆರ್ಥಿಕ ಇಲಾಖೆ ಜತೆ ಚರ್ಚೆ ಮಾಡುತ್ತೇನೆ. ಈ ವಿಚಾರವಾಗಿ ಮತ್ತೊಮ್ಮೆ ಪ್ರಯತ್ನ ಮಾಡುವುದರಲ್ಲಿ ತಪ್ಪಿಲ್ಲ. ಈ ಬಗ್ಗೆ ನಾನು ಸಕಾರಾತ್ಮಕ ಭಾವನೆ ಹೊಂದಿದ್ದೇನೆ" ಎಂದರು.

## ಲೋಕಸಭೆಯಿಂದ ಟಿಎಂಸಿ ಸಂಸದೆ ಉಚ್ಚಾಟನೆ




ನವದೆಹಲಿ: ಪ್ರಶ್ನೆಗಾಗಿ ನಗದು ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ಲೋಕಸಭೆಯಿಂದ ಟಿಎಂಸಿ ಸಂಸದೆ ಮಹುವಾ ಮೊಯಿತ್ರಾ ಅವರನ್ನು ಉಚ್ಚಾಟನೆ ಮಾಡಲಾಗಿದೆ.

ಸಂಸತ್ ನಲ್ಲಿ ಪ್ರಶ್ನೆ ಕೇಳಲು ಮಹುವಾ ಮೊಯಿತ್ರಾ ಹಣ ಪಡೆದಿದ್ದಾರೆ ಎಂಬ ಆರೋಪ ಕೇಳಿಬಂದಿತ್ತು. ಈ ನಿಟ್ಟಿನಲ್ಲಿ ನೈತಿಕ ಸಮಿತಿ ಇಂದು ಲೋಕಸಭೆಗೆ ವರದಿ ಸಲ್ಲಿಸಿತ್ತು. ಈ ವರದಿ ಆಧರಿಸಿ ಸಂಸದೆ ಮಹುವಾ ಮೊಯಿತ್ರಾ ಅವರನ್ನು ಲೋಕಸಭೆಯಿಂದ ಉಚ್ಚಾಟಿಸುವ ನಿರ್ಣಯ ಅಂಗೀಕರಿಸಲಾಯಿತು.

ಸಂಸದೆ ಮಹುವಾ ಮೊಯಿತ್ರಾ ಅವರನ್ನು ಉಚ್ಚಾಟಿಸಿದ ಕ್ರಮಕ್ಕೆ ವಿಪಕ್ಷ ಸಂಸದರು ಕೇಂದ್ರ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಲೋಕಸಭಾ ಕಲಾಪವನ್ನು ಬಹಿಷ್ಕರಿಸಿ ಹೊರ ನಡೆದರು.

ಈ ವೇಳೆ ಸಂಸತ್ ಭವನದ ಹೊರಗೆ ಸುದ್ದಿಗಾರರೊಂದಿಗೆ ಮಾತನಾಡಿದ ಮಹುವಾ ಮೊಯಿತ್ರಾ, ನಾನು ಲಂಚ ಪಡೆದ ಬಗ್ಗೆ ಯಾವುದೇ ಸಾಕ್ಷ್ಯಾಧಾರಗಳು ಸಾಬೀತಾಗಿಲ್ಲ. ನನಗೆ ಲೋಕಸಭೆಯಲ್ಲಿ ಮಾತನಾಡಲು ಅವಕಾಶಕೊಡದೇ ಏಕಪಕ್ಷಿಯವಾಗಿ ನ್ನಿರ್ಣಯ ಕೈಗೊಂಡು ಉಚ್ಚಾಟಿಸಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

## ಬಾಲಾಪರಾಧ ಕಾಯ್ದೆಯಡಿ 5 ವರ್ಷಗಳಲ್ಲಿ 381 ಪ್ರಕರಣ ದಾಖಲು: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್



ಬೆಳಗಾವಿ ಸುವರ್ಣ ಸೌಧ: ರಾಜ್ಯದಲ್ಲಿ ಕಳೆದ 5 ವರ್ಷಗಳಲ್ಲಿ ಬಾಲಾಪರಾಧ ಕಾಯ್ದೆ ಅಡಿಯಲ್ಲಿ ಗೃಹ ಇಲಾಖೆಯಲ್ಲಿ 381 ಪ್ರಕರಣಗಳು ದಾಖಲಾಗಿವೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದರು.

ಶುಕ್ರವಾರ ಬೆಳಗಾವಿ ಅಧಿವೇಶನದಲ್ಲಿ ವಿಧಾನಪರಿಷತ್‌ನ ಪ್ರಶ್ನೋತ್ತರ ಕಲಾಪದಲ್ಲಿ ಸದಸ್ಯ ಗೋವಿಂದ ರಾಜು ಅವರ ಚುಕ್ಕೆ ಗುರುತಿನಢ ಪ್ರಶ್ನೆಗೆ ಉತ್ತರಿಸಿದರು.

ಮಕ್ಕಳ ರಕ್ಷಣಾ ನಿರ್ದೇಶನಾಲಯದಿಂದ ಬಾಲ ನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ)ಕಾಯ್ದೆ 2015, ಮಾದರಿ ನಿಯಮಗಳು 2016 ರಡಿ ರಾಜ್ಯಾದ್ಯಂತ ರಚಿಸಲಾಗಿರುವ 33 ಬಾಲ ನ್ಯಾಯ ಮಂಡಳಿಗಳಲ್ಲಿ ಕಳೆದ 5 ವರ್ಷಗಳಲ್ಲಿ 9430 ಪ್ರಕರಣಗಳು ದಾಖಲಾಗಿವೆ.

ರಾಜ್ಯದಲ್ಲಿ 18 ವರ್ಷದೊಳಗಿನ ಯುವಕ ಯುವತಿಯರು ಮಾದಕ ವಸ್ತು ವ್ಯಸನಿಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಇದಕ್ಕಾಗಿ ಮಕ್ಕಳ ರಕ್ಷಣಾ ನಿರ್ದೇಶನಾಲಯದಿಂದ ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳ ಮೂಲಕ ಜಿಲ್ಲೆ, ತಾಲೂಕು ಹಾಗೂ ಪಂಚಾಯತ್ ವ್ಯಾಪ್ತಿಯಲ್ಲಿ ಪಾಲನೆ ಮತ್ತು ರಕ್ಷಣೆಗೆ ಅಗತ್ಯವಿರುವ ಮಕ್ಕಳಿಗೆ ಸರ್ಕಾರದಿಂದ ಜಾರಿಯಲ್ಲಿರುವ ಯೋಜನೆ/ಕಾರ್ಯಕ್ರಮಗಳು ಮತ್ತು ಮಕ್ಕಳ ರಕ್ಷಣೆಗಾಗಿ ಇರುವ ಕಾಯದೆ ಕಾನೂನುಗಳ ಬಗ್ಗೆ ಅರಿವು ಮೂಡಿಸುವುದರೊಂದಿಗೆ ಶಾಲಾ ಕಾಲೇಜು ಮಕ್ಕಳಿಗೆ ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ಕೇಂದ್ರ ಸರ್ಕಾರದ ಅನುದಾನದಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಒಟ್ಟು 32 ಮಾದಕ ವಸ್ತು ವ್ಯಸನಿಗಳ ಸಮಗ್ರ ಪುನರ್ವಸತಿ ಕೇಂದ್ರಗಳನ್ನು ನಡೆಸಲಾಗುತ್ತಿದೆ.

ಸದರಿ ಕೇಂದ್ರಗಳಲ್ಲಿ ಇಂತಹ ಯುವಕ ಯುವತಿಯರಿಗೆ ಸೂಕ್ತ ಸಮಾಲೋಚನೆ ಮತ್ತು ಔಷದೋಪಚಾರ ನೀಡುವ ಮೂಲಕ ದುಷ್ಚಟಗಳಿಂದ ಹೊರಬರಲು ಪ್ರೇರೇಪಿಸಲಾಗುತ್ತಿದೆ ಎಂದು ತಿಳಿಸಿದರು.

ಕೇಂದ್ರ ಸರ್ಕಾರದ ನಶಾ ಮುಕ್ತ ಭಾರತ ಅಭಿಯಾನ ಯೋಜನೆಯಡಿ ಮೊದಲ ಹಂತದಲ್ಲಿ 6 ಜಿಲ್ಲೆಗಳನ್ನು ಮತ್ತು 2 ನೇ ಹಂತದಲ್ಲಿ 21 ಜಿಲ್ಲೆಗಳನ್ನು 2023–24 ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲು ಕೇಂದ್ರ ಸರ್ಕಾರವು ಗುರುತಿಸಿದೆ. ಸದರಿ ಯೋಜನೆಯಡಿ ಶಾಲಾ ಕಾಲೇಜುಗಳಲ್ಲಿ ಸಮುದಯದಲ್ಲಿ ಮಾದಕ ವಸ್ತು ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಲಾಗುತ್ತಿದೆ. ಕೇಂದ್ರ ಸರ್ಕಾರದ ನ್ಯಾಷನಲ್ ಆಕ್ಷನ್ ಪ್ಲಾನ್ ಫಾರ್ ಡ್ರಗ್ ಡಿಮಾಂಡ್ ರಿಡಕ್ಷನ್ ಯೋಜನೆಯಡಿ ಜಿಲ್ಲಾ ಮತ್ತು ರಾಜ್ಯಮಟ್ಟದಲ್ಲಿ ಜಾಗೃತಿಗಾಗಿ ಕ್ರಿಯಾ ಯೋಜನೆಯನ್ನು ತಯಾರಿಸಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಿದ್ದು, ಕೇಂದ್ರ ಸರ್ಕಾರದ ಅನುಮೋದನೆಯನ್ನು ನಿರೀಕ್ಷಿಸಲಾಗಿದೆ ಎಂದು ತಿಳಿಸಿದರು.

## 10 ಹೂಡಿಕೆ ಯೋಜನೆಗಳಿಗೆ ರಾಜ್ಯ ಮಟ್ಟದ ಏಕಗವಾಕ್ಷಿ ಸಮಿತಿಯಲ್ಲಿ ಅನುಮೋದನೆ: ಸಚಿವ ಎಂ.ಬಿ.ಪಾಟೀಲ್

ಬೆಳಗಾವಿ ಸುವರ್ಣ ಸೌಧ: ಬೆಂಗಳೂರಿನ ಇನ್ವೆಸ್ಟ್ ಕರ್ನಾಟಕ ಹಾಗೂ ಹುಬ್ಬಳ್ಳಿ ಎಫ್.ಎಂ.ಸಿ.ಜಿ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ ಮಾಡಿಕೊಂಡ ಒಡಂಬಡಿಕೆಗಳ ಪೈಕಿ 10 ಯೋಜನೆಗಳಿಗೆ ರಾಜ್ಯ ಮಟ್ಟದ ಏಕಗವಾಕ್ಷಿ ಸಮಿತಿಯಲ್ಲಿ ಅನುಮೊದನೆ ನೀಡಲಾಗಿದೆ. ಇದರ ಪ್ರಕಾರ ಕಂಪನಿಗಳಿಗೆ ಉದ್ದಿಮೆ ಸ್ಥಾಪನೆಗೆ ಅಗತ್ಯವಾದ ಭೂಮಿ, ನೀರು, ವಿದ್ಯುತ್ ಪೂರೈಕೆ ಹಾಗೂ ಇತರೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುವುದು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವ ಎಂ.ಬಿ.ಪಾಟೀಲ್ ಹೇಳಿದರು.

ಶುಕ್ರವಾರ ಬೆಳಗಾವಿ ಸುವರ್ಣ ಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ, ವಿಧಾನ ಸಭೆಯ ಪ್ರಶ್ನೋತ್ತರ ಕಲಾಪದ ವೇಳೆ ಹೊಳಲ್ಕೆರೆ ಶಾಸಕ ಎಂ.ಚಂದ್ರಪ್ಪನವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿ ಮಾತನಾಡಿದರು.

ಬೆಂಗಳೂರಿನಲ್ಲಿ ಜರುಗಿದ ಇನ್ವೆಸ್ಟ್ ಕರ್ನಾಟಕ–2022 ಸಮಾವೇಶದಲ್ಲಿ 57 ಕಂಪನಿಗಳೊಂದಿಗೆ ರೂ.5.41 ಲಕ್ಷ ಕೋಟಿಗಳ



ಬಂಡವಾಳ ಹೂಡಿಕೆಗೆ ಒಡಂಬಡಿಕೆ ಮಾಡಿಕೊಳ್ಳಲಾಗಿದೆ. ಹುಬ್ಬಳ್ಳಿಯಲ್ಲಿ ಜರುಗಿದ ಎಫ್.ಎಂ.ಸಿ.ಜಿ ಬಂಡವಾಳ ಹೂಡಿಕೆದಾರ ಸಮಾವೇಶದಲ್ಲಿ 16 ಕಂಪನಿಗಳೊಂದಿಗೆ ರೂ.1.27 ಸಾವಿರ ಕೋಟಿ ಬಂಡವಾಳ ಹೂಡಿಕೆಗೆ ಒಡಂಬಡಿಕೆ ಮಾಡಿಕೊಳ್ಳಲಾಗಿದೆ. ಈ ಯೋಜನೆಗಳು ಬೃಹತ್ ಕೈಗಾರಿಕೆಗಳು ಆಗಿರುವುದರಿಂದ ಕೈಗಾರಿಕೆಗಳ ಸ್ಥಾಪನೆಗೆ ಕನಿಷ್ಠ 3 ರಿಂದ 4 ವರ್ಷ ಕಾಲಾವಕಾಶ ಬೇಕಾಗಿರುತ್ತದೆ. 5.41 ಲಕ್ಷ ಕೋಟಿ ಬಂಡವಾಳ ಹೂಡಿಕೆಯಲ್ಲಿ ವಿದ್ಯುತ್ ಹಾಗೂ ನವೀಕರಿಸಬಹುದಾದ ಇಂಧನಗಳ ಕ್ಷೇತ್ರದಲ್ಲಿ ಶೇ.38 ರಷ್ಟು ಬಂಡವಾಳ ಹೂಡಿಕೆಯಾಗಿದೆ ಎಂದರು.

ಇನ್ವೆಸ್ಟ್ ಕರ್ನಾಟಕ ಸಮಾವೇಶಕ್ಕೆ ಸುಮಾರು ರೂ.75 ಕೋಟಿ ಹಾಗೂ ಹುಬ್ಬಳ್ಳಿ ಎಫ್.ಎಂ.ಸಿ.ಜಿ ಸಮಾವೇಶಕ್ಕೆ ರೂ.12.23 ಲಕ್ಷ ವೆಚ್ಚವಾಗಿದೆ. ರಾಜ್ಯ ಸರ್ಕಾರದ 2020–25ರ ಕೈಗಾರಿಕಾ ನೀತಿ ಅಡಿ, ಕೈಗಾರಿಕೆ ಸ್ಥಾಪನೆಗೆ ಸರ್ಕಾರದ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ಪಡೆಯುವ ಕೈಗಾರಿಕೆಗಳು ಸರೋಜಿನಿ ಮಹಿಷಿ ವರದಿಯಂತೆ ಗ್ರೂಪ್ ಡಿ ವರ್ಗದಲ್ಲಿ ಕನ್ನಡಿಗರಿಗೆ ಶೇ.100 ರಷ್ಟು ಹಾಗೂ ಒಟ್ಟು ಉದ್ಯೋಗಗಳಲ್ಲಿ ಶೇ.70ರಷ್ಟು ಹುದ್ದೆಗಳನ್ನು ಕನ್ನಡಿಗರಿಗೆ ಕಲ್ಪಿಸಬೇಕು ಎಂದು ಸಚಿವ ಎಂ.ಬಿ.ಪಾಟೀಲ್ ಮಾಹಿತಿ ನೀಡಿದರು.

ಸಾರ್ವಜನಿಕರ ಹಣ ವ್ಯಯಮಾಡಿ ನಡೆಸುವ ಬಂಡವಾಳ ಹೂಡಿಕೆ ಸಮಾವೇಶಗಳು ವ್ಯರ್ಥ್ಯವಾಗಬಾರದು. ಕೈಗಾರಿಕೆಗಳು ಸ್ಥಾಪನೆ ಆಗಬೇಕು. ಹೀಗೆ ಸ್ಥಾಪಿಸಿದ ಕೈಗಾರಿಕೆಗಳು ಕನ್ನಡಿಗರಿಗೆ ಉದ್ಯೋಗ ಅವಕಾಶ ನೀಡಬೇಕು. ಈ ಹಿಂದೆ 1995ರಲ್ಲಿ ಅಂದಿನ ರಾಜ್ಯ ಸರ್ಕಾರ ಟಯೋಟಾ ಕಂಪನಿಯೊಂದಿಗೆ ಒಡಂಬಡಿಕೆ ಮಾಡಿಕೊಂಡು ಬಿಡಿದಿ ಬಳಿ 450 ಎಕರೆ ಜಮೀನು ನೀಡಿ, ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸಿತ್ತು. 18 ವರ್ಷಗಳ ತೆರಿಗೆಯನ್ನು ಕಂಪನಿ ಇಟ್ಟುಕೊಂಡು, ಪುನಃ ರಾಜ್ಯ ಸರ್ಕಾರಕ್ಕೆ ಸಂದಾಯ ಮಾಡುವ ಅವಕಾಶವನ್ನು ನೀಡಿತ್ತು. ಆದರೆ ಸರ್ಕಾರ ಕನ್ನಡಿಗರಿಗೆ ಉದ್ಯೋಗ ನೀಡಲು ವಿಧಿಸಿದ ಷರತ್ತನ್ನು ಕಂಪನಿ ಸರಿಯಾಗಿ ಅನುಷ್ಠಾನ ಮಾಡಲಿಲ್ಲ. ಈಗಲೂ ಕಂಪನಿ ರೂ.8 ಸಾವಿರ ಕೋಟಿಗೂ ಅಧಿಕ ತೆರಿಗೆ ಬಾಕಿ ಉಳಿಸಿಕೊಂಡಿದೆ. ರತ್ನಗಂಬಳಿ ಹಾಸಿ ಬೃಹತ್ ಕಂಪನಿಗಳನ್ನು ತಂದು ರಾಜ್ಯದ ಜನರಿಗೆ ಉಪಯೋಗವಾಗದಿದ್ದರೆ ಹೇಗೆ? ಸರ್ಕಾರ ಈ ಕುರಿತು ಸೂಕ್ತ ಕ್ರಮ ವಹಿಸಬೇಕು ಎಂದು ಶಾಸಕ ಎಂ.ಚಂದ್ರಪ್ಪ ಒತ್ತಾಯಿಸಿದರು.

ಟಯೋಟಾ ಕಂಪನಿಯೊಂದಿಗಿನ ಒಪ್ಪಂದ ಕುರಿತು ಸದ್ಯ ಮಾಹಿತಿ ಇಲ್ಲ. ಅಧಿಕಾರಿಗಳಿಂದ ಮಾಹಿತಿ ಪಡೆದು ಕ್ರಮ ಕೈಗೊಳ್ಳುತ್ತೇನೆ. ಇದೆ ಮಾದರಿ ಸವಲತ್ತು ಪಡೆದ ಎಲ್ಲಾ ಕೈಗಾರಿಕೆಗಳು ಸರ್ಕಾರದ ಆದೇಶಗಳನ್ನು ಪಾಲನೆ ಮಾಡುತ್ತಿವೆಯೇ ಎಂಬುದನ್ನು ಪರಿಶೀಲಿಸುವುದಾಗಿ ಸಚಿವ ಎಂ.ಬಿ.ಪಾಟೀಲ್ ಸದನದಲ್ಲಿ ಆಶ್ವಾಸನೆ ನೀಡಿದರು.

## ಪತ್ನಿಯನ್ನು ಮಾರಕಾಸ್ತ್ರಗಳಿಂದ ಕೊಚ್ಚಿ ಕೊಂದು ಪತಿ ಆತ್ಮಹತ್ಯೆಗೆ ಶರಣು

ಹುಬ್ಬಳ್ಳಿ: ಪತ್ನಿಯನ್ನು ಮಾರಕಾಸ್ತ್ರಗಳಿಂದ ಕೊಚ್ಚಿ ಬರ್ಬರವಾಗಿ ಹತ್ಯೆ ಮಾಡಿರುವ ಪತಿ ನಂತರ ಮನೆಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾನೆ.

ಹುಬ್ಬಳ್ಳಿಯ ಕಟಕರ ಓಣಿಯಲ್ಲಿ ಈ ಘಟನೆ ನಡೆದಿದ್ದು ಮಹಿಳೆ ಶಾಹಿಸ್ತಾಬಾನು ಬೇಪಾರಿ ಹತ್ಯೆಯಾದ ಗೃಹಿಣಿಯಾಗಿದ್ದಾಳೆ. ಇನ್ನು ಪತಿ ಮಲೀಕ್ ಬೇಪಾರಿ ಪತ್ನಿಯನ್ನು ಹತ್ಯೆ ಮಾಡಿದ ನಂತರ ಪತ್ನಿಯ ಸೀರೆಯಲ್ಲೇ




ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾನೆ.

ವಿಷಯ ತಿಳಿಯುತ್ತಿದ್ದಂತೆ ಘಟನಾ ಸ್ಥಳಕ್ಕೆ ಕಸಬಾಪೇಟೆ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸದ್ಯ ಕೊಲೆಗೆ ನಿಖರ ಕಾರಣ ತಿಳಿದುಬಂದಿಲ್ಲ.

## ದಸರಾ ಆನೆ ಅರ್ಜುನ ಸಾವು ಪ್ರಕರಣ: ಒತ್ತಡಕ್ಕೆ ಮಣಿದ ಸರ್ಕಾರ; ತನಿಖೆಗೆ ತಜ್ಞರ ಸಮಿತಿ ರಚನೆಗೆ ಮುಂದು

ಬೆಂಗಳೂರು: ಕಾಡಾನೆ ಸೆರೆ ಮತ್ತು ರೇಡಿಯೋ ಕಾಲರ್ ಅಳವಡಿಸುವ ಕಾರ್ಯಾಚರಣೆ ವೇಳೆ ದಸರಾ ಆನೆ ಅರ್ಜುನ ಸಾವನ್ನಪ್ಪಿರುವ ಕುರಿತು ಎಲ್ಲೆಯಿಂದ ಬಂದ ಒತ್ತಡಕ್ಕೆ ಮಣಿದಿರುವ ರಾಜ್ಯ ಸರ್ಕಾರ, ಆನೆ ಸಾವಿಗೆ ಕಾರಣ ಪತ್ತೆಗೆ ತಜ್ಞರ ಸಮಿತಿ ರಚಿಸಲು ನಿರ್ಧಾರ ಕೈಗೊಂಡಿದೆ ಎಂದು ತಿಳಿದುಬಂದಿದೆ.

ಅರಣ್ಯ ಇಲಾಖೆ ಅಧಿಕಾರಿಗಳು ಮತ್ತು ಸಮಿತಿಯ ಸದಸ್ಯರು ಇನ್ನು ಕೆಲವೇ ದಿನಗಳಲ್ಲಿ ಅಧಿಕೃತ ಆದೇಶ ತಲುಪಲಿದೆ ಎಂದು ಮೂಲಗಳು ತಿಳಿಸಿವೆ.

ಸಮಿತಿಯಲ್ಲಿ ನಿವೃತ್ತ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಅಜಯ್ ಮಿಶ್ರಾ, ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಶಾಶ್ವತಿ



ಮಿಶ್ರಾ ಮತ್ತು ಖ್ಯಾತ ಆನೆ ತಜ್ಞ ಆರ್ ಸುಕುಮಾರ್ ಹಾಗೂ ಪಶು ಸಂಗೋಪನಾ ಇಲಾಖೆಯ ಪಶುವೈದ್ಯರೂ ಇರಲಿದ್ದಾರೆಂದು ಸರ್ಕಾರದ ಮೂಲಗಳು ಮಾಹಿತಿ ನೀಡಿವೆ.

ಕೆಲ ತಜ್ಞರು ಹಾಗೂ ಪಶುವೈದ್ಯರ ಲಭ್ಯತೆ ಇನ್ನೂ ಖಚಿತವಾಗಿಲ್ಲ. ಹೀಗಾಗಿ ಆದೇಶ ನೀಡುವಲ್ಲಿ ವಿಳಂಬವಾಗುತ್ತಿದೆ ಎಂದು ತಿಳಿದುಬಂದಿದೆ.

ಸಮಿತಿಯು ನೀಡಬೇಕಿರುವ ನಿಯಮಗಳು ಇನ್ನೂ ಅಂತಿಮಗೊಂಡಿಲ್ಲ, ಆದರೆ, ಮಾವುತರ ವಿರೋಧ, ಗುಂಡೇಟು, ಮರಣೋತ್ತರ ಪರೀಕ್ಷೆ, ಮಾದರಿ ವಿವರಗಳು, ಪ್ರತ್ಯಕ್ಷದರ್ಶಿಗಳು, ಅರಣ್ಯ ಇಲಾಖೆ ಸಿಬ್ಬಂದಿಗಳು, ಪಶುವೈದ್ಯರ ಹೇಳಿಕೆಗಳು, ಆನೆ ಸಾವಿಗೆ ನಿಖರವಾದ ಕಾರಣ ಮತ್ತು ಅದಕ್ಕೆ ಯಾರು ಹೊಣೆಗಾರರೆಂದು ವಿವರವಾದ ವರದಿಯನ್ನು ಸಿದ್ಧಪಡಿಸಲಾಗುತ್ತದೆ ಎಂದು ಮೂಲಗಳು ತಿಳಿಸಿವೆ.

# ಶಾಸಕ ಯತ್ನಾಳ್ ಗುರಿ ನಾನಲ್ಲ, ಪ್ರಧಾನಿ ಮೋದಿ: ಸಿಎಂ ಸಿದ್ದರಾಮಯ್ಯ



ಬೆಂಗಳೂರು: ಮೌಲ್ವಿ ತನ್ವೀರ್ ಹಾಶ್ಮಿ ಅವರ ಜೊತೆಗಿನ ನನ್ನ ಫೋಟೊವನ್ನು ಹಿಡ್ಕೊಂಡು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ನನ್ನ ವಿರುದ್ಧ ಆರೋಪ ಮಾಡಿದರೂ ಅವರ ನಿಜವಾದ ಗುರಿ ಪ್ರಧಾನಿ ನರೇಂದ್ರ ಮೋದಿ ಎನ್ನುವುದು ನಿಧಾನವಾಗಿ ಬಯಲಾಗತೊಡಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಿಸಿದ್ದಾರೆ.

ಸಾಮಾಜಿಕ ಮಾಧ್ಯಮ ಫೇಸ್ಬುಕ್ನಲ್ಲಿ ಪೋಸ್ಟ್ ಮಾಡಿರುವ ಅವರು, ಮೌಲ್ವಿ ಹಾಶ್ಮಿ ಅವರ ಜೊತೆಗೆ ಇತರ ಬಿಜೆಪಿ ನಾಯಕರು ಮಾತ್ರವಲ್ಲ ಸಾಕ್ಷಾತ್ ನರೇಂದ್ರ ಮೋದಿ ಅವರೂ ಸಂಬಂಧ ಹೊಂದಿರುವುದು ಮಾಧ್ಯಮಗಳಲ್ಲಿ ಬಿಡುಗಡೆಯಾಗಿರುವ ಫೋಟೊಗಳು ಸ್ಪಷ್ಟವಾಗಿ ಹೇಳುತ್ತಿವೆ ಎಂದಿದ್ದಾರೆ.

ದೀರ್ಘಕಾಲದಿಂದ ಹಾಶ್ಮಿ ಅವರಿಗೆ ಅತ್ಯಂತ ಆತ್ಮೀಯರಾಗಿರುವ ಮತ್ತು ಊರಿನಲ್ಲಿ ತನ್ನ ನೆರೆಹೊರೆಯಾಗಿರುವ ಯತ್ನಾಳ್ ಅವರಿಗೆ ಇದು ತಿಳಿದಿರಲಿಲ್ಲ ಎನ್ನುವುದನ್ನು ನಂಬಲು ಸಾಧ್ಯವೇ? ಎಂದು ಪ್ರಶ್ನಿಸಿದ್ದಾರೆ.

ರಾಜ್ಯ ಬಿಜೆಪಿ ಅಧ್ಯಕ್ಷತೆ ಮತ್ತು ವಿರೋಧ ಪಕ್ಷದ ನಾಯಕನ ಸ್ಥಾನ ತಪ್ಪಿ ಹೋಗಿರುವುದರಿಂದ ಯತ್ನಾಳ್ ಅವರು ಕೆರಳಿ ಕೆಂಡವಾಗಿದ್ದಾರೆ.

ಇದಕ್ಕೆ ಕಾರಣಕರ್ತರಾದ ಪ್ರಧಾನಿ ನರೇಂದ್ರ ಮೋದಿ ಮತ್ತು ಅಮಿತ್ ಶಾ ವಿರುದ್ಧ ಸೇಡು ತೀರಿಸಿಕೊಳ್ಳುವ ಉದ್ದೇಶದಿಂದಲೇ ಮೌಲ್ವಿ ತನ್ವೀರ್ ಹಾಶ್ಮಿ ಜೊತೆಗಿನ ನನ್ನ ಫೋಟೋವನ್ನು ತೋರಿಸಿ ಆರೋಪ ಮಾಡಿದ್ದಾರೆ ಎಂದು ದೂರಿದ್ದಾರೆ.

ಈ ಆರೋಪದ ನಂತರ ಮೌಲ್ವಿ ಅವರ ಜೊತೆಗಿನ ಪ್ರಧಾನಿ ನರೇಂದ್ರ ಮೋದಿ ಅವರ ಸಂಬಂಧದ ವಿವರವೂ ಹೊರಬರಲಿದೆ ಎನ್ನುವುದು ಅವರಿಗೆ ಖಂಡಿತ ಗೊತ್ತಿತ್ತು. ಅವೆಲ್ಲವೂ ಬಯಲಾಗಿ ಪ್ರಧಾನಿ ಮತ್ತು ಬಿಜೆಪಿ ನಾಯಕರು ಮುಜುಗರಕ್ಕೀಡಾಗಲಿ ಎಂಬ ದುರುದ್ದೇಶದಿಂದ ನನ್ನ ವಿರುದ್ಧ ಆರೋಪ ಮಾಡುವ ಆಟ ಆಡಿದ್ದಾರೆ ಎಂದು ಟೀಕಿಸಿದ್ದಾರೆ.

ಮೌಲ್ವಿ ಹಾಶ್ಮಿ ಅವರ ಜೊತೆಗಿನ ನನ್ನ ಸ್ನೇಹ ಸಂಬಂಧವನ್ನು ನಾನು ಬಹಿರಂಗವಾಗಿಯೇ ಒಪ್ಪಿಕೊಂಡಿದ್ದೇನೆ. ಹಾಶ್ಮಿಯವರೂ ಕೂಡಾ ಅವರ ಮೇಲಿನ ಆರೋಪದ ತನಿಖೆಯನ್ನು ಕೇಂದ್ರ ಸರ್ಕಾರವೇ ನಡೆಸಲಿ ಎಂದು ಸವಾಲು ಹಾಕಿದ್ದಾರೆ.



ಮೌಲ್ವಿ ತನ್ವೀರ್ ಹಾಶ್ಮಿ ಅವರ ಜೊತೆಗಿನ ನನ್ನ ಫೋಟೊವನ್ನು ಹಿಡ್ಕೊಂಡು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ನನ್ನ ವಿರುದ್ಧ ಆರೋಪ ಮಾಡಿದರೂ ಅವರ ನಿಜವಾದ ಗುರಿ ಪ್ರಧಾನಿ ನರೇಂದ್ರ ಮೋದಿ ಎನ್ನುವುದು ನಿಧಾನವಾಗಿ ಬಯಲಾಗತೊಡಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಿಸಿದ್ದಾರೆ.

**-ಸಿಎಂ ಸಿದ್ದರಾಮಯ್ಯ**

ಈಗ ಪ್ರಧಾನಿ ನರೇಂದ್ರಮೋದಿ ಅವರು ತನ್ನ ವಿರುದ್ಧದ ಆರೋಪಕ್ಕೆ ಪ್ರತಿಕ್ರಿಯಿಸಲೇ ಬೇಕಾಗುತ್ತದೆ. ಮೌಲ್ವಿ ತನ್ವೀರ್ ಹಾಶ್ಮಿ ಅವರಿಗೆ ನಿಜವಾಗಿ ಐಸಿಎಸ್ ಜೊತೆ ಸಂಬಂಧವಿದ್ದರೆ ಆ ಬಗ್ಗೆ ತನಿಖೆಗೆ ಪ್ರಧಾನಿಯವರು ತಕ್ಷಣ ಆದೇಶ ನೀಡಬೇಕು ಮತ್ತು ಹಾಶ್ಮಿ ಮತ್ತು ತನ್ನ ಸಂಬಂಧದ ವಿವರವನ್ನು ದೇಶದ ಮುಂದಿಡಬೇಕು. ಇದು ಎರಡೂ ಮಾಡದೆ ಇದ್ದರೆ ಇಂತಹ ಸುಳ್ಳು ಆರೋಪ ಮಾಡುವ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ ಕ್ರಮವನ್ನಾದರೂ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಈ ರೀತಿಯ ಆರೋಪಗಳನ್ನು ಮಾಡುವುದು ಇದೇ ಮೊದಲ ಸಲವೇನಲ್ಲ. ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಮತ್ತು ಅವರ ಮಕ್ಕಳ ವಿರುದ್ಧ ಪುಂಖಾನುಪುಂಖವಾಗಿ ಆರೋಪ ಮಾಡಿದ್ದಾರೆ.

ಬಿಜೆಪಿಯಲ್ಲಿ ಮುಖ್ಯಮಂತ್ರಿಯಾಗಬೇಕಾದರೆ ಪಕ್ಷದ ಹೈಕಮಾಂಡ್ಗೆ ಎರಡು ಸಾವಿರ ಕೋಟಿ ರೂ. ಕೊಡಬೇಕಾಗುತ್ತದೆ ಎನ್ನುವ ಗಂಭೀರ ಆರೋಪವನ್ನೂ ಅವರು ಮಾಡಿದ್ದಾರೆ. ಈ ರೀತಿ ಬಹಿರಂಗವಾಗಿ ತಮ್ಮ ಪಕ್ಷದ ಉನ್ನತ ನಾಯಕರ ವಿರುದ್ಧವೇ ಆರೋಪ ಮಾಡಿರುವ ಬಸನಗೌಡ ಪಾಟೀಲ್ ಯತ್ನಾಳ್ ಅವರ ಬಾಯಿ ಬಲದ ಹಿಂದೆ ಇರುವ ಶಕ್ತಿ ಯಾವುದು? ಎಂದು ಪ್ರಶ್ನಿಸಿದ್ದಾರೆ.

## ರೈತರಿಂದ ಸಾಲ ವಸೂಲಾತಿ ನಿಲ್ಲಿಸಿ: ರಾಜ್ಯ ಸರ್ಕಾರಕ್ಕೆ ಬಸವರಾಜ ಬೊಮ್ಮಾಯಿ ಒತ್ತಾಯ



ಬೆಂಗಳೂರು: ಬರಗಾಲದಿಂದ ಸಂಕಷ್ಟದಲ್ಲಿರುವ ರೈತರಿಂದ ಬಲವಂತದ ಸಾಲ ವಸೂಲಾತಿಯನ್ನು ನಿಲ್ಲಿಸಿ ಹೊಸ ಸಾಲ ನೀಡಬೇಕು ಎಂದು ಬಿಜೆಪಿ ಹಿರಿಯ ಮುಖಂಡ, ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ರಾಜ್ಯ ಸರ್ಕಾರವನ್ನು ಒತ್ತಾಯಿಸಿದರು.

ರೈತರು ಸಂಕಷ್ಟದಲ್ಲಿದ್ದಾರೆ. ಆದರೆ ರಾಜ್ಯ ಸರ್ಕಾರ ಪರಿಹಾರ ಬಿಡುಗಡೆ ಮಾಡದೆ ಕೇಂದ್ರ ಸರ್ಕಾರದತ್ತ ಬೊಟ್ಟು ಮಾಡಿದೆ. ಹಿಂದಿನ ಬಿಜೆಪಿ ಸರ್ಕಾರ ಪ್ರವಾಹ ಸಂದರ್ಭದಲ್ಲಿ ರೈತರಿಗೆ 2,000 ಕೋಟಿ ರೂ.ಗಳನ್ನು ಡಿಬಿಟಿ ಮೂಲಕ ವಿತರಿಸಿತ್ತು ಎಂದು ತಿಳಿಸಿದರು.

ರಾಜ್ಯ ಸರಕಾರ ಪ್ರತಿ ರೈತನಿಗೆ 2 ಸಾವಿರ ರೂ.ನೀಡುವುದಾಗಿ ಭರವಸೆ ನೀಡಿರುವುದು ರೈತರಿಗೆ ಮಾಡಿದ ಅವಮಾನವಲ್ಲದೆ ಮತ್ತೇನೂ ಅಲ್ಲ. ಕೇಂದ್ರದ ಮಾರ್ಗಸೂಚಿಗಳ ಪ್ರಕಾರ ಒಣ ಬೇಸಾಯಕ್ಕೆ ಪ್ರತಿ ಹೆಕ್ಟೇರ್‌ಗೆ 6,000 ರೂಪಾಯಿ ಮತ್ತು ನೀರಾವರಿ ಭೂಮಿಗೆ 18,000 ರೂಪಾಯಿ ಪರಿಹಾರವನ್ನು ರಾಜ್ಯವು ಘೋಷಿಸಬೇಕು ಎಂದು ಆಗ್ರಹಿಸಿದ ಅವರು, ಬಿಜೆಪಿ ಸರ್ಕಾರ ಆರಂಭಿಸಿದ ಕಿಸಾನ್ ಸಮ್ಮಾನ್ ಕಾರ್ಯಕ್ರಮವನ್ನು ಸ್ಥಗಿತಗೊಳಿಸಲಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಐಸಿಸ್ ಜೊತೆ ಸಂಪರ್ಕ ಹೊಂದಿದ್ದಾರೆ ಎಂದು ಆರೋಪಿಸಲಾಗಿರುವ ಧರ್ಮಗುರುಗಳ ಜೊತೆ ಸಿಎಂ ವೇದಿಕೆ ಹಂಚಿಕೊಂಡಿರುವ ಬಗ್ಗೆ ಎನ್‌ಐಎ ತನಿಖೆಗೆ ಸರ್ಕಾರ ಶಿಫಾರಸು ಮಾಡಬೇಕು ಎಂದು ಒತ್ತಾಯಿಸಿದ ಬೊಮ್ಮಾಯಿ, ವಿಜಯಪುರದಲ್ಲಿ ಉದ್ರೇಕಕಾರಿ ಭಾಷಣ ಮಾಡಿದ್ದಕ್ಕಾಗಿ ಮೌಲ್ವಿ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ಹೇಳಿದರು.

ಬೆಳಗಾವಿಯಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನಕ್ಕೆ ಡಿಕೆ ಶಿವಕುಮಾರ್ ಗೈರು ಹಾಜರಿ ಕುರಿತು ಪ್ರತಿಕ್ರಿಯಿಸಿದ ಬೊಮ್ಮಾಯಿ, ಡಿಸಿಎಂ ತೆಲಂಗಾಣ ರಾಜಕೀಯದಲ್ಲಿ ಬ್ಯುಸಿಯಾಗಿದ್ದು, ಜನರ ಸಮಸ್ಯೆಗಳು ಅಥವಾ ರಾಜಕೀಯ ಯಾವುದು ಮುಖ್ಯ ಎಂಬುದನ್ನು ಅವರೇ ಹೇಳಬೇಕು ಎಂದು ಹೇಳಿದರು.

## ಮದುವೆಗೆ ನಕಾರ: ಪ್ರೇಯಸಿ ಮನೆಯಲ್ಲೇ ಬೆಂಕಿ ಹಚ್ಚಿಕೊಂಡು ಯುವಕ ಆತ್ಮಹತ್ಯೆ



ಬೆಂಗಳೂರು: ತನ್ನನ್ನು ವಿವಾಹವಾಗಲು ಪ್ರೀತಿಸಿದ ಯುವತಿ ನಿರಾಕರಿಸಿದ ಹಿನ್ನೆಲೆಯಲ್ಲಿ ಯುವಕನೊಬ್ಬ ಆಕೆಯ ಮನೆಯಲ್ಲಿಯೇ ಬೆಂಕಿ ಹಚ್ಚಿಕೊಂಡು ಆತ್ಮಹತ್ಯೆ ಮಾಡಿರುವ ಘಟನೆ ಕೆಂಗೇರಿಯಲ್ಲಿ ಬುಧವಾರ ನಡೆದಿದೆ.

ರಾಕೇಶ್ (27) ಆತ್ಮಹತ್ಯೆ ಮಾಡಿಕೊಂಡ ಯುವಕನಾಗಿದ್ದಾನೆ. ಬುಧವಾರ ಮಧ್ಯಾಹ್ನ ಯುವತಿಯ ಮನೆಗೆ ಹೋಗಿರುವ ರಾಕೇಶ್ ಜಗಳ ಮಾಡಿದ್ದಾನೆ. ಮಾತಿನ ಚಕಮಕಿ ವೇಳೆ ಆಕೆಯ ಮನೆಯಲ್ಲಿಯೇ ಪೆಟ್ರೋಲ್ ಸುರಿದುಕೊಂಡು ಬೆಂಕಿ ಹಚ್ಚಿಕೊಂಡಿದ್ದಾನೆ.

ಕೂಡಲೇ ಯುವನನ್ನು ವಿಕ್ಟೋರಿಯಾ ಆಸ್ಪತ್ರೆಯ ಸುಟ್ಟಗಾಯಗಳ ವಾರ್ಡ್‌ಗೆ ದಾಖಲಿಸಲಾಗಿದೆ. ಆದರೆ, ಚಿಕಿತ್ಸೆ ಫಲಕಾರಿಯಾಗದೆ ಯುವಕ ಗುರುವಾರ ಮೃತಪಟ್ಟಿದ್ದಾನೆ.

ರಾಕೇಶ್ ಈ ಹಿಂದೆ ತನ್ನ ಪೋಷಕರಿಗೆ ವಿಚಾರ ತಿಳಿಸಿ, ಹುಡುಗಿ ಕೇಳುವಂತೆ ಯುವತಿಯ ಮನೆಗೆ ಕಳುಹಿಸಿದ್ದಾನೆ. ಆದರೆ, ಯುವತಿಯ ಮನೆಯವರು ಮದುವೆಗೆ ನಿರಾಕರಿಸಿದ್ದಾರೆ. ಇದಾದ ಬಳಿಕ ಯುವತಿ ರಾಕೇಶ್ ನಿಂದ ದೂರಾಗಲು ಪ್ರಾರಂಭಿಸಿದ್ದಳು.

ಇದರಿಂದ ನೊಂದಿದ್ದ ರಾಕೇಶ್ ಬುಧವಾರ ಮಧ್ಯಾಹ್ನ ಆಕೆಯ ಮನೆಗೆ ಹೋಗಿದ್ದಾನೆ. ಈ ವೇಳೆ ಯುವತಿಯ ಮನೆಯವರು ಬೆದರಿಸಿ, ಹಲ್ಲೆ ನಡೆಸಿದ್ದಾರು ಎಂದು ತಿಳಿದುಬಂದಿದೆ. ಈ ಸಂಬಂಧ ಕೆಂಗೇರಿ ಪೊಲೀಸರು ಪ್ರಕರಣ ದಾಖಲಿಸಿಕೊಂಡು, ತನಿಖೆ ಆರಂಭಿಸಿದ್ದಾರೆ.

## ಯಾವುದೇ ಕಾರಣಕ್ಕೂ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯ ಅನುದಾನದ ದುರ್ಬಳಕೆಗೆ ಅವಕಾಶ ನೀಡುವುದಿಲ್ಲ:ಸಚಿವ ಡಾ.ಹೆಚ್.ಸಿ. ಮಹದೇವಪ್ಪ

ಬೆಳಗಾವಿ ಸುವರ್ಣವಿಧಾನಸೌಧ: ರಾಜ್ಯ ಸರ್ಕಾರವು ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಯೋಜನೆಗೆ ಮೀಸಲಿಟ್ಟಿರುವ ಅನುದಾನವನ್ನು ಯಾವುದೇ ಕಾರಣಕ್ಕೂ ದುರ್ಬಳಕೆ ಆಗಲು ಅವಕಾಶ ನೀಡುವುದಿಲ್ಲ ಎಂದು ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಸ್ಪಷ್ಟಪಡಿಸಿದರು.

ಅವರು ಇಂದು ವಿಧಾನಪರಿಷತ್‌ನಲ್ಲಿ ಸದಸ್ಯ ಛಲವಾದಿ ಟಿ ನಾರಾಯಣ ಸ್ವಾಮಿ ಕೇಳಿದ ಚುಕ್ಕೆ ಗುರುತಿನಢ ಪ್ರಶ್ನೆ 62 (562)ಕ್ಕೆ ಉತ್ತರಿಸಿದರು.

ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಧಿನಿಯಮ 2013 ಮತ್ತು ನಿಯಮಗಳು 2017 ರಲ್ಲಿ ಪ.ಜಾತಿ ಮತ್ತು ಪಂಗಡದ ಜನರಿಗೆ ನೇರವಾಗಿ ಪ್ರಯೋಜನವಾಗುವ ಕಾರ್ಯಕ್ರಮಗಳಿಗೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅನುದಾನವನ್ನು ಹಂಚಿಕೆ ಮಾಡಿ ಅನುಷ್ಠಾನಗೊಳಿಸಲು ಅವಕಾಶವಿದ್ದು ಈ ಅನುದಾನವನ್ನು ಯಾವುದೇ ಸಂದರ್ಭದಲ್ಲೂ ಅನ್ಯ ಉದ್ದೇಶಕ್ಕಾಗಿ ಬಳಸುವುದಿಲ್ಲ ಹಾಗೂ ಕಾಯ್ದೆಯ ಉಲ್ಲಂಘನೆಯ ಅವಕಾಶ ನೀಡುವುದಿಲ್ಲ ಎಂದು ತಿಳಿಸಿದರು.

ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಗ್ಯಾರಂಟಿ ಯೋಜನೆಗಳಿಗಾಗಿ, ಗೃಹಲಕ್ಷ್ಮೀ ಯೋಜನೆಗೆ 5075 ಕೋಟಿ ರೂ, ಅನ್ನಭಾಗ್ಯ ಯೋಜನೆಗೆ 2779.50 ಕೋಟಿ ರೂ,



ಗೃಹಜ್ಯೋತಿ ಯೋಜನೆಯಡಿ 2410 ಕೋಟಿ ರೂ, ಶಕ್ತಿ ಯೋಜನೆಗೆ 812 ಕೋಟಿ ರೂ, ಯುವನಿಧಿ ಯೋಜನಗೆಗೆ 67.50 ಕೋಟಿ ರೂ ಒದಗಿಸಲಾಗಿದ್ದು, ಈ ಮೊತ್ತವನ್ನು ಪ.ಜಾತಿ/ಪಂಗಡದವರಿಗೆ ಉಪಯೋಗಿಸುತ್ತಿರುವುದರಿಂದ ಸದರಿ ಅನುದಾನದ ದುರ್ಬಳಕೆ ಪ್ರಶ್ನೆ ಉದ್ಭವಿಸುವುದಿಲ್ಲ ಎಂದು ತಿಳಿಸಿದರು.

ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅನುದಾನದಲ್ಲಿ ದುರ್ಬಳಕೆ ತಡೆಯುವ ಉದ್ದೇಶದಿಂದಲೇ ಕಾಯ್ದೆಯ ಸೆಕ್ಷನ್ 7 (ಡಿ) ಯನ್ನು ಕೈಬಿಡಲು ನಿನ್ನೆ ನಡೆದ ಕ್ಯಾಬಿನೆಟ್ ಸಭೆಯಲ್ಲಿ ನಿರ್ಧರಿಸಲಾಗಿದೆ ಎಂದು ಸಚಿವರು ತಿಳಿಸಿದರು.

ಪ.ಜಾತಿ ಮತ್ತು ಪ.ವರ್ಗಗಳ ಕಲ್ಯಾಣಕ್ಕಾಗಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಲ್ಲಿ ಮೀಸಲಿಟ್ಟ ಅನುದಾನದಲ್ಲಿ 2023-24 ನೇ ಸಾಲಿನಲ್ಲಿ 11 ಸಾವಿರಕ್ಕೂ ಅಧಿಕ ಮೊತ್ತವನ್ನು ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಿಗೆ ವರ್ಗಾಯಿಸಿದೆ ಎಂಬ ವಿಧಾನಪರಿಷತ್ ಸದಸ್ಯ ಛಲವಾದಿ ಟಿ ನಾರಾಯಣ ಸ್ವಾಮಿ ಅವರ ಪ್ರಶ್ನೆಗೆ ಪೂರಕವಾಗಿ ಸದಸ್ಯರಾದ ತೇಜಸ್ವಿನಿಗೌಡ, ಭೋಜೇಗೌಡ, ಕೋಟ ಶ್ರೀನಿವಾಸ ಪೂಜಾರಿ, ತಿಪ್ಪೇಸ್ವಾಮಿ, ಶಾಂತಾರಾಮ್, ರವಿಕುಮಾರ್ ದನಿಗೂಡಿಸಿದರು.

ಸರ್ಕಾರದ ಉತ್ತರದ ಕುರಿತು ಆಕ್ಷೇಪ ವ್ಯಕ್ತಪಡಿಸಿದ ವಿರೋಧ ಪಕ್ಷಗಳ ಸದಸ್ಯರು ಸದನದ ಬಾವಿಗಳಿದು ಘೋಷಣೆ ಕೂಗಿ ಪ್ರತಿಭಟನೆ ನಡೆಸಿದರು. ಇದರಿಂದಾಗಿ ಸದನವನ್ನು 2 ಬಾರಿ 10 ನಿಮಿಷಗಳ ಕಾಲ ಮುಂದೂಡಲಾಯಿತು.

ಅಂತಿಮವಾಗಿ ಈ ಕುರಿತು ಸೋಮವಾರ ಅರ್ಧ ಗಂಟೆಯ ಚರ್ಚೆಗೆ ಅವಕಾಶ ನೀಡುವುದಾಗಿ ಸಭಾಪತಿಗಳು ಅನುಮತಿ ನೀಡುವ ಮೂಲಕ ವಿರೋಧಪಕ್ಷಗಳ ಪ್ರತಿಭಟನೆಯನ್ನು ತಣ್ಣಗಾಗಿಸಿದರು.

ಸರ್ಕಾರದ ಪರವಾಗಿ ಸಚಿವ ಪ್ರಿಯಾಂಕ ಖರ್ಗೆ, ಕೆ.ಎಚ್. ಮುನಿಯಪ್ಪ ಮಾತನಾಡಿದರು.

## ಬಸ್-ಕಾರು ಭೀಕರ ಅಪಘಾತ ಪ್ರಕರಣ; ಸಾವಿನ ಸಂಖ್ಯೆ ಏರಿಕೆ; ಐವರು ದುರ್ಮರಣ



ಶಿರಸಿ: ಕೆ.ಎಸ್.ಆರ್ಟಿಸಿ ಬಸ್ ಹಾಗೂ ಕಾರಿನ ನಡುವೆ ಸಂಭವಿಸಿದ ಭೀಕರ ಅಪಘಾತದಲ್ಲಿ ಸಾವನ್ನಪ್ಪಿದವರ ಸಂಖ್ಯೆ ಐದಕ್ಕೆ ಏರಿಕೆಯಾಗಿದೆ.

ಉತ್ತರ ಕನ್ನಡ ಜಿಲ್ಲೆಯ ಶಿರಸಿ ತಾಲೂಕಿನ ಬಂಡಲ್ ಬಳಿ ಈ ಅಪಘಾತ ಸಂಭವಿಸಿದ್ದು, ಕಾರಿನಲ್ಲಿದ್ದ ಐವರು ಮೃತಪಟ್ಟಿದ್ದಾರೆ.

ಅಪಘಾತದಲ್ಲಿ ಸ್ಥಳದಲ್ಲೇ ಮೂವರು ಸಾವನ್ನಪ್ಪಿದ್ದರೆ, ಇನ್ನಿಬ್ಬರು ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದಾರೆ.

ಮೃತರು ತಮಿಳುನಾಡು ಮೂಲದವರು ಎಂದು ತಿಳಿದುಬಂದಿದೆ. ಮೃತರ ಗುರುತು ಪತ್ತೆಯಾಗಿಲ್ಲ. ಕೆ.ಎಸ್.ಆರ್ಟಿ.ಸಿ ಬಸ್ ಭಟ್ಕಳಕ್ಕೆ ತೆರಳುತ್ತಿತ್ತು. ಈ ವೇಳೆ ಬಂಡಲ್ ಬಳಿ ಈ ಅಪಘಾತ ಸಂಭವಿಸಿದೆ. ಇನ್ನು ಅಪಘಾತದಲ್ಲಿ ಬಸ್ ನಲ್ಲಿದ್ದ ಕೆಲ ಪ್ರಯಾಣಿಕರಿಗೆ ಸಣ್ಣಪುಟ್ಟ ಗಾಯಗಳಾಗಿವೆ.

# ಸ್ವಚ್ಛ ಭಾರತ ಮಿಷನ್ ಯೋಜನೆ ಅನುಷ್ಠಾನಕ್ಕೆ ರೂ.2912 ಕೋಟಿ ಅನುದಾನ: ಸಚಿವ ಸುರೇಶ್.ಬಿ.ಎಸ್

ಬೆಳಗಾವಿ ಸುವರ್ಣ ಸೌಧ: ಸ್ವಚ್ಛ ಭಾರತ ಮಿಷನ್-1.0 ಯೋಜನೆಗೆ ರೂ.854 ಕೋಟಿ ಹಾಗೂ ಸ್ವಚ್ಛ ಭಾರತ ಮಿಷನ್-2.0 ಯೋಜನೆಗೆ ರೂ.2058 ಕೋಟಿ ಸೇರಿ ಒಟ್ಟು ರೂ.2912 ಕೋಟಿ ಅನುದಾನವನ್ನು ಯೋಜನೆ ಅನುಷ್ಠಾನಕ್ಕೆ ಮೀಸಲು ಇರಿಸಲಾಗಿದೆ ಎಂದು ನಗರಾಭಿವೃದ್ಧಿ ಸಚಿವ ಸುರೇಶ್.ಬಿ.ಎಸ್. ಹೇಳಿದರು.

ಶುಕ್ರವಾರ ಅಧಿವೇಶನದ ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಶಾಸಕರ ಪ್ರಶ್ನೆಗಳಿಗೆ ಅವರು ಉತ್ತರಿಸಿದರು. ರಾಜ್ಯ ಎಲ್ಲಾ ಸ್ಥಳೀಯ ನಗರಾಭಿವೃದ್ಧಿ ಸಂಸ್ಥೆಗಳಲ್ಲಿ ಸ್ವಚ್ಛಭಾರತ್ ಮಿಷನ್ ಅನುಷ್ಠಾನ ಮಾಡಲು ಪ್ರತ್ಯೇಕ ಐ.ಎ.ಎಸ್ ಅಧಿಕಾರಿ ನೇಮಿಸಲಾಗಿದೆ.

ಎಲ್ಲಾ ಮಹಾನಗರ ಪಾಲಿಕೆಗಳಲ್ಲಿ ಘನತ್ಯಾಜ್ಯ ವಸ್ತುಗಳ ಸಂಗ್ರಹಣೆ, ಸಾಗಣಿಕೆ, ಸಂಸ್ಕರಣೆ ಮತ್ತು ವಿಲೇವಾರಿಗೆ ಅಗತ್ಯ ಇರುವ ಯಂತ್ರೋಪಕರಣಗಳನ್ನು ಮತ್ತು ಸಿವಿಲ್ ಕಾಮಗಾರಿಗೆ ಕೈಗೊಳ್ಳಲು ವಿಸ್ತೃತ ಯೋಜನೆಗೆ ಅನುಮತಿ ನೀಡಿದ್ದು, ರೂ.370 ಕೋಟಿ ಬಿಡುಗಡೆ ಮಾಡಲಾಗಿದೆ.

ಹುಬ್ಬಳ್ಳಿ ಧಾರವಾಡದಲ್ಲಿ 450 ಟಿ.ಪಿ.ಡಿ ಹಾಗೂ ತುಮಕೂರು ನಗರದಲ್ಲಿ 140 ಟಿ.ಪಿ.ಡಿ ಸಾಮಾರ್ಥ್ಯದ ತ್ಯಾಜ್ಯ ಸಂಸ್ಕರಣೆ ಸೌಲಭ್ಯ ಕಲ್ಪಿಸಲಾಗಿದೆ. ಈಗಾಗಲೇ ಬಹಳ ವರ್ಷಗಳಿಂದ ಶೇಖರಣೆಯಾಗಿರುವ ಹಳೆಯ ಪಾರಂಪರಿಕ ತ್ಯಾಜ್ಯವನ್ನು ತೆರವುಗೊಳಿಸಲು ಬಯೋ ಮೈನಿಂಗ್ ಹಾಗೂ ಬಯೋ ರೆಮಡೇಷನ್ ಮಾಡಲು ಕ್ರಮ ವಹಿಸಲಾಗಿದೆ ಎಂದರು.

ಶಾಸಕ ಜ್ಯೋತಿ ಗಣೇಶ್ ಜೆ.ಬಿ ಹಾಗೂ ಇತರೆ ಶಾಸಕರು ಬಯೋ ಮೈನಿಂಗ್ ಹಾಗೂ ಬಯೋ ರೆಮಡೇಷನ್ ಕೈಗೊಳ್ಳಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಪ್ರತಿ ಟನ್‌ಗೆ ನೀಡಿರುವ ದರವನೇ ರಾಜ್ಯದ ಇತರೆಡೆಯೂ ನೀಡಬೇಕು ಎಂದು ಸಚಿವರಲ್ಲಿ ಕೋರಿದರು. ಇದಕ್ಕೆ ಸಕಾರತ್ಮವಾಗಿ ಸ್ಪಂದಿಸಿದ ಸಚಿವ ಸುರೇಶ್.ಬಿ.ಎಸ್. ದರ ಪರಿಷ್ಕರಣೆ ಮಾಡುವುದಾಗಿ ತಿಳಿಸಿದರು.

**ವಿಜಯಪುರ ಕುಡಿಯುವ ನೀರಿನ ಕೊಳವೆ ಮಾರ್ಗ ಕಾಮಗಾರಿಗೆ ಅನುಮತಿ:**

ವಿಜಯಪುರ ನಗರಕ್ಕೆ ಆಲಮಟ್ಟಿ ಹಿನ್ನಿರಿನಿಂದ ನೀರು ಸರಬರಾಜು ಮಾಡುವ ಕೊಳವೆ ಮಾರ್ಗ ಬದಲಿ ಕಾಮಾಗಾರಿಗೆ ಸರ್ಕಾರದಿಂದ ಅನುಮತಿ



ನೀಡಲಾಗಿದೆ ಎಂದು ನಗರಾಭಿವೃದ್ಧಿ ಸಚಿವ ಸುರೇಶ್.ಬಿ.ಎಸ್. ಹೇಳಿದರು.

ಶುಕ್ರವಾರ ಅಧಿವೇಶನದ ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಶಾಸಕ ಬಸನಗೌಡ ಆರ್. ಪಾಟೀಲ್ ಯತ್ನಾಳ್ ಚುಕ್ಕೆ ಗುರುತಿನ ಪ್ರಶ್ನೆಗೆ ಅವರು ಉತ್ತರಿಸಿದರು.

ಬಾಕಿ ಉಳಿದಿರುವ ಪಿ.ಎಸ್.ಪಿ. ಕೊಳವೆ ಮಾರ್ಗವನ್ನು ಎಂ.ಎಸ್. ಪೈಪುಗಳಾಗಿ ಬದಲಾಯಿಸಲು ರೂ.32 ಕೋಟಿಗಳಿಗೆ ಸರ್ಕಾರ ಆಡಳಿತಾತ್ಮಕ ಮಂಜೂರಾತಿ ನೀಡಿತ್ತು.

2018-19ನೇ ಸಾಲಿನ ದರಪಟ್ಟಿಯಂತೆ ಯೋಜನೆ ಮಾರ್ಪಡಿಸಿ ರೂ.52 ಕೋಟಿಗೆ ಪರಿಷ್ಕೃತ ಯೋಜನೆ ಸಿದ್ದಪಡಿಸಿ ಆಡಳಿತಾತ್ಮಕ ಮಂಜೂರಾತಿ ಸರ್ಕಾರಕ್ಕೆ ಬಂದ ವರದಿಯನ್ನು ಹಣಕಾಸು ಇಲಾಖೆ ಕಳುಹಿಸಿಕೊಡಲಾಗಿತ್ತು. ಆದರೆ ಆರ್ಥಿಕ ಇಲಾಖೆ ಹೆಚ್ಚುವರಿ ಹಣವನ್ನು ಸರ್ಕಾರದಿಂದ ಭರಿಸಲು ಸಾಧ್ಯವಾಗುವುದಿಲ್ಲ. ಯೋಜನೆಗೆ ಅವಶ್ಯಕ ಇರುವ ಅನುದಾನವನ್ನು ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರ, ಸ್ಥಳೀಯ ಸಂಸ್ಥೆ, 15 ಹಣಕಾಸು ಆಯೋಗ, ನಗರ ಸ್ಥಳೀಯ ಸಂಸ್ಥೆಯ ವಾಣಿಜ್ಯ ಸಾಲ ಅಥವಾ ಅಮೃತ್ 2.0 ಯೋಜನೆಯಡಿ ಕೈಗೊಳುವಂತೆ ತಿಳಿಸಿರುತ್ತಾರೆ.

ಇದರಂತೆ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ನಿರ್ದೇಶನ ನೀಡಲಾಗಿದೆ ಎಂದು ಅವರು ಹೇಳಿದರು.

ಈಗಾಗಲೇ ನಗರದಲ್ಲಿ 15 ದಿನಗಳಿಗೊಮ್ಮೆ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. ಯೋಜನೆ ವಿಳಂಭವಾದರೆ ಮುಂದಿನ ಬೇಸಿಗೆ ವೇಳೆ ದುಸ್ತರವಾಗಲಿದೆ.

ನಗರದಲ್ಲಿ 24*7 ಕುಡಿಯುವ ನೀರಿನ ಪೈಪ್ ಲೈನ್ ಅಳವಡಿಕೆ ಕಾಮಗಾರಿ ಮಾಡುತ್ತಿರುವ ಕಂಪನಿಗೆ ರೂ.201 ಕೋಟಿ ಗುತ್ತಿಗೆ ಹಣ ಬಿಡುಗಡೆ ಮಾಡಬೇಕಿತ್ತು. ಅದರೆ ಸರ್ಕಾರ ರೂ.133 ಕೋಟಿ ನೀಡಿದೆ.

ಬಾಕಿ ಉಳಿದ ಹಣವನ್ನು ಕೂಡಲೇ ಬಿಡುಗಡೆ ಮಾಡಬೇಕು ಎಂದು ಶಾಸಕ ಬಸನಗೌಡ ಆರ್. ಪಾಟೀಲ್ ಯತ್ನಾಳ್ ಹೇಳಿದರು.

10 ರಿಂದ 15 ದಿನದಲ್ಲಿ ಸಮಸ್ಯೆಯನ್ನು ಬಗೆಹರಿಸುವುದಾಗಿ ಸಚಿವ ಸುರೇಶ್.ಬಿ.ಎಸ್. ಆಶ್ವಾಸನೆ ನೀಡಿದರು.

### ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ : ಪೌರ ಕಾರ್ಮಿಕರ ಕೊರತೆ ಇಲ್ಲ

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯಲ್ಲಿ ಪೌರ ಕಾರ್ಮಿಕರ ಕೊರತೆಯಿಲ್ಲ. ನೇರ ಪಾವತಿಯಡಿ 958, ಹೊರಗುತ್ತಿಗೆ ಅಡಿ 774 ಹಾಗೂ 388 ಖಾಯಂ ಪೌರ ಕಾರ್ಮಿಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎಂದು ನಗರಾಭಿವೃದ್ಧಿ ಸಚಿವ ಸುರೇಶ್.ಬಿ.ಎಸ್. ಹೇಳಿದರು.

ಶುಕ್ರವಾರದ ಅಧಿವೇಶನದ ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಶಾಸಕ ಅಬ್ಬಯ್ಯ ಪ್ರಸಾದ್ ಚುಕ್ಕೆ ಗುರುತಿನ ಪ್ರಶ್ನೆಗೆ ಅವರು ಉತ್ತರಿಸಿದರು.

ಕರ್ನಾಟಕ ಮಹಾನಗರ ಪಾಲಿಕೆ ವೃಂದ ಮತ್ತು ನೇಮಕಾತಿ ನಿಯಮ 2011ರ ಪ್ರಕಾರ ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯಲ್ಲಿ 1470 ಪೌರ ಕಾರ್ಮಿಕರ ಹುದ್ದೆಗಳು ಇವೆ. ಸದ್ಯ 700 ಜನಸಂಖ್ಯೆಗೆ ಒಬ್ಬ ಪೌರ ಕಾರ್ಮಿಕರನ್ನು ನೇಮಕ ಮಾಡಿಕೊಳ್ಳಲಾಗಿದೆ. ಒಟ್ಟು 134 ಪೌರ ಕಾರ್ಮಿಕರ ನೇಮಕಾತಿಗೆ ಅರ್ಜಿ ಆಹ್ವಾನಿಸಿದ್ದು, ಪೌರಕಾರ್ಮಿಕರ ವಿಶೇಷ ನೇರ ನೇಮಕಾತಿ ಪ್ರಕ್ರಿಯೆ ಚಾಲನೆಯಲ್ಲಿದೆ ಎಂದರು.

## ಕಿತ್ತೂರು ಅರಮನೆ-ಕೋಟೆ ಅಭಿವೃದ್ಧಿ ಕಾಲ ಮಿತಿಯಲ್ಲಿ ಮುಗಿಸಿ: ಸಚಿವ ಕೃಷ್ಣ ಬೈರೇಗೌಡ




ಬೆಳಗಾವಿ: ಕಿತ್ತೂರು ಅರಮನೆ ಹಾಗೂ ಕೋಟೆ ಅಭಿವೃದ್ಧಿಯನ್ನು ಅಕ್ಟೋಬರ್ 2024ರ ಕಾಲಮಿತಿಯೊಳಗೆ ಮುಗಿಸಬೇಕು ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಕಿತ್ತೂರು ಅಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳಿಗೆ ಸೂಚಿಸಿದರು.

ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ಶುಕ್ರವಾರ ಏರ್ಪಡಿಸಿದ್ದ ಕಿತ್ತೂರು ಅಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳ ಜೊತೆಗೆ ಸಭೆ ನಡೆಸಿ ಮಾತನಾಡಿದ ಸಚಿವ ಕೃಷ್ಣ ಬೈರೇಗೌಡ ಅವರು, "ಬ್ರಿಟೀಷರ ವಿರುದ್ಧ ಕಿತ್ತೂರು ರಾಣಿ ಚೆನ್ನಮ್ಮ ಸೇನೆ ಮೊದಲ ಗೆಲುವು ಸಾಧಿಸಿದ್ದ ಐತಿಹಾಸಿಕ ವಿಜಯಕ್ಕೆ 2024 ಅಕ್ಟೋಬರ್ ಗೆ 200 ವರ್ಷವಾಗಲಿದೆ. ಇದು ಇಡೀ ನಾಡಿನ ಹೆಮ್ಮೆಯ ವಿಚಾರಗಳಲ್ಲೊಂದು. ಈ ನಿಟ್ಟಿನಲ್ಲಿ ಸರ್ಕಾರ ಐತಿಹಾಸಿಕ ಕಾರ್ಯಕ್ರಮ ಯೋಜಿಸುವ ಆಲೋಚನೆಯಲ್ಲಿದ್ದು, ಅಷ್ಟರೊಳಗೆ ಕಿತ್ತೂರು ಕೋಟೆ ಹಾಗೂ ಅರಮನೆ ಹಾಗೂ ರಾಣಿ ಚೆನ್ನಮ್ಮ ಅವರ ಸಮಾಧಿ ಸ್ಥಳ ಸಂಪೂರ್ಣ ಅಭಿವೃದ್ಧಿಯಾಗಬೇಕು. ಅಲ್ಲದೆ, ಈ ಸ್ಥಳಗಳು ಪ್ರವಾಸಿ ತಾಣವಾಗಿಯೂ ಜನರನ್ನು ಸೆಳೆಯುವಂತಿರಬೇಕು" ಎಂದು ಅಧಿಕಾರಿಗಳಿಗೆ ಸಚಿವ ಕೃಷ್ಣ ಬೈರೇಗೌಡ ಅವರು ಸೂಚಿಸಿದರು. ಕೋಟೆ ಹಾಗೂ ಅರಮನೆಯನ್ನು ಸಂರಕ್ಷಿಸುವುದು ನಮ್ಮ ಹೊಣೆ ಮತ್ತು ಜವಾಬ್ದಾರಿ. ನಮ್ಮ ಶ್ರೀಮಂತ ಇತಿಹಾಸ ಹಾಗೂ ಪರಂಪರೆಯ ಕುರುಹುಗಳನ್ನು ಉಳಿಸುವುದು ಮತ್ತು ಮುಂದಿನ ಪೀಳಿಗೆಗೆ ದಾಟಿಸುವುದು ನಮ್ಮ ಮೇಲಿರುವ ಮಹತ್ತರವಾದ ಜವಾಬ್ದಾರಿಯೂ ಆಗಿದೆ. ಹೀಗಾಗಿ ಮುಂದಿನ 200 ವರ್ಷಗಳನ್ನು ಗಮನದಲ್ಲಿಟ್ಟು ಮುಂದಾಲೋಚನೆಯಿಂದಾಗಿ ಈ ತಾಣಗಳನ್ನು ಅಭಿವೃದ್ಧಿಪಡಿಸಬೇಕು ಎಂದರು.

ಅಭಿವೃದ್ಧಿ ವಿಚಾರದಲ್ಲಿ ಪ್ರಾಚೀನತೆಯ ಅಂಶಗಳನ್ನೂ ಒಳಗೊಂಡಿರಬೇಕು. ನೋಡುಗರಿಗೆ ಇದು ನಮ್ಮದೇ ಇತಿಹಾಸ ಎಂದು ಸೆಳೆಯುವಂತಿರಬೇಕು. ಈ ನಿಟ್ಟಿನಲ್ಲಿ ಪ್ರಾಧಿಕಾರ ಅಧಿಕಾರಿಗಳು ಪುರಾತತ್ವ ಇಲಾಖೆಯ ಸಲಹೆ ಸೂಚನೆಗಳನ್ನು ಪಡೆದುಕೊಳ್ಳಬೇಕು. ಅವರ ಮೇಲ್ವಿಚಾರಣೆಯಲ್ಲಿ ಎಲ್ಲಾ ಕೆಲಸಗಳೂ ನಡೆಯಬೇಕು ಎಂದು ಅವರು ಸೂಚಿಸಿದರು.

ಪ್ರಾಧಿಕಾರದ ಖಾತೆಯಲ್ಲಿ ಈಗಾಗಲೇ 14.5 ಕೋಟಿ ರೂ. ಹಣ ಇದೆ. ಮುಂದಿನ ವರ್ಷದ ಅನುದಾನವೂ ಸೇರಿ ಕನಿಷ್ಟ 20 ಕೋಟಿ ರೂ. ಪ್ರಾಧಿಕಾರಕ್ಕೆ ಸಿಗಲಿದೆ. ಅಲ್ಲದೆ, ವಿಶೇಷ ಪ್ಯಾಕೇಜ್ ನೀಡಲು-ಕೋಟೆ-ಅರಮನೆ ಅಭಿವೃದ್ಧಿ ಕಾಮಗಾರಿಗೆ ಸಂಬಂಧಿಸಿದ ವೆಚ್ಚವನ್ನು ಬಜೆಟ್ ನಲ್ಲಿ ಸೇರಿಸಲೂ ಸಹ ಸರ್ಕಾರ ಸಿದ್ದವಾಗಿದೆ ಎಂದು ಸಭೆಯಲ್ಲಿ ಸಚಿವ ಕೃಷ್ಣ ಬೈರೇಗೌಡ ಅವರು ಭರವಸೆ ನೀಡಿದರು.



## ಜ್ಞಾನವಾಪಿ ಮಸೀದಿ ಪ್ರಕರಣ: ತೀರ್ಪು ಕಾಯ್ದಿರಿಸಿದ ಹೈಕೋರ್ಟ್

ಅಲಹಾಬಾದ್: ವಾರಣಾಸಿ ಯ ಜ್ಞಾನವಾಪಿ ಮಸೀದಿಯ ಸ್ಥಳದಲ್ಲಿ ದೇವಾಲಯ ಮರುಸ್ಥಾಪಿಸುವಂತೆ ಕೋರಿ ಸಲ್ಲಿಸಿದ್ದ ಅರ್ಜಿಯ ವಿಚಾರಣಾ ಯೋಗ್ಯತೆಯನ್ನು ಪ್ರಶ್ನಿಸಿ ಸಲ್ಲಿಸಿರುವ ಅರ್ಜಿಯ ವಿಚಾರಣೆಯನ್ನು ಶುಕ್ರವಾರ ಪೂರ್ಣಗೊಳಿಸಿದ ಅಲಹಾಬಾದ್ ಹೈಕೋರ್ಟ್, ತೀರ್ಪ ಕಾಯ್ದಿರಿಸಿದೆ.

ನ್ಯಾಯಮೂರ್ತಿ ರೋಹಿತ್ ರಂಜನ್ ಅಗರವಾಲ್ ಅವರು ಕಕ್ಷಿದಾರರ ಪರ ವಕೀಲರ ವಾದ ಆಳಿಸಿದ ನಂತರ ತೀರ್ಪನ್ನು ಕಾಯ್ದಿರಿಸಿದರು. ಪ್ರಕರಣದ ತೀರ್ಪಿನ ದಿನಾಂಕವನ್ನು ನ್ಯಾಯಾಲಯ ನಿರ್ಧರಿಸುತ್ತದೆ.

ವಾರಣಾಸಿಯ ಅಂಜುಮನ್ ಇಂತೇಝಾಮಿಯಾ ಮಸೀದಿ ಸಮಿತಿ ಹಾಗೂ ಉತ್ತರ ಪ್ರದೇಶ ಸುನ್ನಿ ಸೆಂಟ್ರಲ್ ವಕ್ಫ್ ಬೋರ್ಡ್, ವಾರಣಾಸಿಯ ಜ್ಞಾನವಾಪಿ ಮಸೀದಿಯ ಸ್ಥಳದಲ್ಲಿ ದೇವಾಲಯ ಮರುಸ್ಥಾಪಿಸುವಂತೆ ಕೋರಿ ಸಲ್ಲಿಸಿದ್ದ ಅರ್ಜಿಯ ವಿಚಾರಣಾಯೋಗ್ಯತೆಯನ್ನು ಪ್ರಶ್ನಿಸಿ ಹೈಕೋರ್ಟ್ ಗೆ ಅರ್ಜಿ ಸಲ್ಲಿಸಿವೆ.

ಪ್ರಸ್ತುತ ಜ್ಞಾನವಾಪಿ ಮಸೀದಿ ಇರುವ ಸ್ಥಳದಲ್ಲಿ ಪುರಾತನ ದೇವಾಲಯ ಮರುಸ್ಥಾಪಿಸುವಂತೆ ಕೋರಿ ದಾವೆ ಹೂಡಲಾಗಿದೆ. ಮಸೀದಿಯು ದೇವಾಲಯದ ಒಂದು ಭಾಗವಾಗಿತ್ತು ಎಂದು ಅರ್ಜಿಯಲ್ಲಿ ಹೇಳಲಾಗಿದೆ.

## ವಕೀಲರ ದಿನಾಚರಣೆ ಕಾರ್ಯಕ್ರಮ




ಬೈಲಹೊಂಗಲ: ವಕಿಲ ವೃತ್ತಿಯಲ್ಲಿ ಯಶಸ್ವಿಯಾಗಲು ನಿರಂತರ ಅಧ್ಯಾಯನ, ಪ್ರಾಮಾಣಿಕತೆ, ಚಾಣಕ್ಷತೆ ಹಾಗೂ ಧೈರ್ಯದಿಂದ ಮುನ್ನುಗ್ಗಿದಾಗ ಯಶಸ್ವಿ ಸಾಧ್ಯ ಎಂದು ಹಿರಿಯ ದಿವಾಣಿ ನ್ಯಾಯಾಧೀಶರಾದ ಉಷಾರಾಣಿ. ಆರ್ ಅಭಿಪ್ರಾಯಪಟ್ಟರು.

ಪಟ್ಟಣದ ನ್ಯಾಯವಾದಿಗಳ ಸಂಘದಲ್ಲಿ ನಡೆದ ವಕೀಲರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ನ್ಯಾಯವಾದಿಗಳು ವೃತ್ತಿಯಲ್ಲಿ ನೈಪುಣ್ಯತೆ ಸಾಧಿಸಬೇಕಾಂದರೆ. ನ್ಯಾಯವಾದಿಗಳು ತಮ್ಮ ಒಳ್ಳೆಯ ಚಾರಿತ್ರ್ಯ, ಮೃದುವಾದ ಸತ್ಯಪರ ನುಡಿಗಳು, ನ್ಯಾಯ ಬೇಡಿ ಬಂದ ಕಕ್ಷಿದಾರರಿಗೆ ನ್ಯಾಯ ಒದಗಿಸುವತ್ತ ವಕೀಲರ ಚಿತ್ತವಿರಬೇಕೆಂದರು.

ಪ್ರಧಾನ ದಿವಾಣಿ ನ್ಯಾಯಾಧೀಶ ಮನು ಶರ್ಮಾ ಮಾತನಾಡಿ, ಜೀವನದಲ್ಲಿ ಕಷ್ಟ ಕಾರ್ಪಣ್ಯಕ್ಕೆ ತುತ್ತಾದ ಕಕ್ಷಿದಾರ ಯಾರ ಮೇಲೆಯು ನಂಬಿಕೆ ಇಡದೆ ನ್ಯಾಯವಾದಿಗಳ ಮೇಲೆ ನಂಬಿಕೆಯನ್ನಿಟ್ಟು ತಮ್ಮ ಹತ್ತಿರ ಬಂದಾಗ ಪ್ರಾಮಾಣಿಕವಾಗಿ ಆತನಿಗೆ ನ್ಯಾಯ ಒದಗಿಸುವ ಕರ್ತವ್ಯ ವಕೀಲರ ಮೇಲೆ ಇರುತ್ತದೆ. ಇದಕ್ಕಾಗಿ ವಕೀಲರು ಕಠಿಣ ಪರಿಶ್ರಮ ಪಡಬೇಕು ಎಂದರು.

ವಕೀಲ ವೃತ್ತಿ ಸ್ವತಂತ್ರ ವೃತ್ತಿಯಾದರು ಕಾನೂನಿನ ಅಡಿಯಲ್ಲಿ ಪ್ರಾಮಾಣಿಕತೆಯಲ್ಲಿ ಮುಂದುವರೆಯಬೇಕು ವಿನಹ ಹಣದ ಮೇಲೆ ವಕೀಲ ವೃತ್ತಿ ನಿಲ್ಲಬಾರದು ಎಂದರು. ಸರ್ಕಾರಿ ಸಹಾಯಕ ಅಭಿಯೋಜಕ ಎಮ್.ಎಸ್. ದೇಶಪಾಂಡೆಯವರು ನೂತನ ಭಾರತೀಯ ನಾಗರೀಕ ಸಂರಕ್ಷಣಾ ಕಾನೂನು ಸಂಹಿತೆ ಬಗ್ಗೆ ಮಾತನಾಡಿದರು.

ಸಂಘದ ಅಧ್ಯಕ್ಷ ಎಮ್.ಆರ್.ಮೆಳವೆಂಕಿ ಅಧ್ಯಕ್ಷತೆವಹಿಸಿದ್ದರು. ಹಿರಿಯ ನ್ಯಾಯವಾದಿ ಬಿ.ಆರ್. ಅಲಸಂಧಿ, ಜೇ.ಕೆ.ರಿಝಾ, ರಾಜಶೇಖರ ಎತ್ತಿನಮನಿ ಅವರನ್ನು ಸತ್ಕರಿಸಲಾಯಿತು.

ವೆದಿಕೆಯ ಮೇಲೆ ಕಿರಿಯಶ್ರೇಣಿ ನ್ಯಾಯಾಧೀಶ ಸುನಿಲಕುಮಾರ್, ನ್ಯಾಯವಾದಿಗಳ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಎಮ್.ವಾಯ್.ಸೋಮಣ್ಣವರ, ಗ್ರಾಂಥಾಲಯ ಅಧ್ಯಕ್ಷ ಬಿ.ಬಿ.ಹುಲಮನಿ, ಸಹಕಾರಿ ಸಂಘದ ಅಧ್ಯಕ್ಷ ಎಸ್. ಎಮ್.ಅಬ್ಬಾಯಿ, ಸರ್ಕಾರಿ ಅಭಿಯೋಜಕಿ, ಸುನೀತಾ ಆರ್. ಉಪಾಧ್ಯಕ್ಷ ಅದ್ರಶ್ಯ ಸಿದ್ರಾಮನಿ ಪ್ರಧಾನ ಕಾರ್ಯದರ್ಶಿ ವಿ.ಜಿ.ಕಟದಾಳ, ಆಪರ ಸರಕಾರಿ ವಕೀಲ ಸಂತೋಷ ಭಾಂವಿ ವೇದಿಕೆಯ ಮೇಲಿದ್ದರು. ಕಾರ್ಯಕ್ರಮದಲ್ಲಿ ಹಿರಿಯ ನ್ಯಾಯವಾದಿಗಳಾದ ಬಿ.ಎಸ್.ಕಿವಡಸಣ್ಣವರ, ಎಸ್.ಡಿ.ಅಲ್ಲಪ್ಪನವರ, ಡಿ.ಆರ್.ಜೋಶಿ, ಸುಜಾತಾ ಚಿಕ್ಕಮಠ, ಉಮಾ ಬುಲಾಕೆ, ಬಿ.ಎಮ್.ಮುಲಿಮನಿ, ಎಸ್.ಬಿ.ರೊಟ್ಟಿ, ಜಿ.ಬಿ.ಶಿಗಿಹಳ್ಳಿ, ಎ.ಎ.ಅಥಣಿ, ಅಶೋಕ ನೇಗಿನಹಾಳ,ಎನ್.ಎಮ್. ಕುಲಕರ್ಣಿ, ಎಸ್.ಸಿ.ಚಿಕ್ಕನಗೌಡರ, ಎಫ್.ಎಸ್.ಸಿದ್ದನಗೌಡರ, ಎಮ್.ಎಮ್.ಅಬ್ಬಾಯಿ, ಎಸ್. ವಾಯ್.ಪಾಟೀಲ, ಎಸ್.ಬಿ. ಲದ್ದಿಗಟ್ಟಿ, ಎಮ್. ಎಸ್.ಅಂದಾನಶೆಟ್ಟಿ, ಪಿ.ಡಿ.ಮರಕಟ್ಟಿ, ಐ.ಬಿ.ಸಿದ್ದಣ್ಣವರ, ಹಾಗೂ ನುರಾರು ವಕಿಲರು ಇದ್ದರು.

# ಸುವರ್ಣಸೌಧದ ಎದುರು ಡ್ರೈವಿಂಗ್ ಸ್ಕೂಲ್ ಮಾಲೀಕರ ಪ್ರತಿಭಟನೆ

ಬೆಳಗಾವಿ: ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ಮೋಟಾರ್ ಡ್ರೈವಿಂಗ್ ಸ್ಕೂಲ್ ಮಾಲೀಕರ ಒಕ್ಕೂಟದ ವತಿಯಿಂದ ಸುವರ್ಣಸೌಧ ಬಳಿ ಶುಕ್ರವಾರ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯಲ್ಲಿ ಒಕ್ಕೂಟದ ರಾಜ್ಯಾಧ್ಯಕ್ಷ ಆನಂದ ಪಾಟೀಲ ಮಾತನಾಡಿ, ಕರ್ನಾಟಕ ರಾಜ್ಯದಲ್ಲಿ ಸುಮಾರು 2000 ವರೆಗೆ ಮೋಟಾರ್ ಡ್ರೈವಿಂಗ್ ಸ್ಕೂಲ್‌ಗಳು ಸಾರ್ವಜನಿಕರಿಗೆ ಉತ್ತಮ ಸೇವೆ ನೀಡುತ್ತಾ. ಮೋಟಾರ್ ಡ್ರೈವಿಂಗ್ ಸ್ಕೂಲಗಳನ್ನೇ ನಂಬಿ ಸಾವಿರಾರು ಕುಟುಂಬಗಳು ಜೀವನ ನಡೆಸುತ್ತಿದ್ದೇವೆ. ಆದರೆ 2020 ರಲ್ಲಿ ದೇಶಾದ್ಯಂತ ಎರಡು ಬಾರಿ ಕೊರೋನಾ ಲಾಕ್ ಡೌನ್ ಜಾರಿಗೆಯಿಂದ ಮೋಟಾರ್ ಡ್ರೈವಿಂಗ್ ಸ್ಕೂಲಗಳ ವ್ಯವಹಾರದ ಮೇಲೆ ಭಾರಿ ಹೊಡೆತ ಬಿದ್ದು. ಸದರಿ ಸ್ಕೂಲ್‌ಗಳ ಮಾಲೀಕರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಈ ನಿಟ್ಟಿನಲ್ಲಿ ತರಬೇತಿ ಶಾಲೆಗಳ ನಿರ್ವಹಣೆ ಹಾಗೂ ವಾಹನಗಳ ಮೇಲಿನ ಸಾಲದ ಕಂತುಗಳು ಸರಿಯಾದ ಸಮಯಕ್ಕೆ ಹಣಕಾಸು ಸಂಸ್ಥೆಯವರಿಗೆ ಭರಿಸಲಿಕ್ಕೆ ಆಗದೆ ತುಂಬಾ ತೊಂದರೆಯಲ್ಲಿದ್ದೇವೆ ಎಂದರು.

ಆದರೆ ಕೇಂದ್ರ ಸರ್ಕಾರದ ಮೋಟಾರ್ ವಾಹನ ಹೊಸ ನೀತಿಯಿಂದ ನಮ್ಮ ಮೋಟಾರ್ ವಾಹನ ತರಬೇತಿ ಶಾಲೆಗಳಿಗೆ ನೀಡಿದ ಜವಾಬ್ದಾರಿಯನ್ನು ಹಾಗೂ ನಮ್ಮ ಹಕ್ಕುಗಳನ್ನು ಕಿತ್ತುಕೊಳ್ಳುತ್ತಿದೆ. ಈ ಹೊಸ ನೀತಿಯಿಂದ ಸಾರ್ವಜನಿಕರಿಗೆ ಯಾವುದೆ ರೀತಿ ಪ್ರಯೋಜನವಾಗಿಲ್ಲ, ಬದಲಿಗೆ ಅಪಘಾತಗಳ ಸಂಖ್ಯೆ ಜಾಸ್ತಿ ಆಗುತ್ತಿವೆ. ಇದರಿಂದ ಎಷ್ಟು ಕುಟುಂಬಗಳು ತಬ್ಬಲಿಗಳಾಗಿದ್ದಾವೆ. ಯಾಕೆಂದರೆ ಕೇಂದ್ರ ಸರ್ಕಾರದ ಚಾಲನ ಪರವಾನಿಗೆ ನೀಡುವ ಹೊಸ ನೀತಿಯಲ್ಲಿ ಅವೈಜ್ಞಾನಿಕ ನಿಯಮಗಳು ಕಂಡುಬರುತ್ತವೆ.

ಅದೇನೆಂದರೆ ಯಾವುದೇ ವರ್ಗದ ವಾಹನ ಸವಾರನು ತಾನು ವಾಹನ ಚಾಲನೆ ಪರವಾನಿಗೆ ಪಡೆಯಬೇಕಾದರೆ ಅವನಿಗೆ ಸಂಚಾರಿ ನಿಯಮಗಳ ಬಗ್ಗೆ ಸಂಪೂರ್ಣ ಅರಿವಿರಬೇಕು. ಅದೇ ರೀತಿಯಾಗಿ ಮೋಟಾರ್ ವಾಹನ ಕಾಯ್ದೆಗಳ




ಬಗ್ಗೆ ತಿಳುವಳಿಕೆ ಇರಬೇಕು. ಇದು ಯಾವದನ್ನು ಮಾನದಂಡವಾಗಿ ಪರಿಗಣಿಸದೆ ಸಾರ್ವಜನಿಕರ ಪ್ರಾಣಕ್ಕೆ ಕುತ್ತು ತರುವಂತಹ ನಿಯಮಗಳನ್ನು ಜಾರಿಗೆ ತಂದಿರುತ್ತದೆ. ಇಂದಿನ ದಿನಮಾನದಲ್ಲಿ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಫೇಸ್ ಲೇಸ್ (FACE LESS) ಲೈಸನ್ಸ್ ಪಡೆಯುವ ನೀತಿಯಲ್ಲಿ ಕೆಲವೊಂದು ಅನ್ಯೋನ್ಯತೆಗಳಿದ್ದು, ಅದೇ ರೀತಿ ಲೈಸನ್ಸ್ ನೀಡಿಕೆಯಲ್ಲಿ ಅಕ್ರಮ ನಡೆಯುವ ಸಾಧ್ಯತೆ ಹೆಚ್ಚು ಇರುತ್ತದೆ ಎಂದು ಆರೋಪಿಸಿದರು.

ಈಗಿನ ಸಾರಿಗೆ ಸಚಿವರಾದ ಸನ್ಮಾನ್ಯ ಶ್ರೀ. ರಾಮಲಿಂಗಾ ರೆಡ್ಡಿ ರವರಿಗೂ ಕೂಡ ಮನವಿ ಸಲ್ಲಿಸಿದ್ದು, ಅವರು ಕೂಡ ಈಗಿನ ಸಾರಿಗೆ ಆಯುಕ್ತರಿಗೆ ಪತ್ರ ಬರೆದು ರಾಜ್ಯ ಮೋಟಾರ್ ವಾಹನ ಚಾಲನಾ ತರಬೇತಿ ಶಾಲೆಗಳ ಮಾಲೀಕರ ಸಂಘಗಳ ಒಕ್ಕೂಟದ ಪದಾಧಿಕಾರಿಗಳ ಜೊತೆ ಸಭೆ ನಡೆಸಿ ಅವರ ಸಮಸ್ಯೆಗೆ ಶೀಘ್ರ ಪರಿಹಾರ ನೀಡಿ ಎಂದು ಪತ್ರ ಬರೆದರೂ ಕೂಡ ಈಗಿನ ಆಯುಕ್ತರು ಕೂಡ ಯಾವುದೇ ರೀತಿ ನಮಗೆ ಸ್ಪಂದಿಸುತ್ತಿಲ್ಲ.

ಆದ್ದರಿಂದ ನಾವು ಬೇಸತ್ತು, ಬೆಳಗಾವಿಯ ಸುವರ್ಣಸೌಧದ ಮುಂದೆ ರಾಜ್ಯದ ಎಲ್ಲ ಮೋಟಾರ್ ಡ್ರೈವಿಂಗ್ ಸ್ಕೂಲ್ ಮಾಲೀಕರು ಹಾಗೂ ಸಿಬ್ಬಂದಿಗಳು ಒಂದು ದಿನದ ಧರಣಿ ಸತ್ಯಾಗ್ರಹ ಮಾಡುವ ಮೂಲಕ ಮತ್ತು ಅಪಘಾತ ಮುಕ್ತ ರಾಜ್ಯವನ್ನಾಗಿ ಮಾಡಲು ಸಂಕಲ್ಪದೊಂದಿಗೆ ಮತ್ತು ಸಾರ್ವಜನಿಕರ ಹಿತ ದೃಷ್ಟಿಯಿಂದ ಮತ್ತು ರಾಜ್ಯದಲ್ಲಿ ಮೋಟಾರ್ ಡ್ರೈವಿಂಗ್ ಸ್ಕೂಲ್‌ಗಳನ್ನು ಅವಲಂಬಿಸಿಕೊಂಡು ಸಾವಿರಾರು ಕುಟುಂಬಗಳ ಬದುಕನ್ನು ರಕ್ಷಿಸಬೇಕೆಂದು ವಿನಂತಿಸಿದರು.

ಬೇಡಿಕೆಗಳು: ರಸ್ತೆ ಸುರಕ್ಷತೆಯ ದೃಷ್ಟಿಯಿಂದ ವಾಹನ ಚಾಲಕರಿಗೆ ಕಲಿಕಾ ಲೈಸನ್ಸ್ ಪರೀಕ್ಷೆಯನ್ನು ಕಡ್ಡಾಯವಾಗಿ ಮೋಟಾರ್ ಡ್ರೈವಿಂಗ್ ಸ್ಕೂಲ್ ಗಳಲ್ಲಿಯೇ, ನಡೆಸಲು ಸರ್ಕಾರ ಅನುಮತಿ ನೀಡಬೇಕು. ಅದೇ ರೀತಿಯಾಗಿ ವೇಸ್‌ಸ್ (FACE LESS) ವ್ಯವಸ್ಥೆಯನ್ನು ರದ್ದುಗೊಳಿಸಬೇಕು, ವಾಹನ ಚಾಲನಾ ಪರವಾನಿಗೆ (LL) ಪಡೆಯುವ ಪ್ರತಿಯೊಬ್ಬ ವಾಹನ ಚಾಲಕರಿಗೆ ರಸ್ತೆ ನಿಯಮ ಹಾಗೂ ರಸ್ತೆ ಸುರಕ್ಷತೆಯ ಬಗ್ಗೆ ತಿಳಿವಳಿಕೆ ಮತ್ತು ಕಾನೂನಿನ ಅರಿವು ಅವಶ್ಯಕತೆ ಇರುತ್ತದೆ.

ಆದ್ದರಿಂದ ವಾಹನ ಚಾಲನಾ ಪರವಾನಿಗೆ ಪಡೆಯುವ ಅಭ್ಯರ್ಥಿಗಳು ಕಲಿಕಾ ಚಾಲನಾ ಪತ್ರ ಪಡೆಯುವ ಪ್ರತಿಯೊಬ್ಬ ಅಭ್ಯರ್ಥಿಗೆ ವಾಹನ ಚಾಲನಾ ತರಬೇತಿ ಶಾಲೆಗಳಿಂದ ನಮೂನೆ-14 ಪ್ರಮಾಣ ಪತ್ರ ಕಡ್ಡಾಯಗೊಳಿಸಬೇಕು, ರಾಜ್ಯದಲ್ಲಿ ತರಬೇತಿ ಶಾಲೆಗಳ ವಾಹನ ತರಬೇತಿ ಬೀಡುವ ಶುಲಕ್ವನ್ನು ಹೆಚ್ಚಳ ಮಾಡಬೇಕು, ಮಕ್ಕದ ರಾಜ್ಯಗಳಾದ ಮಹಾರಾಷ್ಟ್ರ ಮತ್ತು ತೆಲಂಗಾಣ ರಾಜ್ಯಗಲ್ಲಿ ವಹನಗಳ ವರ್ಗಾ ಆಧಾರತ ಚಾಲನಾ ಲೈಸೆನ್ಸ್ ನೀಡುತ್ತಿದ್ದಾರೆ.

ಅದನ್ನು ನಮ್ಮ ರಾಜ್ಯದಲ್ಲೇ ಸಾರ್ವಜನಿಕರಿಗೆ ಸಿಗುವ ಹಾಗೇ ಅನುಕೂಲ ಮಾಡಬೇಕು ಎಂಬಿತ್ಯಾದಿ ಬೇಡಿಕೆಗಳನ್ನು ಮುಂದಿರಿಸಿದ್ದಾರೆ.

ಪ್ರತಿಭಟನೆಯಲ್ಲಿ ನಾಗರಾಜ ಎಚ್. ಸಿ, ಬಸವರಾಜ ಹಾನಗಲ್, ಸದಾಶಿವಯ್ಯ ಟಿ. ಆರ್, ಬಸವರಾಜ ಕಡ್ಲಿ, ಯಲ್ಲಪ್ಪ ದೊಡಮನಿ ಸೇರಿದಂತೆ ನೂರಾರು ಸಂಖ್ಯೆಯಲ್ಲಿ ಮೋಟಾರ್ ಡ್ರೈವಿಂಗ್ ಸ್ಕೂಲ್ ಮಾಲೀಕರು ಭಾಗವಹಿಸಿದ್ದರು.

## ಕನ್ನಡ ಚಿತ್ರರಂಗದ ಹಿರಿಯ ನಟಿ ಡಾ.ಲೀಲಾವತಿ ನಿಧನಕ್ಕೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಸಂತಾಪ

ಬೆಳಗಾವಿ: ಖ್ಯಾತ ನಟಿ ಲೀಲಾವತಿ ನಿಧನಕ್ಕೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

50 ವರ್ಷಗಳ ಕಾಲ ಕನ್ನಡ ಚಿತ್ರರಂಗಕ್ಕೆ ಸುದೀರ್ಘ ಸೇವೆ ಸಲ್ಲಿಸಿದ್ದ ಲೀಲಾವತಿ 600ಕ್ಕೂ ಹೆಚ್ಚು ಸಿನಿಮಾಗಳಲ್ಲಿ ಅಭಿನಯಿಸಿದ್ದರು.

ಹಲವಾರು ಸಮಾಜಮುಖಿ ಕಾರ್ಯಗಳಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದರು. ಸದಾಕಾಲ ರೈತರ ಬಗ್ಗೆ ಕಾಳಜಿ ಹೊಂದಿದ್ದರು.

ತಮ್ಮದೇ ಹಣದಲ್ಲಿ ಪಶುಚಿಕಿತ್ಸಾ ಆಸ್ಪತ್ರೆಯನ್ನು ನಿರ್ಮಿಸಿದ್ದರು ಎಂದು ಸ್ಮರಿಸಿರುವ ಸಚಿವರು, ಅವರ ನಿಧನದ ಸುದ್ದಿ ಕೇಳಿ ನೋವಾಯಿತು ಎಂದಿದ್ದಾರೆ.

ಭಗವಂತ ಅವರ ಆತ್ಮಕ್ಕೆ ಶಾಂತಿಯನ್ನು ನೀಡಲಿ, ಕುಟುಂಬಸ್ಥರಿಗೆ ನೋವು ಸಹಿಸುವ ಶಕ್ತಿಯನ್ನು ದಯಪಾಲಿಸಲಿ ಎಂದು ಅವರು ಪ್ರಾರ್ಥಿಸಿದ್ದಾರೆ.

# ಹೊಸ ಪಶು ಚಿಕಿತ್ಸಾಲಯದ ಉದ್ಘಾಟನೆ ಸಮಾರಂಭ ಡಿ. 09 ರಂದು

ಬೆಳಗಾವಿ: ಬೆಳಗಾವಿಯ ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ಹಾಗೂ ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಬೆಳಗಾವಿ ತಾಲೂಕಿನ ಮುಚ್ಚಂಡಿ ಗ್ರಾಮಕ್ಕೆ ಸ್ಥಳಾಂತರ ದಗೊಂಡ ಹೊಸ ಪಶು ಚಿಕಿತ್ಸಾಲಯದ ಉದ್ಘಾಟನೆ ಹಾಗೂ ವಿವಿಧ ಯೋಜನೆಗಳ ಫಲಾನುಭವಿಗಳಿಗೆ ಚೆಕ್ ವಿತರಣೆಯ ಸಮಾರಂಭವು ಡಿಸೆಂಬರ್ 09, 2023 ರಂದು ಬೆಳಿಗ್ಗೆ 10 ಗಂಟೆಗೆ ಮುಚ್ಚಂಡಿಯ ಹನುಮಾನ ಚೌಕ ಇಲ್ಲಿ ಜರುಗಲಿದೆ.

ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಲ. ಜಾರಕಿಹೊಳಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರಾದ ಲಕ್ಷ್ಮೀ ಆರ್.ಹೆಬ್ಬಾಳಕರ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ.

ಪಶು ಸಂಗೋಪನೆ ಮತ್ತು ರೇಷ್ಮೆ ಇಲಾಖೆ ಸಚಿವರಾದ ಕೆ. ವೆಂಕಟೇಶ್ ಕಾರ್ಯ ಕ್ರಮವನ್ನು ಉದ್ಘಾಟಿಸಲಿದ್ದಾರೆ.

ಕರ್ನಾಟಕ ಸರ್ಕಾರದ ಮುಖ್ಯ ಸಚೇತಕರು ಆದ ಅಶೋಕ್ ಮ.ಪಟ್ಟಣ, ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ-2 ನವದಹಲಿ ಪ್ರಕಾಶ್ ಬಾ. ಹುಕ್ಕೇರಿ ವಿಶೇಷ ಆಮಂತ್ರಿತರಿದ್ದಾರೆ. ಪಶು ಸಂಗೋಪನಾ ಇಲಾಖೆಯ ಸರ್ಕಾರದ ಕಾರ್ಯದರ್ಶಿಗಳಾದ ಸಲ್ಮಾ ಕೆ. ಫಾಹಿಮ್, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಸಂಜಯ್ ಬಿ. ಶೆಟ್ಟೆಣ್ಣವರ್, ಪೊಲೀಸ್ ಮಹಾನಿರಿಕ್ಷಕರಾದ ವಿಕಾಶ್ ಕುಮಾರ್ ವಿಕಾಶ್, ಜಿಲ್ಲಾಧಿಕಾರಿಗಳಾದ ನಿತೇಶ್ ಕೆ. ಪಾಟೀಲ, ಪೊಲೀಸ್ ಆಯುಕ್ತರಾದ ಎಸ್.ಎನ್. ಸಿದ್ದರಾಮಪ್ಪ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಭೀಮಾ ಶಂಕರ್ ಎಸ್. ಗುಳೇದ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಹರ್ಷಲ್ ಭೋಯರ್, ಪಶು ಪಾಲನೆ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ನಿರ್ದೇಶಕರಾದ ಮಂಜುನಾಥ ಎಸ್. ಪಾಳೇಗಾರ, ಜಂಟಿ ನಿರ್ದೇಶಕರಾದ ಡಾ. ಬಿ. ಎಲ್. ಪರಮೇಶ್ವರ ನಾಯಕ, ಉಪ ನಿರ್ದೇಶಕರಾದ ಡಾ. ರಾಜು ಕೂಲೇರ, ಮುಖ್ಯ ಪಶು ವೈದ್ಯಾಧಿಕಾರಿಗಳಾದ ಡಾ. ಆನಂದ್ ಪಾಟೀಲ್ ಹಾಗೂ ಮತ್ತೀತರರು ಉಪಸ್ಥಿತರಿರಲಿದ್ದಾರೆ.

# ಶಾಲಾ 'ಆಯಾ'ಗಳ ನೌಕರಿ ಖಾಯಂಗೊಳಿಸಿ, ಆರ್ಥಿಕ ಸೌಲಭ್ಯ ನೀಡುವಂತೆ ಅನಿರ್ದಿಷ್ಟಾವಧಿ ಧರಣಿ

ಬೆಳಗಾವಿ: ಸ.ಪ್ರಾ.ಶಾಲೆಗಳಲ್ಲಿ ಕೆಲಸ ಮಾಡುತ್ತಿರುವ "ಆಯಾ"ಗಳನ್ನು ಗ್ರೂಪ್-ಡಿ ನೌಕಕರೆಂದು ಖಾಯಂಗೊಳಿಸಿ ನಿವೃತ್ತಿ, ಆರ್ಥಿಕ ಸೌಲಭ್ಯಗಳನ್ನು ನಿಗಧಿಪಡಿಸಬೇಕೆಂದು ಆಗ್ರಹಿಸಿ, ಆಯಾಗಳ ಹಲವು ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಕರ್ನಾಟಕ ರಾಜ್ಯ ಸರಕಾರಿ ಪ್ರಾಥಮಿಕ ಶಾಲಾ ಆಯಾಗಳ ಸಂಘಟನೆಯಿಂದ ಸುವರ್ಣ ವಿಧಾನಸೌಧ ಎದುರು ಅನಿರ್ದಿಷ್ಟಾವಧಿ ಧರಣಿ ನಡೆಸಲಾಯಿತು.

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಗೆ ಸಂಬಂಧಿಸಿದ ಸರ್ಕಾರಿ ಪ್ರಾಥಮಿಕ ಹಿರಿಯ ಮತ್ತು ಕಿರಿಯ ಶಾಲೆಗಳಲ್ಲಿ ಕಳೆದ 40 ವರ್ಷಗಳಿಂದ "ಆಯಾ"ಗಳೆಂದು ಈ ಮಹಿಳೆಯರು ಕಾರ್ಯನಿರ್ವಹಿಸುತ್ತಿದ್ದಾರೆ. 2018 ರಿಂದ ಸರ್ಕಾರಿ ಆದೇಶದಂತೆ 6ನೇ ವೇತನ ಆಯೋಗದ ಪರಿಷ್ಕತ ವೇತನ ಶ್ರೇಣಿಯ ಗ್ರೂಪ್-ಡಿ ನೌಕರರ ಕನಿಷ್ಠ ಮೂಲ ವೇತನ 17,000/- ನೀಡಲಾಗುತ್ತಿದೆ. ಆದರೆ ಈ ಆಯಾಗಳನ್ನು ಗ್ರೂಪ್-ಡಿ ನೌಕರರೆಂದು ಖಾಯಂಗೊಳಿಸುತ್ತಿಲ್ಲಾ. ಹಾಗೂ ಈ ಆಯಾಗಳಿಗೆ 17,000/- ಸಂಬಳ ನೀಡಿ. 5 ವರ್ಷಗಳು ಸಾಗುತ್ತಿವೆ. ಈ 6ನೇ ವೇತನ ಆಯೋಗ 5 ವರ್ಷಗಳಿಗೊಮ್ಮೆ ಪರಿಷ್ಕರಿಸಲಾಗುತ್ತದೆ. ಆದರೆ ಆಯಾಗಳಿಗೆ 5 ವರ್ಷಗಳಾದರೂ ಆಯಾಗಳ 17,000/- ರೂ.ಗಳ ಮಾಸಿಕ ಗೌರವಧನವನ್ನು 24,000/- ರೂ.ಗಳಿಗೆ ಹೆಚ್ಚಿಸುತ್ತಿಲ್ಲಾ ಇದರ ಬಗ್ಗೆ ಗಂಭೀರವಾಗಿ ಚರ್ಚಿಸಿ ಸೂಕ್ತ ನ್ಯಾಯ ಒದಿಗಿಸಬೇಕು. ತಪ್ಪಿದಲ್ಲಿ ರಾಜ್ಯಪಾಲರಿಗೆ ಮನವಿ ನೀಡಲಾಗುವುದು ಎಂದರು.

**ಆಯಾಗಳ ಭೇಡಿಕೆಗಳು:**

1) ಕರ್ನಾಟಕ ಹೈಕೋರ್ಟ ಆದೇಶಗಳಂತೆ ಆಯಾಗಳನ್ನು ಗ್ರೂಪ್-ಡಿ ನೌಕರರೆಂದು ಖಾಯಂಗೊಳಿಸಿ ನಿವೃತ್ತಿ ನಂತರದ ಆರ್ಥಿಕ ಸೌಲಭ್ಯಗಳಾದ ಪಿಂಚಣಿ ಮತ್ತು ಅರಿಯರ್ಸ ನಿಗಧಿಪಡಿಸಿ ಸ್ಪಷ್ಟ ಸರ್ಕಾರಿ ಆದೇಶ ಹೊರಡಿಸಬೇಕು.

2. ಚಿಕ್ಕೋಡಿ ಜಿಲ್ಲೆಯ ಆಯಾಗಳ 2002 ರಿಂದ 2012ರ ವರೆಗೆ ನೀಡದೆ ತಡೆಹಿಡಿದ ಬೇಸಿಗೆ ರಜೆ




ಬಾಕಿ ವೇತನ ಹಾಗೂ ಅಕ್ಟೋಬರ್ 2018 ರಿಂದ ಮಾರ್ಚ 2019 ರವರೆಗೆ ನೀಡದೆ ತಡೆಹಿಡಿದ ಬಾಕಿ ವೇತನಕ್ಕೆ ಅವಶ್ಯವಿರುವ ಹೆಚ್ಚುವರಿ ಅನುದಾನವನ್ನು ಈ ಕೂಡಲೇ ಬಿಡುಗಡೆ ಮಾಡಬೇಕು.

3. ರಾಜ್ಯಾದ್ಯಂತ 2023ನೇ ಸಾಲಿನಲ್ಲಿ ನೀಡದೇ ತಡೆಹಿಡಿದ ಬೇಸಿಗೆ ರಜೆ ವೇತನ (ಏಪ್ರೀಲ್-ಮೇ) ವನ್ನು ಪಾವತಿಸಿ ಈ ಹಿಂದೆ ನೀಡಲಾಗುತ್ತಿದ್ದಂತೆ ಪ್ರತಿವರ್ಷವು ಆಯಾಗಳಿಗೆ ಬೇಸಿಗೆ ರಜೆ ಅವಧಿಯಲ್ಲಿ ವೇತನವನ್ನು ನೀಡಬೇಕು.

4. ಕಳೆದ 5 ವರ್ಷಗಳಿಂದ 6ನೇ ವೇತನ ಆಯೋಗದ ಗ್ರೂಪ್-ಡಿ ನೌಕರರ ಕನಿಷ್ಠ ಮೂಲ ವೇತನ 17000/- ರೂ.ಗಳನ್ನು ಪಡೆಯುತ್ತಿರುವ ಆಯಾಗಳ ವೇತನವನ್ನು 24000/- ರೂ.ಗಳಿಗೆ ಹೆಚ್ಚಿಸಬೇಕು.

5. ಬಾಗಲಕೋಟೆ ತಾಲೂಕಿನ 11 ಜನ ಆಯಾಗಳಿಗೆ ನಿವೃತ್ತಿ ನಂತರವೂ 3 ತಿಂಗಳು 20 ದಿನಗಳ ಕಾಲ ದುಡಿಸಿಕೊಂಡ ಹೆಚ್ಚುವರಿ ದಿನಗಳ ವೇತನ ಪಾವತಿಗಾಗಿ ಹೆಚ್ಚುವರಿ ಅನುದಾನವನ್ನು ಬಿಡುಗಡೆ ಮಾಡಬೇಕು.

6. ಕಲಬುರ್ಗಿ ಜಿಲ್ಲೆಯ ಅಫಜಲಪುರ ತಾಲೂಕಿನ ಸ್ವಪ್ನೇನ್ ಗಣಗಾಪುರ ಗ್ರಾಮದ ಸ.ಹಿ.ಪ್ರಾ.ಶಾಲೆಯ ಆಯಾ ನೀಲಮ್ಮ ನವರ ವಿನಾಕಾರಣ ತಡೆಹಿಡಿದ 10 ತಿಂಗಳ ವೇತನ ಪಾವತಿಸಬೇಕು ಹಾಗೂ ಇವರ ಇನ್ನುಳಿದ 2 ತಿಂಗಳ ಸೇವಾ ಅವಧಿಗೆ ಇವರನ್ನು ಸೇರಿಸಿಕೊಳ್ಳಬೇಕು.

7. ಹೈಕೋರ್ಟ ಹಾಗೂ ಕಾರ್ಮಿಕ ನ್ಯಾಯಾಲಯದ ಆದೇಶದಂತೆ ಬಾಗಲಕೋಟೆ ತಾಲ್ಲೂಕಿನ 13 ಜನ ಆಯಾಗಳಿಗೆ ನೀಡಿದ 64,236 ರೂ.ಗಳ ಕನಿಷ್ಠ ವೇತನ ವ್ಯತ್ಯಾಸದ ಬಾಕಿ ಮೊತ್ತವನ್ನು ರಾಜ್ಯದ ಎಲ್ಲಾ ಜಿಲ್ಲೆಯ ಆಯಾಗಳಿಗೆ ನೀಡಬೇಕು.

8. ವಯೋವೃದ್ಧ ಹಾಗೂ ಮೃತಪಟ್ಟ ಆಯಾಗಳ ಬದಲಿಗೆ ಅವರ ಹತ್ತಿರದ ಸಂಬಂಧಿಕರನ್ನು ಆಯಾ ಕೆಲಸಕ್ಕೆ ತೆಗೆದುಕೊಳ್ಳಬೇಕು ಮನವಿಯಲ್ಲಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಗಂಗಮ್ಮ ಕನಕನಗಿರಿ, ಎಂ ಸುಮಂಗಲ, ಸುಶೀಲಮ್ಮ ಮಾನ್ವಿ, ಶಾರದಾಬಾಯಿ, ಧಾರವಾಡ, ಲಕ್ಷ್ಮೀ ರಾಯಚೂರು, ಯಮನಮ್ಮ ಲೋಕಾಪುರ, ಸುವರ್ಣ ಹಿರೇಮಠ, ಸುಶೀಲಾ ಕಾವಲವಾಡ, ಮಾಚಮ್ಮ ಕೊಡಗು, ಶಾಂತಾ ಬೆಳಗಾವಿ, ಸರೋಜಮ್ಮ ನಾಗಮಂಡಲ, ಸಾವಿತ್ರಿಬಾಯಿ ಸೈಯ್ಯದ್, ಮರಿಯಮ್ಮ ಚಾಮರಾಜನಗರ, ಪದ್ಮಾವತಿ ಮೈಸೂರು ಹಾಗೂ ಇತರರು ಇದ್ದರು.

# ಜಮೀನುಗಳಿಗೆ ಹಕ್ಕು ಪತ್ರ ವಿತರಿಸುವಂತೆ ಹೆದ್ದಾರಿ ತಡೆದು ರೈತರ ಪ್ರತಿಭಟನೆ

ಮೊದಲನೇ ಪುಟದಿಂದ}

ಚನ್ನಮ್ಮನ ಕಿತ್ತೂರು: ಸರಕಾರಿ ಭೂಮಿ ಸಾಗುವಳಿ ನಡೆಸುತ್ತಿರುವ ಬಡ ರೈತರಿಗೆ ಹಕ್ಕು ಪತ್ರಗಳನ್ನು ನೀಡಬೇಕು ಎಂದು ಒತ್ತಾಯಿಸಿ ಚನ್ನಮ್ಮನ ಕಿತ್ತೂರು ತಾಲೂಕಿನ ಕುಲವಳ್ಳಿ ಗಾಪಂ ವ್ಯಾಪ್ತಿಗೆ ಬರುವ 9 ಹಳ್ಳಿಗಳ ರೈತರು ತಮ್ಮ ಅವರ ಕುಟುಂಬ ಸಮೇತ ಆಗಮಿಸಿ ಚನ್ನಮ್ಮನ ವೃತ್ತದಲ್ಲಿ ಪ್ರತಿಭಟನೆ ನಡೆಸಿ ನಂತರ ಹೆದ್ದಾರಿ ತಡೆದು ಶುಕ್ರವಾರ ಆಕ್ರೋಶ ಹೊರಹಾಕಿದರು. ಕುಳವಳ್ಳಿ ಗ್ರಾಪಂ ವ್ಯಾಪ್ತಿಗೆ ಬರುವ 9 ಹಳ್ಳಿಗಳ ರೈತರು ಅನೇಕ ವರ್ಷಗಳಿಂದ ಕುಲವಳ್ಳಿ ಸರಹದ್ದಿನಲ್ಲಿ ಬರುವ ಜಮೀನುಗಳನ್ನು ಉಳಿಮೆ ಮಾಡುತ್ತಾ ಬಂದಿದ್ದು, ಈ ಜಮೀನುಗಳ ಮರು ಸಮೀಕ್ಷೆ ನಡೆಸಿ ರೈತರ ಉಳುಮೆ ಮಾಡುವ ಜಮೀನುಗಳಿಗೆ ಹಕ್ಕು ಪತ್ರ ವಿತರಿಸಬೇಕು ಎಂದು ಸರ್ಕಾರ ವಿರುದ್ಧ ಆಕ್ರೋಶ ವ್ಯಕ್ತ ಪಡಿಸಿದರು.

ಈ ವೇಳೆ ಪ್ರತಿಭಟನಾ ನಿರತ ರೈತರು ಮಾತನಾಡಿ, ಅನೇಕ ವರ್ಷಗಳಿಂದ ನಮ್ಮ ಹಿರಿಯರ ಕಾಲದಿಂದಲೂ ಕುಲವಳ್ಳಿ ಸರಹದ್ದಿನಲ್ಲಿ ಬರುವ ಜಮೀನುಗಳಲ್ಲಿ ಉಳುಮೆ ಮಾಡುತ್ತಾ ಬರಲಾಗಿದೆ. ಅದೇ ರೀತಿ ನಾವು ಕೂಡಾ ಈ ಜಮೀನಿನಲ್ಲಿ ಉಳುಮೆ ಮಾಡಿ ನಮ್ಮ ಜೀವನ ಬಂಡಿಯನ್ನು ಮುಂದುಡುತ್ತಿದೆ. ಇಲ್ಲಿರುವ ಜಮೀನನಿನ ಹಕ್ಕು ಪತ್ರ ನಮಗೆ ವಿತರಿಸುವಂತೆ ಅನೇಕ ಬಾರಿ ಅಧಿಕಾರಿಗಳಿಗೆ ಹಾಗೂ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ. ಶೀಗ್ರವೇ ರೈತರ



ಉಳುಮೆ ಮಾಡುವ ಜಮೀನು ಹಕ್ಕು ಪತ್ರ ವಿತರಸಬೇಕು. ಇಲ್ಲವಾದಲ್ಲಿ ನಮ್ಮ ಜೀವವನ್ನು ಬೀಡಲು ನಾವು ಸಿದ್ಧರಿದ್ದೇವೆ ಎಂದ ಅವರು, ಶೀಘ್ರವೇ ಕಂದಾಯ ಸಚಿವರು ಪ್ರತಿಭಟನಾ ಸ್ಥಳಕ್ಕೆ ಬರುಬೇಕು ಎಂದು ಒತ್ತಾಯಿಸಿದರು.

ಕಳೆದ 50 ವರ್ಷಗಳಿಂದ ಸರಕಾರಿ ಜಮೀನುಗಳಲ್ಲಿ ನಿರಂತರವಾಗಿ ಸಾಗುವಳಿ ನಡೆಸುತ್ತಿರುವ ರೈತರನ್ನು ತೆರವುಗೊಳಿಸಲು ಮುಂದಾಗಿರುವುದು ಸರಿಯಾದ ಕ್ರಮವಲ್ಲ. ರಾಜ್ಯದಲ್ಲಿ ಬೆಳೆ ಹಾನಿಯಿಂದ ರೈತರು ಆತ್ಮಹತ್ಯೆಗೆ ಶರಣಾಗುತ್ತಿದ್ದಾರೆ. ಇಂತಹದರಲ್ಲಿ ಸರಕಾರಿ ಜಮೀನುಗಳಲ್ಲಿ ಸಾಗವಳಿ ನಡೆಸುವ ರೈತರನ್ನು ತೆರವುಗೊಳಿಸುವ ಮೂಲಕ ರೈತರನ್ನು ಸರಕಾರ ಬೀದಿಗೆ ತಳ್ಳುತ್ತಿದೆ. ರೈತರನ್ನು ಒಕ್ಕಲೆಬ್ಬಿಸಿ ಸಾಗುವಳಿ ನಡೆಸುತ್ತಿರುವ ಭೂಮಿಗಳನ್ನು ಸರಕಾರ ಕೂಡಲೇ ಹಕ್ಕು ಪತ್ರ ವಿತರಿಸಬೇಕು. ಇಲ್ಲವಾದಲ್ಲಿ ಉಗ್ರ ಹೋರಾಟ ಮಾಡಲಾಗುವುದು ಎಂದು ಪ್ರತಿಭಟನಾ ನಿರತ ರೈತರು ದೂರಿದರು.

ರೈತರನ್ನು ವಶಕ್ಕೆ ಪಡೆದ ಪೊಲೀಸರು: ಚನ್ನಮ್ಮ ವೃತ್ತದಲ್ಲಿ ಸರ್ಕಾರ ವಿರುದ್ದ ಆಕ್ರೋಶ ಹೊರಹಾಕಿದ ರೈತರು ಸರ್ಕಾರ ವಿರುದ್ಧ ಘೋಷಣೆ ಕೂಗಿ ಕಣ್ಣೀರು ಹಾಕಿದರು. ಈ ವೇಳೆ ರೈತರು ಹಾಗೂ ಪೊಲೀಸರ ನಡುವೆ ವಾಗ್ವಾದವೂ ನಡೆಯಿತು. ಈ ವೇಳೆ ಪೊಲೀಸರು ಒಂದಿಷ್ಟು ರೈತರನ್ನು ವಶಕ್ಕೆ ಪಡೆದರು. ಈ ವೇಳೆ ರೈತ ಕುಟುಂಬಸ್ಥರು ಪೊಲೀಸ್ ಇಲಾಖೆ ವಿರುದ್ಧ ಹಿಡಿ ಶಾಪ ಹಾಕಿದರು.

ಪ್ರತಿಭಟನೆಯಲ್ಲಿ ಭಾಗವಹಿಸಿದ ಶಾಲಾ ಮಕ್ಕಳು: ಕಿತ್ತೂರು ಚನ್ನಮ್ಮನ ವೃತ್ತದಲ್ಲಿ ನಡೆದ ರೈತರ ಪ್ರತಿಭಟನೆ ವೇಳೆ ರೈತರ ಮಕ್ಕಳು ಸಹ ಭಾಗವಹಿಸಿ ಸರ್ಕಾರ ವಿರುದ್ಧ ಘೋಷಣೆ ಕೂಗಿದರು. ಈ ವೇಳೆ ಪೊಲೀಸರು ಮಕ್ಕಳೆನ್ನದೇ ಅವರನ್ನು ಸಹ ವಶಕ್ಕೆ ಪಡೆದು ಬಸ್ಸಿನಲ್ಲಿ ಇರಿಸಿದರು. ಈ ಚಿತ್ರಣವನ್ನು ನೋಡಿದ ಮಕ್ಕಳ ಪಾಲಕರು ಕಣ್ಣಿರು ಹಾಕುತ್ತಾ ಅಧಿಕಾರಿ ಹಾಗೂ ಸಚಿವರ ವಿರುದ್ಧ ಮಣ್ಣು ತೂರಿ ಆಕ್ರೋಶ ವ್ಯಕ್ತ ಪಡಿಸಿದರು. ಈ ವೇಳೆ ರೈತ ಮಹಿಳೆ ಕೂಡಾ ಅಸ್ವಸ್ಥಗೊಂಡಿದ್ದಾರೆ. ಪ್ರತಿಭಟನೆಯಲ್ಲಿ ಕುಲವಳ್ಳಿ ಗಾಪಂ ವ್ಯಾಪ್ತಿಗೆ ಬರುವ 9 ಹಳ್ಳಿಗಳ ರೈತರು

## ಪಿಂಚಣಿ ಅದಾಲತ್ ಡಿ.13 ರಂದು

ಬೆಳಗಾವಿ: ಬೆಳಗಾವಿ ಅಂಚೆ ವಿಭಾಗದ ಪಿಂಚಣಿದಾರರಿಗಾಗಿ ಡಿಸೆಂಬರ್ 13, 2023 ರಂದು ನಗರದ ಅಂಚೆ ಅಧೀಕ್ಷಕರ ಕಾರ್ಯಾಲಯದಲ್ಲಿ ಪಿಂಚಣಿ ಅದಾಲತ್‌ಅನ್ನು ನಡೆಸಲಾಗುವುದು.

ಸೇವೆಯಿಂದ ನಿವೃತ್ತರಾದ ನೌಕರರ ಪಿಂಚಣಿ ಮತ್ತು ಇತರೆ ನಿವೃತ್ತಿ ಸೌಲಭ್ಯಗಳ ಹಾಗೂ ಕುಟುಂಬ ಪಿಂಚಣಿದಾರರ ಅಹವಾಲುಗಳೇನಾದರೂ ಇದ್ದಲ್ಲಿ ಅವುಗಳನ್ನು ಅದಾಲತ್ ನಲ್ಲಿ ಆಲಿಸಲಾಗುವುದು.

ನಿವೃತ್ತಿ ಹೊಂದಿದ ಗ್ರಾಮೀಣ ಅಂಚೆ ಸೇವಕರು ಮತ್ತಿತರರಿಗೆ ಈ ಅದಾಲತ್ತಿನಲ್ಲಿ ಪಾಲ್ಗೊಳ್ಳಲು ಅವಕಾಶವಿಲ್ಲ.

ಪಿಂಚಣಿ ಅದಾಲತ್ತನಲ್ಲಿ ಹಾಜರಾಗುವವರಿಗೆ ಯಾವುದೇ ತರಹದ ಭತ್ಯೆ ನೀಡಲಾಗುವುದಿಲ್ಲ.

ಅದಾಲತ್ ಅಲ್ಲಿ ಚರ್ಚಿಸುವ ಅಹವಾಲುಗಳಿದ್ದಲ್ಲಿ, ಅಂಚೆ ಅಧೀಕ್ಷಕರ ಕಾರ್ಯಾಲಯ, ಪೋಸ್ಟಮ್ಯಾನ್ ವೃತ್ತದ ಹತ್ತಿರ, ಪ್ರಧಾನ ಅಂಚೆ ಕಛೇರಿ ಕಟ್ಟಡ, ಬೆಳಗಾವಿ-590001 ಇಲ್ಲಿ ಡಿ.11 2023 ರ ಒಳಗಾಗಿ ಅಹವಾಲುಗಳನ್ನು ಲಿಖಿತ ರೂಪದಲ್ಲಿ ಕಳುಹಿಸಬೇಕುಕು ಎಂದು ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧ ಬೇಡಿಕೆ ಈಡೇರಿಕೆಗೆ ದೇವದಾಸಿ ಮಹಿಳೆಯರ ಪ್ರತಿಭಟನೆ

ಬೆಳಗಾವಿ: ವಿವಿಧ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ದೇವದಾಸಿ ಮಹಿಳೆಯರು ಸುವರ್ಣಸೌಧ ಎದುರು ಶುಕ್ರವಾರ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯಲ್ಲಿ ಡಾ: ಸೀತವಾ ಜೋಡಟ್ಟಿ ಮಾತನಾಡಿ, ಸಾವಿರಾರು ವರ್ಷದ ಹಿಂದಿನಿಂದ ಬಂದಿರುವ ದೇವದಾಸಿ ಅನಿಷ್ಟ ಪದ್ಧತಿಗೆ ಬಲಿಯಾಗಿ ಸಾಮಾಜಿಕ ಹಾಗು ಆರ್ಥಿಕವಾಗಿ ತುಳಿತಕ್ಕೊಳಗಾಗಿದ್ದ ನಾವು ದಲಿತ ಮಹಿಳೆಯರು, ಆ ಪದ್ಧತಿಯಿಂದ ಹೊರಬಂದು ನಮ್ಮದೇ ಆದ ಒಂದು ಸಂಸ್ಥೆಯನ್ನು 'ಮಹಿಳಾ ಅಭಿವೃದ್ಧಿ ಮತ್ತು ಸಂರಕ್ಷಣಾ ಸಂಸ್ಥೆ, ಬೆಳಗಾವಿ' ಹೆಸರಿನಲ್ಲಿ 1997ರಲ್ಲಿ ಹುಟ್ಟಾಕಿದ್ದೇವೆ. ಅತೀ ಚಿಕ್ಕ ವಯಸ್ಸಿನ ಮಕ್ಕಳನ್ನು ದೇವರ ಹೆಸರಿನಲ್ಲಿ ದೇವದಾಸಿಯರನ್ನಾಗಿ ಸಮರ್ಪಣೆ ಮಾಡುವುದು ಐತಿಹಾಸಿಕವಾಗಿ ಬಂದಿರುವಂತಹ ಪದ್ಧತಿಯಾಗಿದೆ. ಈ ಅನಿಷ್ಟ ಪದ್ಧತಿ ಬೇರದಿಂದಲೆ ಕಿತ್ತಹಾಕಲು ಹಾಗು ದೇವದಾಸಿ ಮಹಿಳೆಯರನ್ನು ಸಾಮಾಜಿಕ ಹಾಗು ಆರ್ಥಿಕವಾಗಿ ಸದೃಢ ಮಾಡುವುದು ಸಂಸ್ಥೆಯ ಉದ್ದೇಶವಾಗಿದೆ ಎಂದರು.

ಈ ಸಂಸ್ಥೆಯ 1997 ಸೆಪ್ಟೆಂಬರ್ ರಂದು 1960 ರ ಕರ್ನಾಟಕ ಸೊಸೈಟಿ ಕಾಯ್ದೆಯಡಿ ನೊಂದಣಿಯಾಗಿರುತ್ತದೆ. ಬೆಳಗಾವಿ ಜಿಲ್ಲೆಯ ಪುನರ್ವಸಿತ ಹಾಗೂ ಪರಿವರ್ತಿತ ದೇವದಾಸಿ ಮಹಿಳೆಯರ ಪ್ರಯತ್ನದ ಫಲವಾಗಿ ಸ್ಥಾಪನೆಗೊಂಡಿರುತ್ತದೆ. 1991 ರಲ್ಲಿ ರಾಜ್ಯ ಸರ್ಕಾರದ ಸ್ವಾಯತ್ತ ಅಂಗ ಸಂಸ್ಥೆಯಾದ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮವು ದೇವದಾಸಿ ಪುನರ್ವಸತಿ ಯೋಜನೆಯನ್ನು ಬೆಳಗಾವಿಯಲ್ಲಿ ಪ್ರಾರಂಭಿಸಿತು. ಸತತವಾಗಿ ದೇವದಾಸಿ ಮಹಿಳೆಯರ ಪುನರ್ವಸತಿ ಹಾಗೂ ದೇವದಾಸಿ ಪದ್ಧತಿಯ ನಿರ್ಮೂಲನೆಗಾಗಿ ಹಲವಾರು ಕಾತ್ಯಕ್ರಮಗಳನ್ನು ಜಿಲ್ಲೆಯ ಮಾಜಿ ದೇವದಾಸಿ ಮಹಿಳೆಯರಿಂದಲೇ ಹಮ್ಮಿಕೊಳ್ಳಲಾಗಿತ್ತು. ಅದರ ಫಲವಾಗಿ ಜಿಲ್ಲೆಯ 5100 ಜನ ಮಾಜಿ ದೇವದಾಸಿ ಮಹಿಳೆಯರ ವಿವಿಧ ಆದಾಯ ಉತ್ಪನ್ನಕರ ಚಟುವಟಿಕೆಯಲ್ಲಿ ತೊಡಗಿದ್ದಲ್ಲದೇ, 400 ಸ್ವ ಸಹಾಯ ಸಂಘಗಳನ್ನು ರಚಿಸಿಕೊಂಡು ಮಾನಸಿಕ ಪರಿವರ್ತನೆ ಹೊಂದಿ ದೇವದಾಸಿ ಪದ್ಧತಿಯನ್ನು ಬೇರು ಸಹಿತ ಕಿತ್ತೊಗೆಯಲು ಕಂಕಣಬದ್ಧರಾಗಿದ್ದಾರೆ. ಸಂಸ್ಥೆಯಲ್ಲಿ 3823 ಮಾಜಿ ದೇವದಾಸಿ ಮಹಿಳೆಯರು ಸದಸ್ಯತ್ವ ಹೊಂದಿ ಸದಸ್ಯರಾಗಿರುತ್ತಾರೆ.



ಸರಕಾರದ ಯೋಜನೆಯು ಮುಕ್ತಾಯ ಹಂತಕ್ಕೆ ತಲುಪಿರುತ್ತಿರುವ ಸಂದರ್ಭದಲ್ಲಿ ದೇವದಾಸಿ ಪದ್ಧತಿಯಂತಹ ಸಾಮಾಜಿಕ ಪಿಡುಗೂಗಳು ಮತ್ತೆ ಪರಿವರ್ತನೆಯಾಗದಂತೆ ನೋಡಿಕೊಳ್ಳಲು ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ತಡೆ ಇಲ್ಲದೇ ಇನ್ನು ಹಲವು ವರ್ಷಗಳು ನಿರಂತರ ನಡೆಸುವ ಸಲುವಾಗಿ ಪುನರ್ವಸಿತ ಹಾಗೂ ಪರಿವರ್ತನೆ ಹೊಂದಿದ ಮಾಜಿ ದೇವದಾಸಿ ಮಹಿಳೆಯರದೇ ಈ ಸಂಸ್ಥೆಯಾಗಿದೆ ಎಂದರು.

ಮುಂಚೆ ಆಗಿರುವ ಚಳಿಗಾಲದ ಅಧಿವೇಶನದಲ್ಲಿ 09 ಬೇಡಿಕೆಗಳನ್ನು ಇಟ್ಟುಕೊಂಡು ಸುಮಾರು ಜನರು ಮಾಜಿ ದೇವದಾಸಿ ಮಹಿಳೆಯರು ಪಾಲ್ಗೊಂಡು ಸಂಬಂಧಿಸಿದ ಸಚಿವರಿಗೆ ಅರ್ಜಿಯನ್ನು ಸಲ್ಲಿಸಲಾಗಿತ್ತು. ಆದರೆ ಇನ್ನುವರಿಗೆ ಯಾವದೇ ರೀತಿಯಿಂದ ಬೇಡಿಕೆಗಳುಮಂಜೂರು ಆಗಿರುವುದಿಲ್ಲ. ಶೀಘ್ರವೇ ನಮ್ಮ ವಿವಿಧ ಬೇಡಿಕೆ ಈಡೇರಿಸುವಲ್ಲಿ ಸರಾಕರ ಗಮನ ಹರಿಸಬೇಕು ಎಂದು ಒತ್ತಾಯಿಸಿದರು.

ಬೇಡಿಕೆಗಳು: ಕರ್ನಾಟಕ ರಾಜ್ಯದಲ್ಲಿ ಇರುವ ಸುಮಾರು 48.000 ದೇವದಾಸಿ ಮಹಿಳೆಯರಿಗೆ ವ್ಯವಸಾಯ ಮಾಡಲು 2 ಎಕರೆ ಜಮೀನವನ್ನು ನೀಡುವುದು. ಕೃಷಿ ಭೂಮಿ ಹೊಂದಿರುವ ಎಲ್ಲ ದೇವದಾಸಿ ಮಹಿಳೆಯರಿಗೆ ಡಾ: ಬಿ.ಆರ್. ಅಂಬೇಡ್ಕರ ಅಭಿವೃದ್ಧಿ ನಿಗಮದ ವತಿಯಿಂದ ಕೊಳವೆ ಬಾವಿಯನ್ನು ನೀಡುವುದಾಗಿ ಮೀಸಲಾತಿ ಇಡುವುದು, ದೇವದಾಸಿ ಮಹಿಳೆಯರಿಗೆ ಈಗ ಸರ್ಕಾರ ನೀಡುತ್ತಿರುವ ಮಾಸಿಕ ಮಾಶಾಸನ ರೂ. 3000/- ರಿಂದ ರೂ. 5000/- ರಂತೆ ಸರ್ಕಾರದ ಸಮೀಕ್ಷೆಯಲ್ಲಿ ಬಂದಿರುವ ಎಲ್ಲ ದೇವದಾಸಿ ಮಹಿಳೆಯರಿಗೆ ಮಾಶಾಸನವನ್ನು ಪ್ರತಿ ತಿಂಗಳ ತಪ್ಪದೇ ಬರುವಂತೆ ಮಾಡುವುದು, ದೇವದಾಸಿ ಮಹಿಳೆಯರನ್ನು ಸಶಕ್ತರನ್ನಾಗಿ ಹಾಗು ಜೀವನೋಪಾಯ ಬಲಪಡಿಸಲು ಸಣ್ಣ ಉದ್ಯೋಗ ಹಾಗು ಕೃಷಿ ಮಾಡಲು ಉಚಿತ ಸಾಲವನ್ನು ನೀಡುವುದು.

ಎಲ್ಲಾ ದೇವದಾಸಿ ಮಹಿಳೆಯರಿಗೆ ಅಂತ್ಯೋದಯ ಪಡಿತರ ಚೀಟಿಯನ್ನು ವಿತರಿಸುವುದು, ಮನೆ ಮತ್ತು ನಿವೇಶನ ಹೊಂದದೇ ಇರುವ ದೇವದಾಸಿ ಮಹಿಳೆಯರಿಗೆ ಮನೆಯನ್ನು ನಿರ್ಮಿಸಿ ಕೊಡುವುದು. 6. ಎಲ್ಲ ಮಹಿಳೆಯರಿಗೆ ಆರೋಗ್ಯ ಹಾಗು ತೀವ್ರ ರೋಗಗಳ ತಪಾಸಣೆ ಶಿಬಿರಗಳಿಗೆ ವಿಶೇಷ ಗಮನ ಜೊತೆ ಗುಣಮಟ್ಟದ ಉಚಿತ ಚಿಕಿತ್ಸೆಯನ್ನು ಪಡೆಯಲು ಗ್ರಾಮ ಪಂಚಾಯತ ಅಡಿಯಲ್ಲಿ ಬಜೆಟವನ್ನು ಕಾಯ್ದಿರಿಸುವುದು. 7 ದೇವದಾಸಿ ಮಕ್ಕಳಿಗೆ ವಿದ್ಯಾರ್ಥಿವೇತನ, ಉನ್ನತ ಶಿಕ್ಷಣ ಮುಂದೊರಿಸಲು ಹಾಗು ಅವರ ಅಧಿಕಾರವನ್ನು ಜೀವನಾಧರ ಆಯ್ಕೆಗಳನ್ನು ಬಲಪಡಿಸಲು 100% ಆರ್ಥಿಕ ಬೆಂಬಲ ನೀಡಬೇಕು.

8 ಕೇಂದ್ರ ಹಾಗು ರಾಜ್ಯದ ಎಲ್ಲ ನೌಕರಿಗಳಲ್ಲಿ ಅರ್ಹ ದೇವದಾಸಿ ಮಕ್ಕಳು ಮತ್ತು ಮೊಮ್ಮಕ್ಕಳಿಗೆ ಮೀಸಲಾತಿಯನ್ನು ಇಡುವುದು, ಅರ್ಹ ದೇವದಾಸಿ ಮಹಿಳೆಯರಿಗೆ ಹಾಗು ಅವರ ಮಕ್ಕಳಿಗೆ ಅಂಗನವಾಡಿಯಲ್ಲಿ ಕಾರ್ಯಕರ್ತರಾಗಿ ಭರ್ತಿ ಮಾಡುವುದು ಎಂಬಿತ್ಯಾದಿ ಬೇಡಿಕೆಗಳನ್ನು ಮುಂದಿರಿಸಿದ್ದಾರೆ. ಪ್ರತಿಭಟನೆಯಲ್ಲಿ ಐರಾವತಿ ಮಾಗ್, ನಾಲಮ್ಮ ಕಿರಣಗಿ, ಕಾಶವ್ವಾ ಕಾಂಬೇ ಸೇರಿದಂತೆ ನೂರಾರು ದೇವದಾಸಿ ಮಹಿಳೆಯರು ಇತರರು ಭಾಗವಹಿಸಿದ್ದರು.

# ಇದು ಕಾಶ್ಮೀರದ ನಿರಾಶ್ರಿತ ಜನರಿಗೆ ಹಕ್ಕುಗಳು ಮತ್ತು ಪ್ರಾತಿನಿಧ್ಯವನ್ನು ನೀಡುವ ಮಸೂದೆಯಾಗಿದೆ

ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಶ್ರೀ ಅಮಿತ್ ಶಾ ಅವರು ಲೋಕಸಭೆಯಲ್ಲಿ ಜಮ್ಮು ಮತ್ತು ಕಾಶ್ಮೀರ ಮರುಸಂಘಟನೆ (ತಿದ್ದುಪಡಿ) ಮಸೂದೆ, 2023 ಮತ್ತು ಜಮ್ಮು ಮತ್ತು ಕಾಶ್ಮೀರ ಮೀಸಲಾತಿ (ತಿದ್ದುಪಡಿ) ಮಸೂದೆ, 2023 ಅನ್ನು ಪರಿಗಣನೆ ಮತ್ತು ಅನುಮೋದನೆಗಾಗಿ ಮಂಡಿಸಿದರು. ಬುಧವಾರ ಮಸೂದೆಗಳ ಪರವಾಗಿ ಪ್ರತಿಕ್ರಿಯಿಸಿದ ಶ್ರೀಯುತ ಶಾ ಅವರು, "ಈ ಮಸೂದೆಯು ಕಾಶ್ಮೀರದ ನಿರಾಶ್ರಿತ ಜನರಿಗೆ ಹಕ್ಕು ಮತ್ತು ಪ್ರಾತಿನಿಧ್ಯವನ್ನು ನೀಡುವುದಾಗಿದೆ. ಈ ಹಿಂದೆ ಮಹಿಳೆಯರಿಗೆ ಕೇವಲ 2 ಸ್ಥಾನಗಳನ್ನು ನೀಡಲಾಗಿತ್ತು, ಆದರೆ ಮೋದಿ ಸರ್ಕಾರವು ಮಸೂದೆಯನ್ನು ಮಾರ್ಪಡಿಸಿತು.

ಡಿಲಿಮಿಟೇಶನ್ ಆಯೋಗದ ಶಿಫಾರಸುಗಳನ್ನು ಆಧರಿಸಿ, 3 ಸ್ಥಾನಗಳನ್ನು ನೇಮಿಸುವ ನಿಬಂಧನೆಯನ್ನು ಕಾನೂನುಬದ್ಧವಾಗಿ ಜಾರಿಗೆ ತಂದಿದೆ ಮತ್ತು ಅದನ್ನು ಬೆಂಬಲಿಸುವುದು ಈ ಆಗಸ್ಟ್ ಹೌಸ್ಗೆ ನಿರ್ಣಾಯಕವಾಗಿದೆ.

ಪ್ರಧಾನಿ ನರೇಂದ್ರ ಮೋದಿಯವರ ನಾಯಕತ್ವದಲ್ಲಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ನುರಿತ ಮಾರ್ಗದರ್ಶನದಲ್ಲಿ 70 ವರ್ಷಗಳಿಂದ ನಿರ್ಲಕ್ಷಿಸಲ್ಪಟ್ಟ ಎಲ್ಲರ ಧ್ವನಿಯನ್ನು 2019 ರ ಆಗಸ್ಟ್ 5 ಮತ್ತು 6 ರಂದು 370 ನೇ ವಿಧಿಯನ್ನು ರದ್ದುಗೊಳಿಸುವ ಮೂಲಕ ಆಲಿಸಲಾಯಿತು ಎಂಬುದು ಇಡೀ ದೇಶಕ್ಕೆ ತಿಳಿದಿದೆ.

370ನೇ ವಿಧಿಯನ್ನು ರದ್ದುಪಡಿಸುವುದು ಬಹುಕಷ್ಟ ಎಂದು ಭಾವಿಸಿದ್ದವರು, ಡಿಲಿಮಿಟೇಶನ್ ಈ ಮಸೂದೆಯ ಭಾಗವೇ ಎಂದು ಅರ್ಥ ಮಾಡಿಕೊಳ್ಳಬೇಕು.

ಇತಿಹಾಸದಲ್ಲೇ ಪ್ರಥಮ ಬಾರಿಗೆ 9 ಸ್ಥಾನಗಳನ್ನು ಪರಿಶಿಷ್ಟ ಪಂಗಡಕ್ಕೆ ಮೀಸಲಿಟ್ಟಿದ್ದು, ಪರಿಶಿಷ್ಟ ಪಂಗಡಕ್ಕೂ ಮೀಸಲಾತಿ ವ್ಯವಸ್ಥೆ ಮಾಡಲಾಗಿದೆ. ಜಮ್ಮುವಿನಲ್ಲಿ, ಸೀಟುಗಳ ಸಂಖ್ಯೆ 37 ರಿಂದ 43 ಕ್ಕೆ ಏರಿಸಿದೆ ಮತ್ತು ಕಾಶ್ಮೀರದಲ್ಲಿ ಇದು 46 ರಿಂದ 47 ಕ್ಕೆ ಏರಿಸಿದೆ. ಹೆಚ್ಚುವರಿಯಾಗಿ, ಪಾಕ್ ಆಡಳಿತದ ಕಾಶ್ಮೀರದಲ್ಲಿ 24 ಸ್ಥಾನಗಳನ್ನು ಮೀಸಲಿಡಲಾಗಿದೆ.




ಜಮ್ಮು ಮತ್ತು ಕಾಶ್ಮೀರ ಅಸೆಂಬ್ಲಿಯಲ್ಲಿ ಒಟ್ಟು ಸ್ಥಾನಗಳ ಸಂಖ್ಯೆ 107 ರಿಂದ 114 ಕ್ಕೆ ಏರಿಸಿದೆ. ಮೊದಲು 2 ನಾಮನಿರ್ದೇಶಿತ ಸದಸ್ಯರಿದ್ದರು; ಈಗ, 5 ನಾಮನಿರ್ದೇಶಿತ ಸದಸ್ಯರು ಇರುತ್ತಾರೆ. ಜಮ್ಮು ಮತ್ತು ಕಾಶ್ಮೀರದ ಕಾನೂನುಗಳ ಪ್ರಕಾರ, ರಾಜ್ಯಪಾಲರು 2 ಮಹಿಳೆಯರನ್ನು ನಾಮನಿರ್ದೇಶನ ಮಾಡುತ್ತಾರೆ; ಈಗ ಕಾಶ್ಮೀರದಿಂದ ಒಬ್ಬ ಮಹಿಳೆ ಮತ್ತು ಪಾಕ್ ಆಡಳಿತದ ಕಾಶ್ಮೀರದಿಂದ ಒಬ್ಬರು ನಾಮನಿರ್ದೇಶನಗೊಳ್ಳಲಿದ್ದಾರೆ. ಆಗಸ್ಟ್ 5 ಮತ್ತು 6 ರಂದು ನರೇಂದ್ರ ಮೋದಿ ಅವರು ಕ್ಯಾಬಿನೆಟ್ಟಿನಲಿ ಐತಿಹಾಸಿಕ ಮಸೂದೆಯನ್ನು ಅಂಗೀಕರಿಸಿದರು, ಆಗಸ್ಟ್ ಹೌಸ್ ಅದನ್ನು ಅಂಗೀಕರಿಸಿತು ಮತ್ತು 370 ನೇ ವಿಧಿಯನ್ನು ರದ್ದುಗೊಳಿಸಿದ್ದರಿಂದ ಇದೆಲ್ಲವೂ ಸಾಧ್ಯವಾಯಿತು. ಡಿಲಿಮಿಟೇಶನ್ ಆರ್ಟಿಕಲ್ 370 ರ ಭಾಗವಾಗಿತ್ತು.

ಮುಂದಿನ ದಿನಗಳಲ್ಲಿ, ತುಳಿತಕ್ಕೊಳಗಾದ ಮತ್ತು ಹಿಂದುಳಿದ ಪ್ರತಿಯೊಬ್ಬ ಕಾಶ್ಮೀರಿಯು ಈ ಎರಡೂ ತಿದ್ದುಪಡಿಗಳಿಗಾಗಿ ಈ ಸಂಸತ್ತಿನ ಪ್ರಯತ್ನಗಳನ್ನು ನೆನಪಿಸಿಕೊಳ್ಳುತ್ತಾರೆ.

ವರ್ಷಗಟ್ಟಲೆ ತಮ್ಮದೇ ದೇಶದಲ್ಲಿ ಅಲೆದಾಡುತ್ತಿರುವವರಿಗೆ ನ್ಯಾಯ ದೊರಕಿಸಿಕೊಡಲು ಮೋದಿ-ಶಾ ಜೋಡಿ ಪಾಕ್ ಆಡಳಿತದ ಕಾಶ್ಮೀರದ ನಿರಾಶ್ರಿತರಿಗೆ 2 ಸೀಟು ಮತ್ತು ಮೀಸಲು ಸೀಟುಗಳನ್ನು ಒದಗಿಸಿದೆ. ಮೋದಿ-ಶಾ ಜೋಡಿಯು ದುರ್ಬಲ ಮತ್ತು ಬುಡಕಟ್ಟು ವರ್ಗಗಳಿಗೆ ಸಾಂವಿಧಾನಿಕ ಪರಿಹಾರಗಳನ್ನು ನೀಡುವ ಕೆಲಸ ಮಾಡಿದೆ.

ನೀಡಿರುವ ಮೀಸಲಾತಿ ಕಾಶ್ಮೀರ ವಿಧಾನಸಭೆಯಲ್ಲಿ ಪ್ರತಿಧ್ವನಿಸಲಿದೆ ಮತ್ತು ಸ್ಥಳಾಂತರದ ಪರಿಸ್ಥಿತಿ ಮತ್ತೆ ಉದ್ಭವಿಸುವುದಿಲ್ಲ.

1994 ರಿಂದ 2004 ರವರೆಗೆ ಒಟ್ಟು 40,164 ಭಯೋತ್ಪಾದಕ ಘಟನೆಗಳು ಸಂಭವಸಿವೆ. 2004 ರಿಂದ 2014 ರವರೆಗೆ ಮನಮೋಹನ್ ಅವರ ಸರ್ಕಾರದ ಅವಧಿಯಲ್ಲಿ 7,217 ಭಯೋತ್ಪಾದಕ ಘಟನೆಗಳು ನಡೆದಿವೆ.

2014 ರಿಂದ 2023 ರವರೆಗೆ ನರೇಂದ್ರ ಮೋದಿ ಸರ್ಕಾರದಲ್ಲಿ ಕೇವಲ 2,000 ಭಯೋತ್ಪಾದಕ ಘಟನೆಗಳು ನಡೆದಿವೆ. ನಾಗರಿಕರ ಸಾವಿನಲ್ಲಿ 72% ಕಡಿತ ಮತ್ತು ಭದ್ರತಾ ಪಡೆಗಳ ಸಾವಿನಲ್ಲಿ 59% ಕಡಿತವಾಗಿದೆ. ಕಲ್ಲು ತೂರಾಟದ ಘಟನೆಗಳು ಈಗ ಶೂನ್ಯ. ಸಂಘಟಿತ ಮುಷ್ಕರಗಳು ಇನ್ನು ಮುಂದೆ ಸಂಭವಿಸುವುದಿಲ್ಲ.

ಆರ್ಟಿಕಲ್ 370 ರದ್ದಾದ ನಂತರ ರಕ್ತದ ನದಿಗಳು ಹರಿಯುತ್ತವೆ ಎಂದು ಹೇಳುತ್ತಿದ್ದರು, ಆದರೆ ಈಗ ಯಾರೂ ಕಲ್ಲು ಎಸೆಯುವ ಧೈರ್ಯ ಕೂಡ ಮಾಡುತ್ತಿಲ್ಲ ಎಂದು ಅರ್ಥಮಾಡಿಕೊಳ್ಳಬೇಕು.

ಮೊದಲು, ಕೇವಲ ಭಯೋತ್ಪಾದಕರು ಕೊಲ್ಲಲ್ಪಡುತ್ತಿದ್ದರು, ಆದರೆ ಈಗ ಅವರ ಸಂಪೂರ್ಣ ಪರಿಸರ ವ್ಯವಸ್ಥೆಯನ್ನು ನಿರ್ಮೂಲನೆ ಮಾಡಲಾಗುತ್ತಿದೆ. ಜಮ್ಮು ಮತ್ತು ಕಾಶ್ಮೀರದಲ್ಲಿ ಚಿತ್ರಮಂದಿರಗಳು ಕಾರ್ಯನಿರ್ವಹಿಸುತ್ತಿರಲಿಲ್ಲ, ಆದರೆ ಇಂದು, ಮೋದಿ ಸರ್ಕಾರದಲ್ಲಿ 370 ನೇ ವಿಧಿಯನ್ನು ತೆಗೆದುಹಾಕಿದ 30 ವರ್ಷಗಳ ನಂತರ, ಚಿತ್ರಮಂದಿರಗಳು ಪ್ರಾರಂಭವಾಗಿವೆ. ಈಗ ಎಲ್ಲಾ ಧರ್ಮದ ಜನರು ಲಾಲ್ ಚೌಕ್ನಲ್ಲಿ ಸಂತೋಷದಿಂದ ಹಬ್ಬಗಳನ್ನು ಆಚರಿಸುತ್ತಾರೆ. 370 ನೇ ವಿಧಿಯನ್ನು ತೆಗೆದುಹಾಕಿದ ನಂತರ, ಭಯೋತ್ಪಾದನೆಯಲ್ಲಿ ಗಮನಾರ್ಹ ಇಳಿಕೆ ಕಂಡುಬಂದಿದೆ ಮತ್ತು ಪ್ರತ್ಯೇಕತಾವಾದವು ಕೊನೆಗೊಂಡಿದೆ.

ಮೋದಿ ನಾಯಕತ್ವ ಮತ್ತು ಅಮಿತ್ ಶಾ ಅವರ ಮಾರ್ಗದರ್ಶನದಲ್ಲಿ 370ನೇ ವಿಧಿ ರದ್ದತಿಯಿಂದ ಕಾಶ್ಮೀರದ ಚಿತ್ರಣವೇ ಬದಲಾಗಿದೆ.

## ಡೇ-ನಲ್ಮ್ ವಿಭಾಗದಲ್ಲಿ ಸಿ.ಆರ್ಪಿ ಹುದ್ದೆಗೆ ಅರ್ಜಿ ಆಹ್ವಾನ

ಬೆಳಗಾವಿ: ಸವದತ್ತಿ ಯಲ್ಲಮ್ಮಾ ಪುರಸಭೆ ವ್ಯಾಪ್ತಿಯಲ್ಲಿ ಡೇ-ನಲ್ಮ್ ಯೋಜನೆಯಡಿ ಮರು "ಸಮುದಾಯ ಸಂಪನ್ಮೂಲ ವ್ಯಕ್ತಿಗಳ" ಹುದ್ದೆಗಳನ್ನು ಗೌರವಧನ ಆಧಾರದ ಮೇಲೆ ತಾತ್ಕಾಲಿಕವಾಗಿ ನೇಮಕಾತಿ ಮಾಡಿಕೊಳ್ಳಲು ಅರ್ಹ ಸ್ವ- ಸಹಾಯ ಸಂಘಗಳ/ಒಕ್ಕೂಟಗಳ ಸದಸ್ಯರಿಂದ ಅರ್ಜಿ ಆಹ್ವಾನಿಸಲಾಗಿದೆ.

ಸದರಿ ಪುರಸಭೆಗೆ ಒಟ್ಟು 2 ಹುದ್ದೆ ಇದ್ದು ಗೌರವಧನ ಮಾಸಿಕ ರೂ. 8 ಸಾವಿರ ಹಾಗೂ ಪ್ರಯಾಣ ಭತ್ಯೆ ಗರಿಷ್ಠ 2 ಸಾವಿರ ರೂ. ನೀಡಲಾಗುವುದು.

18 ರಿಂದ 45 ವಯೋಮಿತಿಯಲ್ಲಿರುವವರು ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ. ಆಸಕ್ತರು ಕಾರ್ಯಾಲಯದ ಅವಧಿಯಲ್ಲಿ ಅರ್ಜಿ ನಮೂನೆಯನ್ನು ಪಡೆದು ಭರ್ತಿ ಮಾಡಿದ ಅರ್ಜಿಯನ್ನು ಸ್ವಯಂ ದೃಢೀಕೃತ ದಾಖಲೆಗಳೊಂದಿಗೆ ಜನೇವರಿ 5, 2024 ಸಂಜೆ 4.30 ರೊಳಗಾಗಿ ಸಲ್ಲಿಬಹುದು.

ಹೆಚ್ಚಿನ ಮಾಹಿತಿಯಾಗಿ ಈ ಕಾರ್ಯಾಲಯಕ್ಕೆ ಸಂಪರ್ಕಿಸಬಹುದು ಎಂದು ಸವದತ್ತಿ ಯಲ್ಲಮ್ಮಾ ಪುರಸಭೆಯ ಮುಖ್ಯಾಧಿಕಾರಿಗಳಾದ ಪಿ.ಎಂ.ಚನ್ನಪ್ಪನವರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್.ಜಾ ಮತ್ತು ಪ.ಪ ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿ

ಬೆಳಗಾವಿ: 2023-24ನೇ ಶೈಕ್ಷಣಿಕ ಸಾಲಿನಲ್ಲಿ ನಡೆಯುವ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಪ್ರವೇಶಾತಿಯಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ Freeship Card ಹೊಂದಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅರ್ಹ ವಿದ್ಯಾರ್ಥಿಗಳಿಗೆ ವಿಭಾಗಗಳ ಶುಲ್ಕಗಳ ಅನುಸಾರವಾಗಿ ನಿಯಮಾನುಸಾರ ಪ್ರವೇಶಾತಿ ಶುಲ್ಕದಲ್ಲಿ ವಿನಾಯಿತಿ ನೀಡಲಾಗುತ್ತಿದೆ.

ಕಾರಣ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಈ reeship Card ನ್ನು ಪ್ರವೇಶಾತಿ ಪಡೆಯುವ ಸಂದರ್ಭದಲ್ಲಿ ಕಡ್ಡಾಯವಾಗಿ ಹಾಜರುಪಡಿಸಿ ಇದರ ಸದುಪಯೋಗ ಪಡೆದುಕೊಳ್ಳಬಹುದು.

ಪ್ರವೇಶಾತಿ ಪ್ರಕ್ರಿಯೆಯ ವೇಳಾಪಟ್ಟಿಯನ್ನು ವಿಶ್ವವಿದ್ಯಾಲಯದ ಅಧಿಕೃತ ಜಾಲತಾಣ www.rcub.ac.in ದಲ್ಲಿ ಈಗಾಗಲೇ ಪ್ರಕಟಿಸಲಾಗಿದೆ ಹಾಗೂ ಕಾಲಕಾಲಕ್ಕೆ ಹಂತಗಳ ಅನುಸಾರವಾಗಿ ವಿವರಗಳನ್ನು ಪ್ರಕಟಿಸಲಾಗುವುದು ಎಂದು ಸಹಾಯಕ ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಕ್ಕತಂಗೇರಹಾಳ ಗ್ರಾಮವನ್ನು ಪಪಂಯಿಂದ ಕೈಬಿಡುವಂತೆ ಒತ್ತಾಯ

ಬೆಳಗಾವಿ: ಗೋಕಾಕ ತಾಲೂಕಿನ ಅಂಕಲಗಿ, ಅಕ್ಕತಂಗೇರಹಾಳ ಪಟ್ಟಣ ಪಂಚಾಯತಿಯಿಂದ ಅಕ್ಕತಂಗೇರಹಾಳ ಗ್ರಾಮವನ್ನು ಕೈ ಬಿಡಬೇಕೆಂದು ಆಗ್ರಹಿಸಿ ಅಂಕಲಗಿ ಗ್ರಾಮಸ್ಥರು ಸುವರ್ಣಸೌಧ ಸಮೀಪದ ಸುವರ್ಣ ಗಾರ್ಡನ್ ಬಳಿ ಪ್ರತಿಭಟನೆ ನಡೆಸಿ ಶುಕ್ರವಾರ ಸರಕಾರ ಸರಕಾರವನ್ನು ಒತ್ತಾಯಿಸಿದರು.




ಅಕ್ಕತಂಗೇರಹಾಳ ಗ್ರಾಮಗಳನ್ನು ಕೂಡಿಸಿ ಪಟ್ಟಣ ಪಂಚಾಯತಿ ಪರಿವರ್ತನಾ ಪ್ರದೇಶವೆಂದು ಪರಿಗಣಿಸಿ ಕಳೆದ 2021 ನ.11 ರಂದು ಅಧಿಸೂಚನೆ ಹೊರಡಿಸಿದ್ದು, ಇದಕ್ಕೆ ಆಕ್ಷೇಪಣೆ ಸಲ್ಲಿಸಲು ನ.30ರ ವರೆಗೆ ಅವಕಾಶ ನೀಡಲಾಗಿತ್ತು.

ಈ ಕುರಿತು ಪೌರಾಡಳಿತ ಇಲಾಖೆಗೆ ಆಕ್ಷೇಪಣೆ ಸಲ್ಲಿಸಲಾಗಿದೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ. ಪೌರಾಡಳಿತ ಇಲಾಖೆಯ ನಿರ್ದೇಶಕರಿಗೆ ಪಟ್ಟಣ ಪಂಚಾಯತಿ ಮಾಡಲು ಇರುವ ನಿಯಮಾವಳಿಗಳನ್ನು ಮೀರಿ ಸ್ಥಳೀಯ ಅಧಿಕಾರಿಗಳು ಒತ್ತಡಕ್ಕೆ ಮಣಿದು ತಪ್ಪು ಅಂಕಿ ಅಂಶಗಳನ್ನು ನೀಡಿ ಪ್ರಸ್ತಾವನೆ ಸಲ್ಲಿಸಿದ್ದಾರೆ ಎಂದು ದೂರಿದ್ದಾರೆ.

ಅಂಕಲಗಿ ಗ್ರಾಮಸ್ಥರು ನ್ಯಾಯಕ ಸಮಿತಿ ರಚಿಸಿ ಸ್ಥಳೀಯವಾಗಿ ವಿಚಾರಿಸಲು ಒತ್ತಾಯಿಸಿದ್ದರುಮ ಆದರೆ ಈ ವಿಷಯವನ್ನು ಪರಿಗಣಿಸದೆ ಗೋಕಾಕ ಕಂದಾಯ ನಿರೀಕ್ಷಕರನ್ನು ನೇಮಿಸಿ 7-1-2021 ರಂದು ಗ್ರಾಪಂ ಅಕ್ಕತಂಗೇರಹಾಳದಲ್ಲಿ ಆಕ್ಷೇಪಣೆ ಪಡೆದುಕೊಂಡಿದ್ದಾರೆ.


ಆಕ್ಷೇಪಣೆ ಸಲ್ಲಿಕೆಯ ಪೂರ್ಣ ವಿಡಿಯೋ ಚಿತ್ರಿಕರಣ ಮಾಡಿದ್ದಾರೆ. ಇದನ್ನು ಪರಿಶೀಲಿಸಿ ಅಂಕಲಗಿ, ಅಕ್ಕತಂಗೇರಹಾಳ ಗ್ರಾಮವನ್ನು ಬೇರ್ಪಡಿಸಬೇಕೆಂದು ಒತ್ತಾಯಿಸಿದರು.

## ಹೆತ್ತ ಮಕ್ಕಳನ್ನು ಕೊಂದು ತಾಯಿ ನೇಣಿಗೆ ಶರಣು

ಚಿತ್ರದುರ್ಗ: ಹೆತ್ತ ತಾಯಿಯೇ ಇಬ್ಬರು ಮಕ್ಕಳನ್ನು ಕೊಂದು, ಬಳಿಕ ತಾನು ನೇಣಿಗೆ ಶರಣಾಗಿರುವ ಹೃದಯವಿದ್ರಾವಕ ಘಟನೆ ಚಿತ್ರದುರ್ಗ ಜಿಲ್ಲೆ ಚಳ್ಳಕೆರೆ ತಾಲೂಕಿನ ಯಾದಲಘಟ್ಟ ಗ್ರಾಮದಲ್ಲಿ ಬೆಳಕಿಗೆ ಬಂದಿದೆ.

ಯಾದಲಗಟ್ಟ ಗ್ರಾಮದ ಲತಾ ಹಾಗೂ ಪತಿ ತಿಪ್ಪೇಸ್ವಾಮಿಗೆ ಇಬ್ಬರು ಮಕ್ಕಳಿದ್ದು, ಬೆಳಗ್ಗೆ ಎಂದಿನಂತೆ ತಿಪ್ಪೇಸ್ವಾಮಿ ಜಮೀನಿಗೆ ತೆರಳಿದ್ದರು.

ಹೀಗಾಗಿ ಎಂದಿನಂತೆ ಪತ್ನಿ ಊಟ ತೆಗೆದುಕೊಂಡು ಬರುವಳೆಂಬ ನಿರೀಕ್ಷೆಯಲ್ಲಿದ್ದ ಪತಿಗೆ ಮನೆಯಲ್ಲಿ ನಡೆದಿರುವ ಘಟನೆ ಕೇಳಿ ಶಾಕ್ ಆಗಿದೆ. ಗ್ರಾಮಸ್ಥರಿಂದ ವಿಷಯ ತಿಳಿದು ಮನೆಗೆ ಧಾವಿಸಿ, ಗಮನಿಸಿದಾಗ ಪತ್ನಿ



ಲತಾ ಹಾಗೂ ಇಬ್ಬರು ಮಕ್ಕಳು ಶವವಾಗಿ ಪತ್ತೆಯಾಗಿದ್ದಾರೆ.

ತಾಯಿ ಲತಾ (25) ಮಗಳು ಪ್ರಣೀತ(5), ಪುತ್ರ ಜ್ಞಾನೇಶ್ವರ ಮೃತರೆಂದು ಗುರುತಿಸಲಾಗಿದೆ. ಲತಾ ಮೊದಲಿಗೆ ತನ್ನ ಇಬ್ಬರು ಮಕ್ಕಳನ್ನು ನೀರಿನ ತೊಟ್ಟಿಯಲ್ಲಿ ಮುಳುಗಿಸಿ ಹತ್ಯೆಗೈದಿದ್ದು ಬಳಿಕ ತಾನು ಸಹ ನೇಣಿಗೆ ಶರಣಾಗಿರುವುದು ಮೇಲ್ನೋಟಕ್ಕೆ ತಿಳಿದುಬಂದಿದೆ.

ಆದರೆ ಈವರೆಗೆ ಆತ್ಮಹತ್ಯೆಗೆ ನಿಖರ ಕಾರಣ ತಿಳಿದು ಬಂದಿಲ್ಲ. ಕೌಟಂಬಿಕ ಕಲಹದ ಶಂಕೆ ವ್ಯಕ್ತವಾಗಿರುವ ಹಿನ್ನಲೆಯಲ್ಲಿ ಪೊಲೀಸರು ತನಿಖೆ ಕೈಗೊಂಡಿದ್ದಾರೆ.

ಚಳ್ಳಕೆರೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದ್ದು, ಘಟನಾ ಸ್ಥಳಕ್ಕೆ ಪೊಲೀಸರು ಆಗಮಿಸಿ ಸ್ಥಳ ಪರಿಶೀಲನೆ ನಡೆಸಿದ್ದಾರೆ.

ಲತಾಳ ಪತಿ ತಿಪ್ಪೇಸ್ವಾಮಿಯನ್ನು ವಶಕ್ಕೆ ಪಡೆದು ವಿಚಾರಣೆಗೊಳಪಡಿಸಿದ್ದಾರೆ. ಪೊಲೀಸರ ತನಿಖೆ ಬಳಿಕ ಸತ್ಯಾಸತ್ಯತೆ ಹೊರಬೀಳಲಿದೆ. ಸ್ಥಳದಲ್ಲಿ ಮೃತರ ಸಂಬಂಧಿಗಳ ಆಕ್ರಂದನ ಮುಗಿಲು ಮುಟ್ಟಿದೆ.

## ಅಮಾವಾಸ್ಯೆಯ ಅನುಭಾವ ಗೋಷ್ಠಿ

ಬೆಳಗಾವಿ: ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ, ಜಿಲ್ಲಾ ಘಟಕ ಅಮವಾಸ್ಯೆಯ ಅನುಭಾವಗೋಷ್ಠಿ, ಮಂಗಳವಾರ ದಿನಾಂಕ 12-12-2023 ರಂದು ಸಾಯಂಕಾಲ 5.00 ಗಂಟೆಗೆ, ಲಿಂಗಾಯತ ಭವನ, ಶಿವಬಸವ ನಗರ ಬೆಳಗಾವಿಯಲ್ಲಿ ಜರುಗುವುದು.

ಶ್ರೀ ಮ.ನಿ.ಪ್ರ.ಪೂಜ್ಯ ಗುರುಸಿದ್ಧ ಮಹಾಸ್ವಾಮಿಗಳು, ಕಾರಂಜಿಮಠ, ಬೆಳಗಾವಿ ಇವರು ಸಾನಿಧ್ಯ ವಹಿಸುವರು. ಶರಣ.ಪ್ರೊ.ಬಿ.ಜಿ.ಜಾವೂರ. ಕೆ.ಎಲ್.ಇ. ಪದವಿ ಕಾಲೇಜು. ಅಂಕಲಿ. ತಾ/ಚಿಕ್ಕೋಡಿ.

ಇವರು "ಸಾಮಾಜೀಕರಣದಲ್ಲಿ ಶರಣರ ತಾತ್ವಿಕ ನಿಲುವುಗಳು" ಎಂಬ ವಿಷಯದ ಮೇಲೆ ಅನುಭಾವ ನೀಡಲಿದ್ದಾರೆ. ಜಿಲ್ಲಾಧ್ಯಕ್ಷರಾದ ಶ್ರೀಮತಿ ರತ್ನಪ್ರಭಾ ಬೆಲ್ಲದ ಇವರು ಅಧ್ಯಕ್ಷತೆ ವಹಿಸುವರು.

ಕಾರಣ ಎಲ್ಲ ಬಸವಾಭಿಮಾನಿಗಳು ಸಮಯಕ್ಕೆ ಸರಿಯಾಗಿ ಆಗಮಿಸಿ ಅಮವಾಸ್ಯೆಯ ಅನುಭಾವಗೋಷ್ಠಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ಪ್ರಧಾನ ಕಾರ್ಯದರ್ಶಿಗಳು ವಿನಂತಿಕೊಂಡಿದ್ದಾರೆ.

## ಇಂದು ಹಾಸ್ಯ ಕವನ, ಹನಿಗವನ ಗೋಷ್ಠಿ

ಬೆಳಗಾವಿ: ನಗರದ ಹಾಸ್ಯಕೂಟ ಮತ್ತು ಕನ್ನಡ ಸಾಹಿತ್ಯ ಭವನ ವಿಶ್ವಸ್ತ ಮಂಡಳಿ ಸಂಯುಕ್ತ ಆಶ್ರಯದಲ್ಲಿ ಇದೇ ದಿ. 9. ಶನಿವಾರ ಸಾಯಂಕಾಲ. 4-30 ಕ್ಕೆ ಚೆನ್ನಮ್ಮ ವೃತ್ತದ ಬಳಿಯಿರುವ ಕನ್ನಡ ಸಾಹಿತ್ಯ ಭವನದಲ್ಲಿ "ಹಾಸ್ಯ ಕವನ/ ಹನಿಗವನ ಗೋಷ್ಠಿ" ಯನ್ನು ಹಮ್ಮಿಕೊಳ್ಳಲಾಗಿದೆ.

ಹಿರಿಯ ಲೇಖಕರಾದ ಪಿ ಬಿ ಸ್ವಾಮಿಯವರು ಅಧ್ಯಕ್ಷತೆಯನ್ನು ವಹಿಸಲಿದ್ದಾರೆ. ರವಿ ದಂಡಗಿ, ಯವರು ಅತಿಥಿಗಳಾಗಿ ಆಗಮಿಸಲಿದ್ದು ಪ್ರಾಯೋಜಕತ್ವವನ್ನು ಕೇಂದ್ರ ಉಗ್ರಾಣ ಸಂಸ್ಥೆ ನಿವೃತ್ತ ಅಧಿಕಾರಿಗಳಾದ ಕೆ. ವಿ. ಮುಳಗುಂದ ಅವರು ವಹಿಸಿಕೊಂಡಿದ್ದಾರೆ. ಅರವಿಂದ ಹುನಗುಂದ ಉಪಸ್ಥಿತರಿರುತ್ತಾರೆ. ಗುಂಡೇನಟ್ಟಿ ಮಧುಕರ ಪ್ರಾಸ್ತಾವಿಕ ನುಡಿಗಳನ್ನಾಡಲಿದ್ದಾರೆ. ನಿರೂಪಣೆಯನ್ನು ಜಿ. ಎಸ್ ಸೋನಾರ ಮಾಡಲಿದ್ದಾರೆ. ರಾಜಶ್ರೀ ಬಿ. ವಡ್ಡಿ, ವಿಶಾಲ ಬಂಡಿವಡ್ಡರ , ಬಸವರಾಜ ಮಸಗುಪ್ಪಿ, ಪವಿತ್ರಾ ಕುಂಟನ್ನವರ, ತಾನಾಜಿ, ಸಿದ್ರಾಮ ತಳವಾರ, ಡಾ. ಪಾರ್ವತಿದೇವಿ ಬಾ. ಪಾಟೀಲ, ದಾನಮ್ಮ ವಿ. ಅಂಗಡಿ, ಡಾ. ಮಲ್ಲಿಕಾರ್ಜುನ ಛಬ್ಬಿ ಹಾಸ್ಯ ಕವನ, ಹಾಸ್ಯ ಹನಿಗವನಗಳನ್ನ ವಾಚಿಸಲಿದ್ದಾರೆ. ಸಾಹಿತ್ಯಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಬರುವಂತೆ ಕನ್ನಡ ಸಾಹಿತ್ಯ ಭವನ ಗೌರವಾಧ್ಯಕ್ಷ ರಾಮಚಂದ್ರ ಕಟ್ಟಿ ತಿಳಿಸಿದ್ದಾರೆ.

## ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವವನ್ನ ಪ್ರೋತ್ಸಾಹಿಸಿ: ಕಾಲೇಜು ಶಿಕ್ಷಣ ಇಲಾಖೆಯ ಜಂಟಿ ನಿರ್ದೇಶಕರಾದ ಡಾ.ಕೆ. ರಾಮಕೃಷ್ಣ ರೆಡ್ಡಿ ಕರೆ

ಬೆಂಗಳೂರು: ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವವನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಕರ್ನಾಟಕ ರಾಜ್ಯ ಸರಕಾರ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಶಿಕ್ಷಕರು ಹಾಗೂ ಸಂಸ್ಥೆಗಳು ಇದರ ಉಪಯೋಗವನ್ನು ಪಡೆದುಕೊಳ್ಳಬೇಕು ಎಂದು ಕಾಲೇಜು ಶಿಕ್ಷಣ ಇಲಾಖೆಯ ಜಂಟಿ ನಿರ್ದೇಶಕರಾದ ಡಾ.ಕೆ. ರಾಮಕೃಷ್ಣ ರೆಡ್ಡಿ ಕರೆ ನೀಡಿದರು.

ಬಸವನಗುಡಿಯ ನ್ಯಾಷನಲ್ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಆಯೋಜಿಸಲಾಗಿರುವ "ಎನ್.ಇ.ಎಸ್ ಸೂಪರ್ ನೋವಾ-ಒಂದು ಶೈಕ್ಷಣಿಕ ಮೇಳ" ಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಪಡೆಯುವ ಸಂಧರ್ಭದಲ್ಲಿ ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವವನ್ನು ಬೆಳೆಸುವುದು ಇಂದಿನ ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಸೊಸೈಟಿ, ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರವಿದ್ಯಾ ಮಂಡಳಿ, ಜವಾಹರಲಾಲ್ ನೆಹರು ತಾರಾಲಯ, ವಿಜ್ಞಾನ ಗ್ಯಾಲರಿ ಬೆಂಗಳೂರಿನಂತಹ ಹಲವಾರು ಸಂಸ್ಥೆಗಳ ಮೂಲಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ಅಲ್ಲದೇ, ವೈಜ್ಞಾನಿಕ ಮನೋಭಾವ ಬೆಳೆಸುವ ನಿಟ್ಟಿನಲ್ಲಿ ಹೊಸ ಆಲೋಚನೆಗಳನ್ನ ಅನುಷ್ಠಾನಗೊಳಿಸಿಕೊಳ್ಳಲಾಗುತ್ತಿದೆ. ಶಿಕ್ಷಕರು ಈ ಕಾರ್ಯಕ್ರಮಗಳನ್ನ ಬಳಸಿಕೊಳ್ಳುವ ಮೂಲಕ ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವ ಹೆಚ್ಚಿಸಬೇಕು ಎಂದು ಕರೆ ನೀಡಿದರು.

ನ್ಯಾಷನಲ್ ಎಜುಕೇಷನ್ ಸೊಸೈಟಿಯ ಅಧ್ಯಕ್ಷ ಡಾ.ಎಚ್.ಎನ್. ಸುಬ್ರಮಣ್ಯ ಮಾತನಾಡಿ, ಶತಮಾನದ ಇತಿಹಾಸವುಳ್ಳ ಬಸವನಗುಡಿಯ ನ್ಯಾಷನಲ್ ಎಜುಕೇಷನ್ ಸೊಸೈಟಿಯಿಂದ




ಡಿಸೆಂಬರ್ 8 ಮತ್ತು 9 ರಂದು ಎರಡು ದಿನಗಳ ವೈವಿಧ್ಯಮಯ ಮತ್ತು ಅತ್ಯಾಧುನಿಕ ಉತ್ಸವ "ಎನ್ಇಎಸ್ ಸೂಪರ್ ನೋವಾ-ಒಂದು ಶೈಕ್ಷಣಿಕ ಮೇಳ" ಆಯೋಜಿಸಲಾಗಿದೆ. ಬಸವನಗುಡಿಯ ನ್ಯಾಷನಲ್ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಎಲ್ಲಾ ಶಾಲಾ-ಕಾಲೇಜುಗಳು ಒಟ್ಟಾಗಿ ಈ ಮೇಳದಲ್ಲಿ ಭಾಗವಹಿಸುತ್ತಿವೆ. ವಿಜ್ಞಾನ, ಕಲೆ, ವಾಣಿಜ್ಯ ಮತ್ತು ಕಂಪ್ಯೂಟರ್ ಒಳಗೊಂಡಂತೆ ಎಲ್ಲ ಕ್ಷೇತ್ರಗಳ ಅತ್ಯಾಧುನಿಕ ಬೆಳವಣಿಗೆಗಳ ಬಗ್ಗೆ ವಿವಿಧ ಮಾದರಿಗಳು ಮತ್ತು ಭಿತ್ತಿ ಚಿತ್ರಗಳನ್ನು ವಿದ್ಯಾರ್ಥಿಗಳು ರೂಪಿಸಿ ಪ್ರದರ್ಶಿಸಲಿದ್ದಾರೆ ಎಂದರು.

ಎನ್.ಇ.ಎಸ್ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ವಿ. ವೆಂಟಕಶಿವಾರೆಡ್ಡಿ ಮಾತನಾಡಿ, ಪ್ರದರ್ಶನ ಬೆಳಿಗ್ಗೆ 10 ರಿಂದ ಸಂಜೆ 5 ರವರೆಗೂ ಇರಲಿದೆ. ಎಲ್ಲಾ ವಯೋನದವರ ವೀಕ್ಷಣೆಗೆ ಅವಕಾಶವಿದ್ದು, ಇದು ಸಂಪೂರ್ಣ ಉಚಿತವಾಗಿದೆ. ಈ ಆಧುನಿಕ ಕಾರ್ಯಕ್ರಮದಲ್ಲಿ 200 ಶಾಲೆಗಳಿಂದ 4 ರಿಂದ 5 ಸಾವಿರ ವಿದ್ಯಾರ್ಥಿಗಳು ಭಾಗವಹಿಸುವ ನಿರೀಕ್ಷೆಯಿದೆ. ಈ ಉತ್ಸವದಲ್ಲಿ, ಲೇಸರ್ ಶೋ, ತಾರೆಗಳ ತೋಟದ ತಾರೇಜಮೀನ್ ಪೆರ್ ಪ್ರದರ್ಶನದ ಜೊತೆಗೆ ತಾರಾಲಯದ ಸಹಯೋಗದಲ್ಲಿ ಆದಿತ್ಯ-4 ಮತ್ತಿತರ ಮಾದರಿಗಳು ಇಸ್ರೋ ಸಹಯೋಗದಲ್ಲಿ ಸಂಸ್ಥೆಯ ವಿವಿಧ ರಾಕೆಟ್ ಗ್ರಹದ ಮಾದರಿಗಳು, ಅಗಸ್ತ್ಯಾ ಸಂಸ್ಥೆಯ ಮೊಬೈಲ್ ವಿಜ್ಞಾನ ಪ್ರಯೋಗಾಲಯ, ಭಾರತೀಯ ವಿಜ್ಞಾನ ಸಂಸ್ಥೆಯ ಪರಿಣಿತರು ಡ್ರೋನ್ ಮೂಲಕ ಪ್ರದರ್ಶನ ನೀಡಲಿದ್ದಾರೆ. ಕಾಲೇಜು ಶಿಕ್ಷಣ ಇಲಾಖೆಯಿಂದ ಈ ಮೇಳಕ್ಕೆ ಸೂಕ್ತ ಸೌಲಭ್ಯ ಒದಗಿಸಲಾಗುತ್ತಿದೆ. ಜಿಕೆವಿಕೆ ಸಹಯೋಗದಲ್ಲಿ ಕೃಷಿ ಸಂಬಂಧಿತ ಮಾದರಿಗಳು ಹಾಗೂ ನಿಮ್ಹಾನ್ಸ್ ಸಹಯೋಗದಲ್ಲಿ ಮಿದುಳು ಮ್ಯೂಸಿಯಂ ನಂತಹ ವಿಶೇಷ ಪ್ರದರ್ಶನಗಳನ್ನು ಸಹ ಆಯೋಜಿಸಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಎನ್ ಇ ಎಸ್ ಕಾರ್ಯದರ್ಶಿಗಳಾದ ಬಿ ಎಸ್ ಅರುಣ್ ಕುಮಾರ್, ಎನ್ ಇ ಎಸ್ ಜಯನಗರ ದ ಅಧ್ಯಕ್ಷ ರಾದ ಪಿ ಎಲ್ ವೆಂಕಟರಾಮ ರೆಡ್ಡಿ, ಪದವಿಪೂರ್ವ ಶಿಕ್ಷಣ ಇಲಾಖೆಯ ಬೆಂಗಳೂರು ದಕ್ಷಿಣ ವಿಭಾಗದ ಉಪನಿರ್ದೇಶಕ ಆನಂದ್ ರಾಜ್, ಶಾಲಾ ಕಾಲೇಜಿನ ಪ್ರಾಂಶುಪಾಲರು ಉಪಸ್ಥಿತರಿದ್ದರು.

## ಹಿರಿಯ ನಟಿ ಲೀಲಾವತಿ ಇನ್ನಿಲ್ಲ



ಬೆಂಗಳೂರು: ಸ್ಯಾಂಡಲ್ವುಡ್ನ ಹಿರಿಯ ನಟಿ ಲೀಲಾವತಿ ನಿಧನರಾಗಿದ್ದಾರೆ. ಪುತ್ರ ವಿನೋದ್ ರಾಜ್ ಜೊತೆ ನೆಲಮಂಗಲದ ಸೋಲದೇವನಹಳ್ಳಿಯಲ್ಲಿ ಅವರು ವಾಸವಾಗಿದ್ದರು. ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದ ಅವರು 87ನೇ ವಯಸ್ಸಿನಲ್ಲಿ ಕೊನೆಯುಸಿರು ಎಳೆದಿದ್ದಾರೆ. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಎಲ್ಲರೂ ಪ್ರಾರ್ಥಿಸುತ್ತಿದ್ದಾರೆ. ಕನ್ನಡ ಚಿತ್ರರಂಗದ ಖ್ಯಾತ ನಟಿ ಲೀಲಾವತಿಅವರು50 ವರ್ಷಗಳ ಕಾಲ ಚಿತ್ರರಂಗಕ್ಕೆ ಲೀಲಾವತಿ ಸೇವೆ ಸಲ್ಲಿಸಿದ್ದರು. ಅವರಿಗೆ 86 ವರ್ಷ ವಯಸ್ಸಾಗಿತ್ತು. ರಾಜ್ಕುಮಾರ್, ವಿಷ್ಣುವರ್ಧನ್ ಮುಂತಾದ ನಟರ ಜೊತೆ ಅಭಿನಯಿಸಿ ಅವರು ಸೈ ಎನಿಸಿಕೊಂಡಿದ್ದರು. 600ಕ್ಕೂ ಅಧಿಕ ಸಿನಿಮಾಗಳಲ್ಲಿ ನಟಿಸಿ ಅಪಾರ ಖ್ಯಾತಿ ಗಳಿಸಿದ್ದ ಲೀಲಾವತಿ ನಿಧನಕ್ಕೆ ಅಭಿಮಾನಿಗಳು, ಸೆಲೆಬ್ರಿಟಿಗಳು, ರಾಜಕೀಯ ಗಣ್ಯರು ಕಂಬನಿ ಮಿಡಿದಿದ್ದಾರೆ. ನಟನೆ ಮಾತ್ರವಲ್ಲದೇ ಸಾಮಾಜಿಕ ಕೆಲಸಗಳ ಮೂಲಕವೂ ಲೀಲಾವತಿ ಗುರುತಿಸಿಕೊಂಡಿದ್ದರು.

ಲೀಲಾವತಿ ಅವರ ಅನಾರೋಗ್ಯದ ವಿಷಯ ತಿಳಿದ ಬಳಿಕ ಕನ್ನಡ ಚಿತ್ರರಂಗದ ಅನೇಕರು ಸೋಲದೇವನಹಳ್ಳಿಗೆ ಬಂದು ಆರೋಗ್ಯ ವಿಚಾರಿಸಿದ್ದರು. ಶಿವರಾಜ್ಕುಮಾರ್, ಗೀತಾ ಶಿವರಾಜ್ಕುಮಾರ್, ದರ್ಶನ್, ಅಭಿಷೇಕ್ ಅಂಬರೀಷ್, ಅರ್ಜುನ್ ಸರ್ಜಾ, ಡಿ.ಕೆ. ಶಿವಕುಮಾರ್, ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಅನೇಕರು ಬಂದು ವಿನೋದ್ ರಾಜ್ಗೆ ಧೈರ್ಯ ತುಂಬಿದ್ದರು.

ಲೀಲಾವತಿ ಅವರು ಇನ್ನೂ ಒಂದಷ್ಟು ವರ್ಷಗಳ ಕಾಲ ಆರೋಗ್ಯಯುತವಾಗಿ ಇರಲಿ ಎಂದು ಎಲ್ಲರೂ ಹಾರೈಸಿದ್ದರು. ಆದರೆ ಯಾರ ಪ್ರಾರ್ಥನೆಯೂ ಫಲಿಸಲಿಲ್ಲ. ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದು ಅವರು ಕೊನೆಯುಸಿರು ಎಳೆದಿದ್ದಾರೆ. ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಅಭಿಮಾನಿಗಳು ಮತ್ತು ಸೆಲೆಬ್ರಿಟಿಗಳು ಪ್ರಾರ್ಥಿಸುತ್ತಿದ್ದಾರೆ. ಲೀಲಾವತಿ ಅವರು ಚಿತ್ರರಂಗದಿಂದ ದೂರ ಉಳಿದುಕೊಂಡಿದ್ದರೂ ಕೂಡ ಸಿನಿಮಾ ಕಲಾವಿದರ ಬಗ್ಗೆ ಕಾಳಜಿ ಹೊಂದಿದ್ದರು. ಅನೇಕ ಕಲಾವಿದರಿಗೆ ಮಾಸಾಶನ ಸಿಗುವಂತೆ ಮಾಡಿದ್ದರು. ಪ್ರಾಣಿಗಳ ಬಗ್ಗೆ ಅವರಿಗೆ ಅಪಾರ ಪ್ರೀತಿ ಇತ್ತು. ಅದೇ ಕಾರಣಕ್ಕಾಗಿ ಅವರು ಸ್ವಂತ ಹಣದಲ್ಲಿ ಸೋಲದೇವನಹಳ್ಳಿ ಬಳಿ ಪಶು ಆಸ್ಪತ್ರೆ ನಿರ್ಮಿಸಿದ್ದರು. ಆ ಆಸ್ಪತ್ರೆ ಉದ್ಘಾಟನೆ ಆದ ಕೆಲವೇ ದಿನಗಳ ಬಳಿಕ ಅವರು ಇಹಲೋಕ ತ್ಯಜಿಸಿದ್ದಾರೆ.

## ಸಿದ್ಧರಾಮೇಶ್ವರ ಪ್ರೌಢ, ಪ್ರಾಥಮಿಕ ಶಾಲೆ ಸುರ್ಣ ಮಹೋತ್ಸವ ಉದ್ಘಾಟನೆ

ಬೆಳಗಾವಿ: 'ನಮ್ಮಲ್ಲಿ ಶಿಕ್ಷಣ ಪದ್ಧತಿಯನ್ನೇ ಹಿಂದಿನ ಮುಂದುವರಿಸಿಕೊಂಡು ಬರಲಾಗುತ್ತಿದೆ. ಆದರೆ, ಇಂದಿನ ಬೇಡಿಕೆಗೆ ತಕ್ಕಂತೆ ಶಿಕ್ಷಣ ನೀಡುವ ಪದ್ಧತಿ ಬದಲಾದರೆ, ಮಾತ್ರ ವಿದ್ಯರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ಸಿಗಲು ಸಾಧ್ಯ' ಎಂದು ನಿವೃತ್ತ ಐಎಎಸ್ ಅಧಿಕಾರಿ ಎಸ್.ಎಂ.ಜಮಾದಾರ ಅಭಿ- ಪ್ರಾಯಪಟ್ಟರು.

ಇಲ್ಲಿನ ಆರ್.ಎನ್.ಶೆಟ್ಟಿ ಪಾಲಿಟೆಕ್ನಿ- ಕ್ನಲ್ಲಿ ಶಿವಬಸವ ಸ್ವಾಮೀಜಿ 134ನೇ ಜಯಂತಿ ಮಹೋತ್ಸವ ಅಂಗವಾಗಿ ಗುರುವಾರ ಹಮ್ಮಿಕೊಂಡಿದ್ದ ಸಿದ್ದರಾ. ಮೇಶ್ವರ ಪ್ರೌಢಶಾಲೆ ಹಾಗೂ ಪ್ರಾಥಮಿಕ ಶಾಲೆಯ ಸುರ್ಣ ಮಹೋತ್ಸವ ಕರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಪರ್ಣಗೊಳಿಸಿ, ಕಾಲೇಜಿನ ಮೆಟ್ಟಿಲೇರುವ ವಿದ್ಯರ್ಥಿಗಳ ಸಂಖ್ಯೆ ಶೇ. 73ರಷ್ಟಿದೆ. ಪಿಯುಸಿ, ಸ್ನಾತಕ ಮತ್ತು ಸ್ನಾತಕೋತ್ತರ ಕರ್ಸ್ ಮುಗಿಸಿ, ಹೊರಬೀಳುವ ವಿದ್ಯರ್ಥಿಗಳ ಸಂಖ್ಯೆ ಶೇ. 27ರಷ್ಟಿದೆ. ಈ ಬಗ್ಗೆಯೂ ಶಿಕ್ಷಣ



ಬೆಳಗಾವಿಯ ಆರ್ಎನ್ಶೆಟ್ಟಿ ಪಾಲಿಟೆಕ್ನಿಕ್ನಲ್ಲಿ ಗುರುವಾರ ಹಮ್ಮಿಕೊಂಡಿದ್ದ ಸಿದ್ದರಾಮೇಶ್ವರ ಪ್ರೌಢಶಾಲೆ ಹಾಗೂ ಪ್ರಾಥಮಿಕ ಶಾಲೆಯ ಸುರ್ಣ ಮಹೋತ್ಸವ ಕರ್ಯಕ್ರಮದಲ್ಲಿ 'ಸುರ್ಣ ಸಂಭ್ರಮ' ಸ್ಮರಣ ಸಂಚಿಕೆಯನ್ನು ಡಾ.ಕೆ.ಬಿ.ಗುಡಿಸಿ ಬಿಡುಗಡೆಗೊಳಿಸಿದರು

**ಮುಖ್ಯಾಂಶಗಳು**

ಶಿವಬಸವ ಸ್ವಾಮೀಜಿ ಜಯಂತಿ ಮಹೋತ್ಸವ ಅಂಗವಾಗಿ ಕರ್ಯಕ್ರಮ

'ಸುರ್ಣ ಸಂಭ್ರಮ' ಸ್ಮರಣ ಸಂಚಿಕೆ ಬಿಡುಗಡೆ

ಸಂಸ್ಥೆಗಳು ಗಂಭೀರವಾಗಿ ಚಿಂತನೆ ನಡೆಸಬೇಕಿದೆ' ಎಂದರು.

ರ್ನಾಟಕ ವಿಶ್ವವಿದ್ಯಾಲ, ಯದ ಕುಲಪತಿ ಡಾ.ಕೆ.ಬಿ.ಗುಡಸಿ ಅವರು, 'ಸುರ್ಣ ಸಂಭ್ರಮ' ಸ್ಮರಣ ಸಂಚಿಕೆಯನ್ನು ಬಿಡುಗಡೆಗೊಳಿಸಿದರು. ಈ ಸಂಸ್ಥೆಯಲ್ಲಿ ಸೇವೆ ಸಲ್ಲಿಸಿರುವ

ಶಿಕ್ಷಕರಾದ ಸಿ.ಆರ್ಹಿರೇಮಠ, ಎಸ್. ಆರ್ಹಿರೇಮಠ, ಬಿ.ಜಿ.ಸಾರಂಗಮಠ, ಜಯಶೀಲಾ ಬ್ಯಾಕೋಡ. ಎಸ್. ಜಿ.ತಾರಳಿ, ಎಸ್.ಬಿ.ತಲ್ಲೂರ, ಜೆ.ಸಿ.ಕಿ ಹುಣಶ್ಯಾಳ ಪಿ.ಜಿಯ ಸಿದ್ದಲಿಂಗ ಕೈವ- ಲ್ಯಾಶ್ರಮದ ನಿಜಗುಣ ದೇವರು, ಶಾಲೆಯ ಹಳೆಯ ವಿದ್ಯರ್ಥಿಗ ಳಾದ ವಿಧಾನ ಪರಿಷತ್ ಸದಸ್ಯ ಶರಣಗೌಡ ಪಾಟೀಲ ಬಯ್ಯಾಪುರ, ಬಾಗಲಕೋಟೆಯ ಹೆಚ್ಚುವರಿ ವಿಶೇಷ ಭೂಸ್ವಾಧೀನ ಅಧಿಕಾರಿ ಶಶಿಧರ ಬಗಲಿ, ಅಣ್ಣಾರಾಯ ಬಿರಾದಾರ, ಮಹಾಂತೇಶ ಬಿರಾದರ, ಕೆ.ಬಿ.ಹಿರೇಮಠ, ಡಾ.ಗುರು ದೇವಿ ಹುಲೆಪ್ಪನವರಮಠ ಇದ್ದರು.

ಗದುಗಿನ ತೋಂಟದರ್ಯ ಮಠದ ಡಾ.ತೋಂಟದ ಸಿದ್ಧರಾಮ ಸ್ವಾಮೀಜಿ, ಹುಬ್ಬಳ್ಳಿಯ ಮೂರುಸಾವಿರ ಮಠದ ಡಾ.ಗುರುಸಿದ್ಧ ರಾಜಯೋಗೀಂದ್ರ ಸ್ವಾಮೀಜಿ, ಹಂದಿಗುದದ ವಿರಕ್ತಮಠದ ಶಿವಾನಂದ ಸ್ವಾಮೀಜಿ, ಚನ್ನಮ್ಮನ ಕಿತ್ತೂರಿನ ರಾಜಗುರು ಸಂಸ್ಥಾನ ಕಲ್ಮಠದ ಮಡಿವಾಳ ರಾಜಯೋಗೀಂದ್ರ ಸ್ವಾಮೀಜಿ, ನಾಗನೂರು ರುದ್ರಾಕ್ಷಿಮ- ಠದ ಡಾ.ಅಲ್ಲಮಪ್ರಭು ಸ್ವಾಮೀಜಿ,

ಅಶೋಕ ಮಳಗಲಿ ಸ್ವಾಗತಿಸಿದರು. ಪ್ರೊ. ಮಂಜುನಾಥ ಶರಣಪ್ಪನ- ವರ ಮತ್ತು ರಾಜಶೇಖರ ಪಾಟೀಲ್ ಕರ್ಯಕ್ರಮ ನರ್ವಹಿಸಿದರು. ಪ್ರೊ.ಎ.ಕೆ.ಪಾಟೀಲ ವಂದಿಸಿದರು.

ಸಂಪುಟ: 4 ಸಂಚಿಕೆ: 260 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089